ಸಂಪುಟ: 06 ಸಂಚಿಕೆ: 72 ಪುಟಗಳು: 08 ಮಂಗಳವಾರ 26 ಮೇ 2026

www.udayavahini.in epaper.udayavahini.in Udaya vahini news Udaya vahini news Udayavahini news youGÓ...qbe udayavahininews@gmail.

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**

ಪ್ರತಿಯೊಂದು ಕತ್ತಲೆ ಮನೆಗು ಬೆಳಕಿನ ದಾರಿಗಾಗಿ ಒಂದು ಕಿಟಕಿ ಇರುತ್ತದೆ ಅದೇ ರೀತಿ ನಮ್ಮ ಕಷ್ಟದ ಜೀವನದಲ್ಲೂ ಸುಖದ ದಾರಿಗಾಗಿ ಒಂದು ದಾರಿ ಇದ್ದೆ ಇರುತ್ತದೆ.

# ಉದಯ ವಾಹಿನಿ

UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ವಾಹನ ಸವಾರರಿಗೆ ಮತ್ತೆ ಬರೆ

• ಉದಯವಾಹಿನಿ, ಬೆಂಗಳೂರು

ದೇಶಾದ್ಯಂತ ವಾಹನ ಸವಾರರಿಗೆ ಮತ್ತೆ ಇಂಧನ ಬೆಲೆ ಏರಿಕೆಯ ಬಿಸಿ ತಟ್ಟಿದೆ. ಪೆಟ್ರೋಲ್ ಹಾಗೂ ಡೀಸೆಲ್ ದರವನ್ನು ಕೇಂದ್ರ ಸರ್ಕಾರ ಮತ್ತೊಮ್ಮೆ ಹೆಚ್ಚಿಸಿದ್ದು, ಪರಿಷ್ಕೃತ ದರಗಳು ತಕ್ಷಣದಿಂದಲೇ ಜಾರಿಗೆ ಬಂದಿವೆ. ಕಳೆದ 11 ದಿನಗಳಲ್ಲಿ ಇದು ನಾಲ್ಕನೇ ಬಾರಿ ದರ ಏರಿಕೆಯಾಗಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ.

ಇಂದಿನ ಪರಿಷ್ಕೃತ ದರ ಪ್ರಕಾರ, ಪ್ರತೀ ಲೀಟರ್ ಪೆಟ್ರೋಲ್ ದರದಲ್ಲಿ 2.61 ರೂಪಾಯಿ ಹಾಗೂ ಡೀಸೆಲ್ ದರದಲ್ಲಿ 2.71 ರೂಪಾಯಿ ಹೆಚ್ಚಳ ಮಾಡಲಾಗಿದೆ. ಇದರೊಂದಿಗೆ ದೇಶದ ಪ್ರಮುಖ ನಗರಗಳಲ್ಲಿ ಪೆಟ್ರೋಲ್ ದರ ಮತ್ತಷ್ಟು ಏರಿಕೆಯಾಗಿದೆ. ಬೆಂಗಳೂರಿನಲ್ಲಿ ಇಂದು ಲೀಟರ್ ಪೆಟ್ರೋಲ್ ದರ 110.61 ರೂಪಾಯಿಗೆ ಏರಿಕೆಯಾಗಿದ್ದು,



ಡೀಸೆಲ್ ದರ 98.54 ರೂಪಾಯಿಯಾಗಿದೆ. ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ಪೆಟ್ರೋಲ್ ದರ 100 ರೂಪಾಯಿ ಗಡಿ ದಾಟಿದ್ದು, ಲೀಟರ್‌ಗೆ 102.12 ರೂಪಾಯಿ ದಾಖಲಾಗಿದೆ. ಡೀಸೆಲ್ ದರ 95.20 ರೂಪಾಯಿಯಾಗಿದೆ.

ಇನ್ನು ಮುಂಬೈನಲ್ಲಿ ಪೆಟ್ರೋಲ್ ದರ 111.21 ರೂಪಾಯಿ ಹಾಗೂ ಡೀಸೆಲ್ ದರ 97.83 ರೂಪಾಯಿಯಾಗಿದೆ. ಕೋಲ್ಕತ್ತಾದಲ್ಲಿ ಪೆಟ್ರೋಲ್ ದರ 113.47 ರೂಪಾಯಿ ಮತ್ತು ಡೀಸೆಲ್ ದರ 99.82 ರೂಪಾಯಿ ದಾಖಲಾಗಿದೆ. ಚೆನ್ನೈನಲ್ಲಿ ಪೆಟ್ರೋಲ್ ದರ 107.77 ರೂಪಾಯಿ ಹಾಗೂ ಡೀಸೆಲ್ ದರ 99.55 ರೂಪಾಯಿಗೆ ಏರಿಕೆಯಾಗಿದೆ.

ಕಳೆದ ಕೆಲವು ದಿನಗಳಿಂದ ಹಂತ ಹಂತವಾಗಿ ಇಂಧನ ದರ ಏರಿಕೆಯಾಗುತ್ತಿದೆ. ಮೇ 15ರಂದು ಪೆಟ್ರೋಲ್ ದರವನ್ನು 3.25 ರೂಪಾಯಿ ಹಾಗೂ ಡೀಸೆಲ್ ದರವನ್ನು 3.11 ರೂಪಾಯಿ ಹೆಚ್ಚಿಸಲಾಗಿತ್ತು. ಬಳಿಕ ಮೇ 19ರಂದು ಪೆಟ್ರೋಲ್ 99 ಪೈಸೆ ಮತ್ತು ಡೀಸೆಲ್ 94 ಪೈಸೆ ಏರಿಕೆಯಾಗಿತ್ತು. ಮೇ 23ರಂದು ಮತ್ತೆ ಪೆಟ್ರೋಲ್ ಹಾಗೂ ಡೀಸೆಲ್ ದರ ತಲಾ 95 ಪೈಸೆ ಹೆಚ್ಚಳ ಕಂಡಿತ್ತು.

ಇದೀಗ ಇಂದು ಮತ್ತೊಮ್ಮೆ ಭಾರೀ ಏರಿಕೆ ಮಾಡಲಾಗಿದೆ. ನಿರಂತರ ಇಂಧನ ದರ ಏರಿಕೆಯಿಂದ ಸಾರಿಗೆ ವೆಚ್ಚ ಹೆಚ್ಚಳವಾಗುವ ಸಾಧ್ಯತೆ ಇದ್ದು, ಅಗತ್ಯ ವಸ್ತುಗಳ ಬೆಲೆಯ ಮೇಲೂ ಪರಿಣಾಮ ಬೀರುವ ಆತಂಕ ವ್ಯಕ್ತವಾಗಿದೆ.

## 7 ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಣೆ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಹಲವೆಡೆ ಇಂದಿನಿಂದ ಕೆಲವು ದಿನಗಳ ಕಾಲ ಗುಡುಗು, ಮಿಂಚು ಹಾಗೂ ಬಿರುಗಾಳಿ ಸಹಿತ ಮಳೆಯಾಗುವ ಸಾಧ್ಯತೆ ಇದ್ದು, ಏಳು ಜಿಲ್ಲೆಗಳಿಗೆ ಯಲ್ಲೋ ಅಲರ್ಟ್ ಘೋಷಿಸಲಾಗಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಉತ್ತರ ಒಳನಾಡಿನ ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳ ಕೆಲವೆಡೆ ಹಾಗೂ ದಕ್ಷಿಣ ಒಳನಾಡಿನ ಶಿವಮೊಗ್ಗ, ಚಿಕ್ಕಮಗಳೂರು, ಚಿತ್ರದುರ್ಗ ಮತ್ತು ತುಮಕೂರು ಜಿಲ್ಲೆಗಳಲ್ಲಿಯೂ ಭಾರಿ ಮಳೆ ನಿರೀಕ್ಷಿಸಲಾಗಿದ್ದು, ಮುನ್ನೆಚ್ಚರಿಕೆ ಕ್ರಮವಾಗಿ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ.

ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳ ಬಹುತೇಕ ಎಲ್ಲಾ ಭಾಗಗಳಲ್ಲಿ ಸಾಧಾರಣ ಮಳೆ ನಿರೀಕ್ಷಿಸಲಾಗಿದೆ. ಉತ್ತರ ಒಳನಾಡಿನ ಬಾಗಲಕೋಟೆ, ಬೆಳಗಾವಿ, ಬೀದರ್, ಕಲಬುರಗಿ, ಕೊಪ್ಪಳ, ರಾಯಚೂರು, ವಿಜಯಪುರ ಮತ್ತು ಯಾದಗಿರಿ ಜಿಲ್ಲೆಗಳ ಕೆಲವು ಭಾಗಗಳಲ್ಲಿ ಗಂಟೆಗೆ 50–60 ಕಿ.ಮೀ ವೇಗದ ಬಿರುಗಾಳಿಯೊಂದಿಗೆ ಸಾಧಾರಣ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮಾಹಿತಿ ನೀಡಿದೆ.

## ಪೋಕ್ಸೋ ಪ್ರಕರಣ : ತನಿಖಾಧಿಕಾರಿ ಅಲಭ್ಯ, ವಚನಾನಂದ ಸ್ವಾಮೀಜಿ ವಿಚಾರಣೆ ಮುಂದೂಡಿಕೆ

• ಉದಯವಾಹಿನಿ, ಬೆಂಗಳೂರು

ಆತನಿಖಾಧಿಕಾರಿ ಅಲಭ್ಯರಾದ ಹಿನ್ನೆಲೆಯಲ್ಲಿ ಹರಿಹರ ಪಂಚಮಸಾಲಿ ಮಠದ ವಚನಾನಂದ ಸ್ವಾಮೀಜಿ ಅವರ ವಿಚಾರಣೆಯನ್ನು ಮುಂದೂಡಿಕೆ ಮಾಡಲಾಗಿದೆ.ಸ್ವಾಮೀಜಿ ಅವರು ಇಂದು ಹರಿಹರ ಗ್ರಾಮಾಂತರ ಪೊಲೀಸ್ ಠಾಣೆಗೆ ಹಾಜರಾಗಬೇಕಾಗಿತ್ತು. ಬೇರೆ ಪ್ರಕರಣ ಸಂಬಂಧ ತನಿಖಾಧಿಕಾರಿ ಹರಿಹರ ಗ್ರಾಮಾಂತರ ಪಿಐ ಸುರೇಶ್ ಸಗರಿ ಅವರು ಕೇಂದ್ರ ಸ್ಥಾನದಿಂದ ಹೊರ ಹೋಗಿರುವ ಕಾರಣ ವಿಚಾರಣೆ ಮುಂದೂಡಿಕೆ ಆಗಿದೆ. ವಿಚಾರಣೆಗೆ ಸ್ವಾಮೀಜಿ ಸಹಕರಿಸಬೇಕೆಂದು ಇನ್ಸ್‌ಪೆಕ್ಟರ್ ಅವರು ಲಿಖಿತ ಪತ್ರವನ್ನು ಸ್ವಾಮೀಜಿಗೆ ರವಾನಿಸಿದ್ದರು. ಈ ಹಿಂದೆ ಹರಿಹರದ ಪಂಚಮಸಾಲಿ ಪೀಠದ ವಚನಾನಂದ ಸ್ವಾಮೀಜಿ ವಿರುದ್ಧ ಪೋಕ್ಸೋ ಪ್ರಕರಣ ದಾಖಲಾಗಿತ್ತು.

ಹರಿಹರ ಗ್ರಾಮಾಂತರ ಠಾಣೆಯಲ್ಲಿ ಬೆಳಗ್ಗೆ 10 ಗಂಟೆಗೆ ಮೂರನೇ ಬಾರಿ ವಿಚಾರಣೆಗೆ ವಚನಾನಂದ ಸ್ವಾಮೀಜಿ ಹಾಜರಾಗಬೇಕಿತ್ತು. ಮಠದ ಹಾಸ್ಟೆಲ್ ವಿದ್ಯಾರ್ಥಿಗಳ ಮೇಲೆ ದೈಹಿಕ ಹಿಂಸೆ ನೀಡಿದ್ದಾರೆ ಎಂದು ಪೋಷಕರು ದೂರು ದಾಖಲು ಮಾಡಿದ್ದರು. ಗದಗ ಜಿಲ್ಲೆಯಲ್ಲಿ ದೂರು ದಾಖಲಾಗಿತ್ತು. ಅಲ್ಲಿಂದ ಹರಿಹರ ಗ್ರಾಮಾಂತರ ಠಾಣೆಗೆ ವರ್ಗಾವಣೆ ಮಾಡಲಾಗಿತ್ತು. ಸಿಪಿಐ ಸುರೇಶ್ ಸಗರಿ ನೇತೃತ್ವದಲ್ಲಿ ತನಿಖಾಧಿಕಾರಿ ಪಿಎಸ್ಐ ಜಯರತ್ನಮ್ಮ ನೇತೃತ್ವದಲ್ಲಿ ವಿಚಾರಣೆ ನಡೆದಿದೆ.

## ಬಿಡದಿ ಟೌನ್‌ಶಿಪ್ ಕುರಿತ ಚರ್ಚೆಗೆ ಸಿದ್ಧ

• ಉದಯವಾಹಿನಿ, ಬೆಂಗಳೂರು



ಬಿಡದಿ ಟೌನ್‌ಶಿಪ್ ಕುರಿತ ಚರ್ಚೆಗೆ ಡಿ.ಕೆ. ಶಿವಕುಮಾರ್ ಅವರು ಸವಾಲು ಹಾಕಿದ್ದರು. ನಾನು ಚರ್ಚೆಗೆ ಸಿದ್ಧನಿದ್ದೇನೆ ಎಂದು ಎಚ್.ಡಿ.ಕುಮಾರಸ್ವಾಮಿ ಹೇಳಿದರು. ಬಿಡದಿ ಚರ್ಚೆ ಕುರಿತು ಸುದ್ದಿಗಾರರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ನಾನು ಸಿದ್ಧನಿದ್ದೇನೆ. ಅವರಿಗೆ ಬಿಡುವಿಲ್ಲ ರೇಟ್ ಫಿಕ್ಸ್, ವಸೂಲಿ ಫಿಕ್ಸ್ ಮಾಡುತ್ತಿದ್ದಾರೆ. ಬಿಡುವು ಮಾಡಿಕೊಂಡು ಚರ್ಚೆಗೆ ಬರಲಿ' ಎಂದು ಹೇಳಿದರು.ಇದಕ್ಕೂ ಮುನ್ನ ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯ ನಾಯಕರ ಜತೆ ಕುಮಾರಸ್ವಾಮಿ ಸಭೆ ನಡೆಸಿದರು. ಜಿಬಿವ ಪಾಲಿಕೆಗಳ ಚುನಾವಣೆಗೆ ಸಿದ್ಧತೆ ಮಾಡಿಕೊಳ್ಳಿ ಎಂದು ಸೂಚಿಸಿದರು .

## ಪೂರ್ವ ಮುಂಗಾರು ಚುರುಕುಗೊಂಡ ಬೆನ್ನಲ್ಲೇ ಗರಿಗೆದರಿದ ಕೃಷಿ ಚಟುವಟಿಕೆ


• ಉದಯವಾಹಿನಿ, ಬೆಂಗಳೂರು

ರಾಜ್ಯದ ವಿವಿಧೆಡೆ ಪೂರ್ವ ಮುಂಗಾರು ಚುರುಕುಗೊಂಡಿದ್ದು, ಕೃಷಿ ಚಟುವಟಿಕೆಗಳು ಗರಿಗೆದರಿವೆ.ಆದರೆ ಉಳುಮೆ ಮಾಡಲು ಟ್ರ್ಯಾಕ್ಟರ್‌ಗಳಿಗೆ ಡೀಸೆಲ್ ಸಿಗದೆ ಮಾಲೀಕರು ಹಾಗೂ ರೈತರು ಪರದಾಡುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ.

ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಯುದ್ಧದಿಂದಾಗಿ ಇಂಧನ ಕೊರತೆ ಉಂಟಾಗಿದ್ದು, ದಿನದಿಂದ ದಿನಕ್ಕೆ ತೈಲ ಬೆಲೆ ಏರಿಕೆಯಾಗುತ್ತಿದ್ದು, ಪೂರೈಕೆಯಲ್ಲಿ ಭಾರೀ ವ್ಯತ್ಯಯವಾಗಿದೆ. ತುಮಕೂರು, ಕೋಲಾರ, ಚಿಕ್ಕಬಳ್ಳಾಪುರ, ಮಂಡ್ಯ, ಮೈಸೂರು, ರಾಮನಗರ, ಬೆಂಗಳೂರು ಗ್ರಾಮಾಂತರ, ಹುಬ್ಬಳ್ಳಿ, ಧಾರವಾಡ, ಬೆಳಗಾವಿ, ದಾವಣಗೆರೆ, ಹಾಸನ, ಚಿಕ್ಕಮಗಳೂರು ಸೇರಿದಂತೆ ಮತ್ತಿತರ ಜಿಲ್ಲೆಗಳಲ್ಲಿ ಮಳೆಯಾಗುತ್ತಿದ್ದು, ಮುಂಗಾರು ಹಂಗಾಮು ಚಟುವಟಿಕೆಗಳು ಪ್ರಾರಂಭವಾಗಿವೆ. ಕೃಷಿಭೂಮಿಯನ್ನು ಹದ ಮಾಡಿಕೊಳ್ಳಲು ರೈತರು ಈಗಿನಿಂದಲೇ ಸಿದ್ಧತೆ ಮಾಡಿಕೊಳ್ಳುತ್ತಿದ್ದಾರೆ. ಆದರೆ ಟ್ರ್ಯಾಕ್ಟರ್‌ಗಳಿಗೆ ಡೀಸೆಲ್ ಸಿಗದೆ ಪರದಾಡುವಂತಾಗಿದೆ. ಪೆಟ್ರೋಲ್ ಬಂಕ್‌ಗಳ ಮುಂದೆ ಕ್ಯಾನ್‌ಗಳನ್ನು ಹಿಡಿದು ಸರದಿ ಸಾಲಿನಲ್ಲಿ ನಿಂತ ದೃಶ್ಯಗಳು ಗದಗ, ಹಾವೇರಿ, ಬೆಳಗಾವಿ, ಬೀದರ್ ಭಾಗಗಳಲ್ಲಿ ಕಂಡುಬಂದವು.

# ಹೈಕಮಾಂಡ್ ಬುಲಾವ್ ಸಿದ್ದುಗೆ ಪಲಾವ್?

**ಕುರ್ಚಿ ಜಟಾಪಟಿ**



• ಉದಯವಾಹಿನಿ, ಬೆಂಗಳೂರು

ನಾಯಕತ್ವ ಬದಲಾವಣೆ ಮತ್ತು ಸಂಪುಟ ಪುನಾರಚನೆ ಬಗ್ಗೆ ರಾಜ್ಯ ಕಾಂಗ್ರೆಸ್‌ನಲ್ಲಿ ಬಿಸಿಬಿಸಿ ಚರ್ಚೆಯ ನಡುವೆಯೇ ಸಿಎಂ ಸಿದ್ದರಾಮಯ್ಯಗೆ ಹೈಕಮಾಂಡ್‌ನಿಂದ ಬುಲಾವ್ ಬಂದಿರೋದು ಸಾಕಷ್ಟು ಊಹಾಪೋಹಗಳಿಗೆ ಕಾರಣವಾಗಿದೆ. ಅಧಿಕಾರ ಹಂಚಿಕೆ, ಸಚಿವ ಸಂಪುಟ ಪುನರ್‌ರಚನೆ, ವಿಧಾನಪರಿಷತ್ ಮತ್ತು ರಾಜ್ಯಸಭೆ ಚುನಾವಣೆಗಳ ಅಭ್ಯರ್ಥಿಗಳ ಆಯ್ಕೆ ಕುರಿತಂತೆ ಚರ್ಚೆ ನಡೆಸಲು ಕಾಂಗ್ರೆಸ್ ಹೈಕಮಾಂಡ್ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ದೆಹಲಿಗೆ ಬರುವಂತೆ ಆಹ್ವಾನ ನೀಡಿದ ಬೆನ್ನಲ್ಲೇ ರಾಜಕೀಯ ಚಟುವಟಿಕೆಗಳು ಗರಿಗೆದರಿವೆ. ಪ್ರತ್ಯೇಕ ಸಭೆಗಳು, ದೆಹಲಿಯಾತ್ರೆ ಮತ್ತೆ ಶುರುವಾಗಿವೆ.

ಹೈಕಮಾಂಡ್‌ನ ಆದೇಶದ ಮೇರೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮೇ 26ರಂದು ದೆಹಲಿಗೆ ತೆರಳುತ್ತಿದ್ದಾರೆ. ಸಿದ್ದರಾಮಯ್ಯ ಮತ್ತು ಡಿ.ಕೆ.ಶಿವಕುಮಾರ್ ಇಬ್ಬರಿಗೂ ಏಕಕಾಲಕ್ಕೆ ಅಹ್ವಾನ ನೀಡಲಾಗಿದೆ ಎಂದು ಹೇಳಲಾಗಿತ್ತು. ಆದರೆ ಡಿ.ಕೆ.ಶಿವಕುಮಾರ್ ಅವರು ತಮಗೆ ಆಹ್ವಾನ ಇಲ್ಲ, ಹೈಕಮಾಂಡ್‌ನ ಕರೆಯ ಬಗ್ಗೆ ಮಾಹಿತಿ ಇಲ್ಲ ಎಂದು ಹೇಳಿದ್ದಾರೆ.

ಸಿದ್ದರಾಮಯ್ಯ ಅವರ ಏಕಾಂಗಿ ದೆಹಲಿಯಾತ್ರೆ ತೀವ್ರ ಕುತೂಹಲ ಕೆರಳಿಸಿದೆ. ಆದರೆ ಮೂಲಗಳ ಪ್ರಕಾರ ಆಹ್ವಾನ ಇಲ್ಲದೇ ಇದ್ದರೂ ಡಿ.ಕೆ.ಶಿವಕುಮಾರ್ ಅವರು ಸ್ವಯಂ ಪ್ರೇರಿತವಾಗಿ ಸಿದ್ದರಾಮಯ್ಯ ಅವರಿಗಿಂತ ಮೊದಲೇ ದೆಹಲಿಗೆ ತೆರಳುತ್ತಿದ್ದಾರೆ ಎನ್ನಲಾಗಿದೆ.

ನಾಯಕತ್ವ ಬದಲಾವಣೆಗೆ ಪಟ್ಟು ಹಿಡಿದಿರುವ ಡಿ.ಕೆ.ಶಿವಕುಮಾರ್ ಸಚಿವ ಸಂಪುಟ ಪುನರ್ ರಚನೆಗೆ ಅನುಮತಿ ನೀಡುವ ಮುನ್ನ ನಾಯಕತ್ವ ವಿವಾದವನ್ನು ಇತ್ಯರ್ಥ ಪಡಿಸಬೇಕೆಂದು ಹೈಕಮಾಂಡ್‌ನ ಮೇಲೆ ಒತ್ತಡ ಹೇರಲಿದ್ದಾರೆ.



ಮೂಲಗಳ ಪ್ರಕಾರ ಸಿದ್ದರಾಮಯ್ಯ ಅವರನ್ನು ಹೈಕಮಾಂಡ್ ದೆಹಲಿಗೆ ಆಹ್ವಾನಿಸಿರುವುದು ರಾಜ್ಯಸಭೆ ಮತ್ತು ವಿಧಾನಪರಿಷತ್ ಸದಸ್ಯರನುನ ಚುನಾಯಿಸುವ ಚುನಾವಣೆ ಸಂಬಂಧಪಟ್ಟಂತೆ ಅಭ್ಯರ್ಥಿಗಳ ಆಯ್ಕೆ ಕುರಿತು ಚರ್ಚಿಸಲು ಎಂದು ಹೇಳಲಾಗಿದೆ.ಇದೇ ವೇಳೆ ಸಿದ್ದರಾಮಯ್ಯ ಅವರು ಸಚಿವ ಸಂಪುಟ ಪುನರ್‌ರಚನೆಗೆ ಅವಕಾಶ ನೀಡುವಂತೆ ಹೈಕಮಾಂಡ್ ಬಳಿ ಮನವಿ ಮಾಡಲಿದ್ದಾರೆ ಎಂದು ತಿಳಿದು ಬಂದಿದೆ. ಬಹುತೇಕ ಸಿದ್ದರಾಮಯ್ಯ ಅವರ ಬೇಡಿಕೆಗೆ ಹೈಕಮಾಂಡ್ ಸಮ್ಮತಿಸಬಹುದು ಎಂದೂ ಹೇಳಲಾಗುತ್ತಿದ್ದು, ಒಂದು ವೇಳೆ ಸಚಿವ ಸಂಪುಟ ಪುನರ್ ರಚನೆಯಾದರೆ ನಾಯಕತ್ವದ ವಿವಾದ ಬಹುತೇಕ ಅಂತ್ಯಗೊಳ್ಳಲಿದೆ. ಹೀಗಾಗಿಯೇ ಡಿ.ಕೆ.ಶಿವಕುಮಾರ್ ಅವರು ಅಸಮಾಧಾನದಿಂದ ಇರುವಂತೆ ಕಾಣಿಸಿಕೊಳ್ಳುತ್ತಿದ್ದಾರೆ. ಎಸ್‌ಐಆರ್ ಕುರಿತು ಕಾಂಗ್ರೆಸ್ ಸಭೆ ನಡೆಯುತ್ತಿದ್ದ ವೇಳೆಯಲ್ಲೇ ರಾಷ್ಟ್ರೀಯ ನಾಯಕರು ಸಿದ್ದರಾಮಯ್ಯ ಅವರಿಗೆ ಕರೆ ಮಾಡಿ, ದೆಹಲಿಗೆ ಬರುವಂತೆ ಅಹ್ವಾನ ನೀಡಿದ್ದರು. ಆದರೆ ಪಕ್ಕದಲ್ಲೇ ಕುಳಿತ ಡಿ.ಕೆ. ಶಿವಕುಮಾರ್ ಅವರಿಗೆ ಯಾವುದೇ ಅಹ್ವಾನ ಸಿಗಲಿಲ್ಲ ಎಂದು ಹೇಳಲಾಗಿದೆ. ರಾಜ್ಯದಲ್ಲಿ ತಾವು ಪಕ್ಷದ ಸಂಘಟನೆ ಹಾಗೂ ಚುನಾವಣೆಯ ಸಿದ್ಧತೆ ಬಗ್ಗೆ ಹೆಚ್ಚು ಗಮನ ಹರಿಸಿದ್ದು, ಉಳಿದಂತೆ ಯಾವ ವಿಚಾರದ ಬಗ್ಗೆಯೂ ತಮಗೆ ಆಸಕ್ತಿಯಿಲ್ಲ ಎಂದು ಡಿ.ಕೆ.ಶಿವಕುಮಾರ್ ಪರೋಕ್ಷವಾದ ಅಸಮಾಧಾನ ಹೊರ ಹಾಕಿದ್ದಾರೆ. ಇದರ ನಡುವೆಯೂ ತಮ ವೈಯಕ್ತಿಯ ಕೆಲಸ ಹಾಗೂ ಇಲಾಖೆಯ ಜವಬ್ದಾರಿ ನಿರ್ವಹಣೆ ನೆಪದಲ್ಲಿ ಡಿ.ಕೆ.ಶಿವಕುಮಾರ್ ದೆಹಲಿಗೆ ಭೇಟಿ ನೀಡುತ್ತಿದ್ದಾರೆ ಎನ್ನಲಾಗಿದೆ. ಸಿದ್ದರಾಮಯ್ಯ ಅವರಿಗೂ ಮುಂಚೆ ದೆಹಲಿಗೆ ತೆರಳಿ ಹೈಕಮಾಂಡ್ ನಾಯಕರನ್ನು ಭೇಟಿ ಮಾಡಲಿರುವ ಡಿ.ಕೆ. ಶಿವಕುಮಾರ್, ತಮ ಪರವಾಗಿ ವಾದ ಮಂಡಿಸಲಿದ್ದಾರೆ ಎಂದು ಹೇಳಲಾಗುತ್ತಿದೆ. ಜೂನ್ 18ಕ್ಕೆ ರಾಜ್ಯಸಭೆಯ 4 ಸ್ಥಾನಗಳಿಗೆ ಚುನಾವಣಾ ನಿಗದಿಯಾಗಿದೆ. ಅದೇ ರೀತಿ ಇದೇ ತಿಂಗಳ 30ಕ್ಕೆ 7 ಮಂದಿ ವಿಧಾನ ಪರಿಷತ್ ಸದಸ್ಯರು ನಿವೃತ್ತರಾಗುತ್ತಿದ್ದು, ವಿಧಾನಸಭೆಯಿಂದ ಮತ್ತೆ 7 ಮಂದಿಯನ್ನು ಚುನಾಯಿಸಬೇಕಿದೆ. ಮುಂದಿನ ತಿಂಗಳು 21ಕ್ಕೆ 5 ಮಂದಿ ನಾಮ ನಿರ್ದೇಶಿತ ಸದಸ್ಯರ ಸ್ಥಾನಗಳು ಖಾಲಿಯಾಗುತ್ತಿವೆ. ಈ ಎಲ್ಲಾ ಸ್ಥಾನಗಳಿಗೂ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಸಲುವಾಗಿ ಹೈಕಮಾಂಡ್ ಸಿದ್ದರಾಮಯ್ಯ ಅವರ ಜೊತೆ ಚರ್ಚೆ ನಡೆಸಲಿದೆ ಎಂದು ಮೂಲಗಳು ತಿಳಿಸಿವೆ.

### ಸಿಎಂ-ಡಿಸಿಎಂ ನಡುವೆ ಮುನಿಸು

ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನಡುವೆ ಮತ್ತೆ ಮುಸುಕಿನ ಗುದ್ದಾಟ ಕಂಡು ಬರುತ್ತಿದೆ. ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ ವಿರೋಧಿಸಿ ಕೆಪಿಸಿಸಿ ಕಚೇರಿಯಲ್ಲಿ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ಜಂಟಿ ಸುದ್ದಿಗೋಷ್ಠಿಯನ್ನು ಕರೆದಿದ್ದರು. ಆದರೆ ಅದರಲ್ಲಿ ಭಾಗವಹಿಸುವ ಬಗ್ಗೆ ಮುಖ್ಯಮಂತ್ರಿಯವರ ಕಾರ್ಯಸೂಚಿ ಪಟ್ಟಿಯಲ್ಲಿ ಮಾಹಿತಿ ಇರಲಿಲ್ಲ. ಸುರ್ಜೇವಾಲ ಅವರ ಒತ್ತಡದಿಂದಾಗಿ ಸಿದ್ದರಾಮಯ್ಯ ಅನಿವಾರ್ಯವಾಗಿ ಪತ್ರಿಕಾಗೋಷ್ಠಿಗೆ ಆಗಮಿಸಿದರು. ತಡವಾಗಿ ಆಗಮಿಸಿದ ಡಿ.ಕೆ.ಶಿವಕುಮಾರ್ ಅವರು ಮುಖ್ಯಮಂತ್ರಿಯವರನ್ನು ಸೌಜನ್ಯಕ್ಕಾದರೂ ಮಾತನಾಡಿಸುವ ಗೋಜಿಗೆ ಹೋಗಲಿಲ್ಲ.

### ಡಿಕೆ ಸಹೋದರರ ಸಭೆ

ಸಿದ್ದರಾಮಯ್ಯ ಅವರಿಗೆ ಹೈಕಮಾಂಡ್ ಬುಲಾವ್ ನೀಡಿದ ಬೆನ್ನಲ್ಲೇ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಮ ಸಹೋದರ ಹಾಗೂ ಮಾಜಿ ಸಂಸದ ಡಿ.ಕೆ.ಸುರೇಶ್ ಅವರ ಜೊತೆ ನಿನ್ನೆ ರಾತ್ರಿ ಮಹತ್ವದ ಮಾತುಕತೆ ನಡೆಸಿದ್ದಾರೆ. ಹೈಕಮಾಂಡ್ ಅಹ್ವಾನದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಆಪ್ತ ಹಾಗೂ ಹಿರಿಯ ಸಚಿವರ ಜೊತೆ ಸಭೆ ನಡೆಸಿದ್ದಾರೆ. ಹೈಕಮಾಂಡ್ ನಾಯಕರ ಮುಂದೆ ಯಾವೆಲ್ಲಾ ವಿಷಯಗಳನ್ನು ಮಂಡಿಸಬೇಕು? ಸಂಪುಟ ಪುನರ್ ರಚನೆ, ನಾಯಕತ್ವ ಬದಲಾವಣೆ, ರಾಜ್ಯಸಭೆ ಹಾಗೂ ವಿಧಾನ ಪರಿಷತ್ತಿನ ಅಭ್ಯರ್ಥಿಗಳ ಆಯ್ಕೆ ಸಂಬಂಧಪಟ್ಟಂತೆ ತಮ ನಿಲುವುಗಳನ್ನು ಸಿದ್ದರಾಮಯ್ಯ ಸಚಿವರ ಜೊತೆ ಹಂಚಿಕೊಂಡಿದ್ದಾರೆ ಎನ್ನಲಾಗಿದೆ.

### ನಾಯಕತ್ವದ ಗೊಂದಲಗಳಿಗೆ ಶಾಶ್ವತ ಮುಕ್ತಾಯ

ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಡುವಿನ ಅಧಿಕಾರ ಹಂಚಿಕೆಯ ಒಪ್ಪಂದದ ಕುರಿತಾದ ಚರ್ಚೆಗಳು ಈ ಸಭೆಯ ಮುಖ್ಯ ಕಾರ್ಯಸೂಚಿಯಾಗುವ ಸಾಧ್ಯತೆಯಿದೆ. ಕಾಂಗ್ರೆಸ್ ಹೈಕಮಾಂಡ್ ಎರಡೂ ಬಣಗಳ ನಾಯಕರ ನಡುವಿನ ಭಿನ್ನಾಭಿಪ್ರಾಯಗಳನ್ನು ಬಗೆಹರಿಸಿ, ರಾಜ್ಯದಲ್ಲಿ ಉದ್ಭವಿಸಿರುವ ನಾಯಕತ್ವದ ಗೊಂದಲಗಳಿಗೆ ಒಂದು ಶಾಶ್ವತ ಮುಕ್ತಾಯ ಹಾಡಲು ಮುಂದಾಗಿದೆ ಎಂದು ಮೂಲಗಳು ತಿಳಿಸಿವೆ. ಡಿ ಕೆ ಶಿವಕುಮಾರ್ ಅವರು ಹೈಕಮಾಂಡ್ ನಿರ್ಧಾರಕ್ಕೆ ತಾವು ಬದ್ಧವಾಗಿರುವುದಾಗಿ ಈಗಾಗಲೇ ಸ್ಪಷ್ಟಪಡಿಸಿದ್ದಾರೆ. ಹೈ ಕಮಾಂಡ್ ಬುಲಾವ್ ನೀಡಿದಾಗಲೆಲ್ಲಾ ದೆಹಲಿಗೆ ತೆರಳಲು ಸಿದ್ಧರಿರುವುದಾಗಿ ಹೇಳಿದ್ದಾರೆ. ಮತ್ತೊಂದೆಡೆ ಸಿದ್ದರಾಮಯ್ಯ ಅವರ ಬೆಂಬಲಿಗರು ಮತ್ತು ಅಹಿಂದ ಸಂಘಟನೆಯ ಪ್ರಮುಖ ನಾಯಕರು ಸಿದ್ದರಾಮಯ್ಯ ಅವರನ್ನೇ ಮುಖ್ಯಮಂತ್ರಿ ಸ್ಥಾನದಲ್ಲಿ ಮುಂದುವರಿಸಬೇಕು ಎಂದು ಈಗಾಗಲೇ ಹೈಕಮಾಂಡ್ ಮೇಲೆ ಒತ್ತಡ ಹೇರಲು ದೆಹಲಿಯಲ್ಲಿ ಬೀಡು ಬಿಟ್ಟಿದ್ದಾರೆ.



### ಫಲಾನುಭವಿಗಳಿಗೆ ಗ್ಯಾರಂಟಿ ತಲುಪುವಂತೆ ಪರಿಶೀಲನೆ

ಗ್ಯಾರಂಟಿ ಪರಿಷ್ಕರಣೆ ಮಾಡಲಾಗುವುದೇ ಎಂದು ಕೇಳಿದಾಗ, ಕೆಲವು ಗ್ಯಾರಂಟಿ ಫಲಾನುಭವಿಗಳು ಮೃತಪಟ್ಟಿದ್ದು, ಸುಮಾರು 100 ಕೋಟಿಯಷ್ಟು ಹಣ ಬೇರೆಯವರಿಗೆ ಹೋಗಿ ದುರ್ಬಳಕೆಯಾಗಿದೆ. ಇನ್ನು ಬೇರೆಯವರ ದೂರವಾಣಿ ಸಂಖ್ಯೆ ಕೊಟ್ಟಿರುವುದರಿಂದ ಸರಿಯಾದ ಫಲಾನುಭವಿಗಳಿಗೆ ಯೋಜನೆ ತಲುಪುತ್ತಿದಯೇ, ಇಲ್ಲವೇ ಎಂದು ತಿಳಿಯಬೇಕಿದೆ. ಹೀಗಾಗಿ ಫಲಾನುಭವಿಗಳ ದಾಖಲೆ ಸಂಗ್ರಹಿಸುವ ಬಗ್ಗೆ ಚರ್ಚೆ ಮಾಡುವ ಬಗ್ಗೆ ಸಲಹೆ ಬಂದಿದೆ. ಪ್ರತಿ ತಾಲ್ಲೂಕಿನಲ್ಲಿ ಇದನ್ನು ಪರಿಶೀಲನೆ ಮಾಡುತ್ತಿದ್ದೇವೆ ಎಂದು ತಿಳಿಸಿದರು. 2 ತಿಂಗಳಿನಿಂದ ಅನ್ನಭಾಗ್ಯ ಅಕ್ಕಿ ಸರಿಯಾಗಿ ತಲುಪುತ್ತಿಲ್ಲ ಎಂದು ಪ್ರಶ್ನಿಸಿದಾಗ, 'ಕೇಂದ್ರ ಸರ್ಕಾರ ಅಕ್ಕಿ ಬಿಡುಗಡೆ ಮಾಡುತ್ತಿಲ್ಲ. ಕೇವಲ ಕರ್ನಾಟಕ ಮಾತ್ರವಲ್ಲ, ನಮ್ಮ ಸರ್ಕಾರ ಇರುವ ರಾಜ್ಯಗಳಲ್ಲಿ ಈ ರೀತಿ ಮಾಡುತ್ತಿದ್ದಾರೆ' ಎಂದು ಕಿಡಿಕಾರಿದರು. ಇನ್ನು ಮೊನ್ನೆ ತಾನೇ ಸಚಿವ ಹೆಚ್.ಸಿ. ಮಹದೇವಪ್ಪ ಅವರು ಮಾಧ್ಯಮದವರು ಸಿಎಂ ಬದಲಾವಣೆ ಕುರಿತು ಪ್ರಶ್ನಿಸಿದ್ದಾಗ 'ಸದ್ಯಕ್ಕೆ ಸಿಎಂ ಚೇರ್‌ನಲ್ಲಿ ಸಿದ್ದರಾಮಯ್ಯ ಕುಳಿತಿದ್ದಾರೆ. ಸಿದ್ದರಾಮಯ್ಯ ಎದ್ದಿಲ್ಲ, ಕುಳಿತಿದ್ದಾರೆ, ಕುರ್ಚಿ ಖಾಲಿ ಇಲ್ಲಾ' ಎಂದು ಉತ್ತರಿಸಿದ್ದರು.

## ಭಟ್ಕಳದಲ್ಲಿ ಮೂರು ದಿನ ನಿಷೇಧಾಜ್ಞೆ ಜಾರಿ

• ಉದಯವಾಹಿನಿ, ಬೆಂಗಳೂರು

ರಾಷ್ಟ್ರೀಯ ಹೆದ್ದಾರಿ 66ರ ಪಕ್ಕದಲ್ಲಿ ಪುನರ್ ನಿರ್ಮಾಣ ಮಾಡಲಾಗಿದ್ದ ಮೂರಿನಕಟ್ಟೆಯನ್ನು ತಡರಾತ್ರಿ ಅನ್ಯಕೋಮಿನ ಸಾವಿರಾರು ಯುವಕರು ಸೇರಿ ಧ್ವಂಸಗೊಳಿಸಿದ್ದರಿಂದ ಪ್ರದೇಶದಲ್ಲಿ ಉದ್ವಿಗ್ನತೆ ಉಂಟಾಗಿ ಪೊಲೀಸರು ಪರಿಸ್ಥಿತಿ ನಿಭಾಯಿಸಲು ಇಂದಿನಿಂದ ಎರಡು ದಿನಗಳ ಕಾಲ ನಿಷೇಧಾಜ್ಞೆ ಹೊರಡಿಸಿದ್ದಾರೆ. ತಣ್ಣಗಾಗಿದ್ದ ಕರಾವಳಿಯ ಸೂಕ್ಷ್ಮ ಪ್ರದೇಶ ಭಟ್ಕಳದಲ್ಲಿ ಮೂರಿನಕಟ್ಟೆ ವಿವಾದ ಮತ್ತೆ ಕಿಚ್ಚು ಹೊತ್ತಿಸಿದೆ. ಭಟ್ಕಳದ ವೆಂಕಟಾಪುರದ ಸಮೀಪದ ರಾಷ್ಟ್ರೀಯ ಹೆದ್ದಾರಿ 66ರ ಪಕ್ಕದಲ್ಲಿ ಪುನರ್ ನಿರ್ಮಾಣ ಮಾಡಲಾಗಿದ್ದ ಮೂರಿನಕಟ್ಟೆಯನ್ನು ರಾತ್ರಿ ಅನ್ಯಕೋಮಿನ ಸಾವಿರಾರು ಯುವಕರು ಸೇರಿ ಧ್ವಂಸಗೊಳಿಸಿದ್ದಾರೆ. ಈ ಘಟನೆಯಿಂದಾಗಿ ಇಡೀ ಭಟ್ಕಳ ಪಟ್ಟಣ ಬೂದಿ ಮುಚ್ಚಿದ ಕೆಂಡದಂತಾಗಿದ್ದು, ತೀವ್ರ ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಗಿದೆ. ಈ ಹಿನ್ನೆಲೆ ಭಟ್ಕಳ ಪಟ್ಟಣ ಹಾಗೂ ಜಾಲಿ ಪಂಚಾಯತ್ ವ್ಯಾಪ್ತಿಯಲ್ಲಿ ಭಟ್ಕಳದಲ್ಲಿ ಮುರಿನಕಟ್ಟೆ ಧ್ವಂಸದ ಬೆನ್ನಲ್ಲೇ ಮೂರು ದಿನಗಳ ಕಾಲ ನಿಷೇಧಾಜ್ಞೆ ಜಾರಿಯಾಗಿದೆ.ಪೊಲೀಸರ ಎದುರೇ ವಿವಾದಿತ ಕಟ್ಟೆ ಧ್ವಂಸಗೊಳಿಸಿದ್ದು ಭಟ್ಕಳದಲ್ಲಿ ತೀವ್ರ ಉದ್ವಿಗ್ನತೆ ಉಂಟಾಗಿದೆ.

ರಾಷ್ಟ್ರೀಯ ಹೆದ್ದಾರಿ 66ರ ವಿಸ್ತರಣೆ ಕಾಮಗಾರಿ ಆರಂಭವಾದಾಗಿನಿಂದಲೂ ಈ ಮೂರಿನಕಟ್ಟೆ ವಿವಾದದ ಕೇಂದ್ರಬಿಂದುವಾಗಿತ್ತು. ನೂರಾರು ವರ್ಷಗಳ ಇತಿಹಾಸ ಹಾಗೂ ಧಾರ್ಮಿಕ ನಂಬಿಕೆ ಹೊಂದಿದ್ದ ಈ ಸ್ಥಳವನ್ನು ಹೆದ್ದಾರಿಗಾಗಿ ಬಿಟ್ಟುಕೊಡಲಾಗಿತ್ತು. ರಸ್ತೆ ಅಗಲೀಕರಣದ ಬಳಿಕ, ಇದನ್ನು ಸಂಪೂರ್ಣವಾಗಿ ತೆರವುಗೊಳಿಸಬೇಕೆಂದು ಒಂದು ವರ್ಗದವರು ಒತ್ತಾಯಿಸುತ್ತಿದ್ದರೆ,ಮೂಲ ಸ್ಥಳದಲ್ಲೇ ಮರುನಿರ್ಮಿಸಬೇಕು ಎಂದು ಹಿಂದೂ ಸಂಘಟನೆಗಳು ಪಟ್ಟು



ಹಿಡಿದಿದ್ದವು. ಹಲವಾರು ಬಾರಿ ಮನವಿ ಮಾಡಿದರೂ ಇಲಾಖೆಯು ಪುನರ್ ನಿರ್ಮಾಣ ಮಾಡದ ಹಿನ್ನೆಲೆಯಲ್ಲಿ, ಹಿಂದೂ ಸಂಘಟನೆಯ ನೂರಾರು ಕಾರ್ಯಕರ್ತರು ಒಟ್ಟಾಗಿ ಶ್ರದ್ಧಾ ಭಕ್ತಿಯಿಂದ ಕಟ್ಟೆಯನ್ನು ನಿರ್ಮಿಸಿದ್ದರು.

ಪೊಲೀಸರ ಎದುರಲ್ಲೇ ಜಿದ್ದಾಜಿದ್ದಿ, ಕಟ್ಟೆ ಧ್ವಂಸ ಸಾರ್ವಜನಿಕ ಸ್ಥಳದಲ್ಲಿ ಕಟ್ಟೆ ನಿರ್ಮಾಣವಾಗುತ್ತಿದ್ದಂತೆ ಸ್ಥಳೀಯ ನಿವಾಸಿಗಳು ಮತ್ತು ಮಜ್ಲಿಸೆ ಇಸ್ಲಾಹ್‌ವ ತಂಝೀಮ್ ಮುಖಂಡರು ತೀವ್ರ ಆಕ್ಷೇಪ ವ್ಯಕ್ತಪಡಿಸಿದರು. ಪರಿಸ್ಥಿತಿ ಕೈಮೀರುತ್ತಿದ್ದಂತೆ ಉಪವಿಭಾಗಾಧಿಕಾರಿ ಜೆ. ಮಹೇಶ್ ಅವರು ಶಾಂತಿ ಸಭೆ ನಡೆಸಿ, ಇದು ಹೆದ್ದಾರಿಯ ಅತಿಕ್ರಮಿತ ಜಾಗ ಎಂದು ತಿಳಿಸಿದ್ದರು. ಅನ್ಯಕೋಮಿನ ಮುಖಂಡರು ಇದಕ್ಕೆ ಒಪ್ಪಿದರೂ, ರಾತ್ರಿ ವೇಳೆಗೆ ಪರಿಸ್ಥಿತಿ ವಿಕೋಪಕ್ಕೆ ತಿರುಗಿತು. ಸಾವಿರಾರು ಯುವಕರು ಸ್ಥಳದಲ್ಲಿ ಜಮಾಯಿಸಿ ಘೋಷಣೆಗಳನ್ನು ಕೂಗುತ್ತಾ ಹೆದ್ದಾರಿ ಬಂದ್ ಮಾಡಿದರು.

## ಗ್ಯಾರಂಟಿ ಯೋಜನೆಗಳಾದ ಗೃಹಲಕ್ಷ್ಮಿ, ಗೃಹಜ್ಯೋತಿ ಪರಿಷ್ಕರಣೆಗೆ ಮುಂದಾದ ಸರ್ಕಾರ

• ಉದಯವಾಹಿನಿ, ಬೆಂಗಳೂರು:

ಕಾಂಗ್ರೆಸ್ ಸರ್ಕಾರದ ಮಹತ್ವಾಕಾಂಕ್ಷೆಯ ಪ್ರಮುಖ ಗ್ಯಾರಂಟಿ ಯೋಜನೆಗಳಾದ ಗೃಹಲಕ್ಷ್ಮಿ ಮತ್ತು ಗೃಹ ಜ್ಯೋತಿ ಫಲಾನುಭವಿಗಳ ಪಟ್ಟಿಯನ್ನು ಪರಿಷ್ಕರಿಸಲು ರಾಜ್ಯ ಸರ್ಕಾರ ಮಹತ್ವದ ನಿರ್ಧಾರ ಕೈಗೊಂಡಿದೆ. ನಡೆದ ಎಸ್ ಐ ಆರ್ ಸಭೆಯಲ್ಲಿ ಈ ಕುರಿತು ವಿಸ್ತೃತವಾಗಿ ಚರ್ಚಿಸಲಾಗಿದ್ದು, ಫಲಾನುಭವಿಗಳ ಅರ್ಹತೆಯನ್ನು ಸಮಗ್ರವಾಗಿ ಪರಿಶೀಲಿಸಲು ಸರಕಾರ ಮುಂದಾಗಿದೆ.

ಸರ್ಕಾರದ ಬೊಕ್ಕಸಕ್ಕೆ ಹೊರೆಯಾಗದಂತೆ, ನಿಜವಾದ ಅರ್ಹ ಬಡ ಜನರಿಗೆ ಮಾತ್ರ ಯೋಜನೆ ತಲುಪಬೇಕು ಎಂಬ ಉದ್ದೇಶದಿಂದ ಈ ನಿರ್ಧಾರಕ್ಕೆ ಬರಲಾಗಿದೆ ಎಂದು ತಿಳಿದುಬಂದಿದೆ.

ಗೃಹಲಕ್ಷ್ಮಿ ಹಾಗೂ ಗೃಹಜ್ಯೋತಿ ಯೋಜನೆ ಪರಿಷ್ಕರಣೆಗೆ ಸರ್ಕಾರ ನಿರ್ಧರಿಸಿದೆ. ಗೃಹಲಕ್ಷ್ಮಿ ಯೋಜನೆ ಅಡಿಯಲ್ಲಿ ಪ್ರತಿ ತಿಂಗಳು 1 ಕೋಟಿ 64 ಲಕ್ಷ ಮಹಿಳೆಯರು 2,000 ರೂ. ಹಣ ಪಡೆಯುತ್ತಿದ್ದಾರೆ. ಗೃಹಜ್ಯೋತಿ ಯೋಜನೆಯಲ್ಲೂ 1 ಕೋಟಿ 67 ಲಕ್ಷ ಫಲಾನುಭವಿಗಳಿದ್ದಾರೆ.

ಗೃಹಲಕ್ಷ್ಮಿ ಯೋಜನೆಯಲ್ಲಿ ಅರ್ಹತೆ ಮೀರಿದವರು ಜೊತೆಗೆ ಸತ್ತವರ ಹೆಸರಿನಲ್ಲೂ ಹಣ ಪಡೆಯಲಾಗುತ್ತಿದೆ ಎಂಬ ಮಾಹಿತಿ ಇದೆ. ಗೃಹ ಜ್ಯೋತಿ ಯೋಜನೆಯಲ್ಲೂ ಬಹುತೇಕ ಅರ್ಹತೆ ಮೀರಿದವರು ಫಲಾನುಭವಿಗಳಾಗುತ್ತಿದ್ದಾರೆ ಎನ್ನುವ ಮಾಹಿತಿ ಇದೆ.

ಅದೇ ಕಾರಣಕ್ಕೆ ಎರಡು ಯೋಜನೆಯ ಪರಿಷ್ಕರಣೆಗೆ ಇಂದಿನ




ಸಭೆಯಲ್ಲಿ ತೀರ್ಮಾನಿಸಲಾಗಿದೆ. ಯೋಜನೆಯಲ್ಲಿ ಪಾರದರ್ಶಕತೆ ಮತ್ತು ಅರ್ಹ ಫಲಾನುಭವಿಗಳಿಗೆ ಮಾತ್ರ ಸೌಲಭ್ಯ ದೊರೆಯುವಂತೆ ಮಾಡುವುದಾಗಿದೆ. ಗೃಹಲಕ್ಷ್ಮಿ ಯೋಜನೆಯಡಿ ಹಣವು ಮೃತಪಟ್ಟವರ ಹೆಸರಿನಲ್ಲಿಯೂ ಸಂದಾಯವಾಗುತ್ತಿರುವ ಹಲವಾರು ಪ್ರಕರಣಗಳು ವರದಿಯಾಗಿವೆ.


ರಾಜ್ಯ ಸರ್ಕಾರದ ಪ್ರಮುಖ ಯೋಜನೆಗಳಾದ ಗೃಹ ಲಕ್ಷ್ಮಿ ಹಾಗೂ ಗೃಹ ಜ್ಯೋತಿ ಯೋಜನೆಗಳ ಫಲಾನುಭವಿಗಳ ಪಟ್ಟಿಯನ್ನು ಸಮಗ್ರವಾಗಿ ಪರಿಶೀಲಿಸಲು ತೀರ್ಮಾನಿಸಲಾಗಿದೆ. ಪ್ರಸ್ತುತ ರಾಜ್ಯದಲ್ಲಿ ಬರೋಬ್ಬರಿ 1 ಕೋಟಿ 24 ಲಕ್ಷಕ್ಕೂ ಹೆಚ್ಚು ಗೃಹಲಕ್ಷ್ಮಿ ಫಲಾನುಭವಿಗಳಿದ್ದಾರೆ. ಇಷ್ಟು ದೊಡ್ಡ ಪ್ರಮಾಣದ ಫಲಾನುಭವಿಗಳ ಪಟ್ಟಿಯಲ್ಲಿ ಹಲವು ತಾಂತ್ರಿಕ ದೋಷಗಳು ಹಾಗೂ ನಿಯಮ ಉಲ್ಲಂಘನೆಗಳು ಪತ್ತೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

## ಮೇದಾರ ಅಭಿವೃದ್ಧಿ ನಿಗಮ ಮುಖ್ಯಮಂತ್ರಿ ಉಪಮುಖ್ಯಮಂತ್ರಿಗಳಿಂದ ಲೋಕಾರ್ಪಣೆ ಶ್ರೀ ಶ್ರೀ ಮೈದಾರ ಕೇತೇಶ್ವರ ಸ್ವಾಮೀಜಿ

ಉಮೇಶ್ ಬಾಣಾವರ

• ಉದಯವಾಹಿನಿ, ಚಿತ್ರದುರ್ಗ

ಈ ಹಿಂದೆ ಚಿತ್ರದುರ್ಗದಲ್ಲಿ ನಡೆದಿದ್ದ ಅಖಿಲ ಭಾರತ ಮೇದಾರ ಬುಡಕಟ್ಟು ಸಮುದಾಯದ ಸಮಾವೇಶದಲ್ಲಿ ಅಂದಿನ ಮುಖ್ಯಮಂತ್ರಿಗಳಾಗಿದ್ದ ಬಸವರಾಜ್ ಬೊಮ್ಮಾಯಿ ಅವರು ಬೃಹತ್ ಸಮಾವೇಶದಲ್ಲಿ ಭಾಗವಹಿಸಿ ಮೇದಾರ ಅಭಿವೃದ್ಧಿ ನಿಗಮವನ್ನು ಪ್ರಾರಂಭಿಸುವುದಾಗಿ ಘೋಷಣೆ ಮಾಡಿ ಸರ್ಕಾರದ ವತಿಯಿಂದ ಆದೇಶವನ್ನು ಸಹ ಮಾಡಿದ್ದರು ಇದಾದ ನಂತರ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಹಿಂದುಳಿದ ವರ್ಗಗಳ ನೇತಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿಯ ಡಿಕೆ ಶಿವಕುಮಾರ್ ಅವರು ನಿಗಮಕ್ಕೆ ಬೇಕಾದಂತ ಮೂಲಭೂತ ಸೌಕರ್ಯಗಳು ಮತ್ತು ಕಚೇರಿ ಹಾಗೂ ನಿಗಮಕ್ಕೆ ಬೇಕಾದಂತ ಆರ್ಥಿಕ ವ್ಯವಸ್ಥೆಯನ್ನು ಸಹ ಮೀಸಲಿಡುವುದರ ಮೂಲಕ ಹಾಗೂ ರಾಜ್ಯದ ಮೇದಾರ ಜನಾಂಗಕ್ಕೆ ಸಿಗಬೇಕಾದಂತ ಸವಲತ್ತುಗಳ ಬಗ್ಗೆಯೂ ಸಹ ಮಂಜೂರಾತಿಯನ್ನು ಸಹ ಮಾಡಿ ಕರ್ನಾಟಕ ಮೇದಾರ ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮ ಪ್ರಾರಂಭಕ್ಕೆ ಸರ್ಕಾರದ ವತಿಯಿಂದ ದಿನಾಂಕವನ್ನು ಸಹ ಗೊತ್ತುವಳಿ ಮಾಡಿ ಬೆಂಗಳೂರಿನ ವಸಂತನಗರದಲ್ಲಿರುವ ಡಾ. ಬಿಆರ್ ಅಂಬೇಡ್ಕರ್ ಭವನದಲ್ಲಿ ಬರುವ ಶುಕ್ರವಾರ 29-05-26ರಂದು ಬೆಳಗ್ಗೆ 11 ಗಂಟೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಸೇರಿದಂತೆ ಗೃಹ ಸಚಿವರಾದ ಜಿ ಪರಮೇಶ್ವರ್ ಸಮಾಜ ಕಲ್ಯಾಣ ಸಚಿವರಾದ ಎಚ್ ಸಿ ಮಹದೇವಪ್ಪ ಗ್ರಾಮೀಣ ಪಂಚಾಯತ್ ರಾಜ್ ಸಚಿವರಾದ ಪ್ರಿಯಾಂಕ ಖರ್ಗೆ ವಿರೋಧ ಪಕ್ಷದ ನಾಯಕರದ ಆರ್ ಅಶೋಕ್ ಆಹಾರ ಸಚಿವರಾದ ಕೆಎಚ್ ಮುನಿಯಪ್ಪ ಲೋಕೋಪಯೋಗಿ ಸಚಿವರಾದ ಸತೀಶ್ ಜಾರಕಿಹೊಳಿ. ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರಾದ ಶಿವರಾಜ್ ತಂಗಡಗಿ. ವಿಧಾನ ಪರಿಷತ್ ವಿರೋಧ ಪಕ್ಷ ನಾಯಕರಾದ ಛಲವಾದಿ ನಾರಾಯಣಸ್ವಾಮಿ. ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಬಸವನಗೌಡ



ದದ್ದಲ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಶ್ರೀಮತಿ ಪಲ್ಲವಿ ಹಾಗೂ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಾದ ಡಾ. ಶಾಲಿನಿ ರಜನೀಶ್ ಮತ್ತು ಸರ್ಕಾರದ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯ ಸರ್ಕಾರದ ಕಾರ್ಯದರ್ಶಿಗಳಾದ ಕನಗವಲ್ಲಿ ಪರಿಶಿಷ್ಟ ಪಂಗಡಗಳ ಇಲಾಖೆಯ ನಿರ್ದೇಶಕರಾದ ಡಿ ಆರ್ ಅಶೋಕ್ ಹಾಗೂ ಕರ್ನಾಟಕ ಮೇದಾರ ಪರಿಶಿಷ್ಟ ಅಭಿವೃದ್ಧಿ ಪಂಗಡಗಳ ಅಲೆಮಾರಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ಕೆ ಬಿ ಮಲ್ಲಿಕಾರ್ಜುನ್ ಈ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ ಎಂದು ಹಾಗೂ ಈ ಸಮಾರಂಭದ ಕಾರ್ಯಕ್ರಮ ಚಿತ್ರದುರ್ಗದ ಕೇತೇಶ್ವರ ಮಹಾಮಠದ ಶ್ರೀ ಶ್ರೀ ಇಮ್ಮಡಿ ಬಸವ ಮೇದಾರ ಕೇತೇಶ್ವರ ಸ್ವಾಮೀಜಿಗಳ ದಿವ್ಯ ಸಾನಿಧ್ಯದಲ್ಲಿ ನಡೆಯಲಿದೆ ಎಂದು ಕೇತೇಶ್ವರ ಮಠದ ಟ್ರಸ್ಟ್ ಪದಾಧಿಕಾರಿಗಳು ತಿಳಿಸಿದ್ದಾರೆ.

**ಅಲೆಮಾರಿ ಅಭಿವೃದ್ಧಿ ನಿಗಮ ಪ್ರಾರಂಭಕ್ಕೆ ದಿನಾಂಕ ಗೊತ್ತುವಳಿ ಮಾಡಿ**



**ಶ್ರೀ ಗುರು ಕೇತೇಶ್ವರ ಟ್ರಸ್ಟ್ ಪಾಟೀಲ್ ಪ್ರತಿಕ್ರಿಯೆ**




ಅಖಿಲ ಕರ್ನಾಟಕ ಶ್ರೀ ಗುರು ಕೇತೇಶ್ವರ ಟ್ರಸ್ಟ್ ಅಧ್ಯಕ್ಷರಾದ ಪಾಟೀಲ್ ಪ್ರತಿಕ್ರಿಯಿಸಿ ಮಾತನಾಡಿ ಈ ಹಿಂದೆ ಬಸವರಾಜ್ ಬೊಮ್ಮಾಯಿಯವರು ಕರ್ನಾಟಕದ್ಯಾಂತ ಇರುವ ಬಡ ಹಾಗೂ ಕೂಲಿ ಕಾರ್ಮಿಕರನ್ನೇ ಹೆಚ್ಚಾಗಿ ಹೊಂದಿರುವ ಮೇದಾರ ಜನಾಂಗಕ್ಕೆ ಮೇದಾರ ಅಭಿವೃದ್ಧಿ ನಿಗಮವನ್ನು ಘೋಷಣೆ ಮಾಡಿ ಸರ್ಕಾರದಿಂದ ಆದೇಶವನ್ನು ಸಹ ಮಾಡಿದ್ದರು ಈಗ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿಗಳಾದ ಡಿಕೆ ಶಿವಕುಮಾರ್ ಪರಿಶಿಷ್ಟ ಪಂಗಡದ ಶ್ರೀ ಮೇದಾರ ಜನಾಂಗವನ್ನು ಗುರುತಿಸಿ ಬರುವ ಶುಕ್ರವಾರ 29ನೇ ತಾರೀಕು ಲೋಕಾರ್ಪಣೆ ಗೊಳಿಸುತ್ತಿರುವುದಕ್ಕೆ ರಾಜ್ಯಾದ್ಯಂತ ಮೇದಾರ ಜನಾಂಗದ ಪರವಾಗಿ ಅಭಿನಂದಿಸುವುದಾಗಿ ತಿಳಿಸಿದರು . ಹಾಗೂ ರಾಜ್ಯಾದ್ಯಂತ ಇರುವ ತಾಲ್ಲೂಕು ಜಿಲ್ಲೆ ಹಾಗೂ ಗ್ರಾಮ ಮಟ್ಟದಲ್ಲಿರುವ ಮೇದಾರ ಜನಾಂಗದ ಸಮುದಾಯದ ಮುಖಂಡರುಗಳು ಈ ಸಮಾರಂಭಕ್ಕೆ ಆಗಮಿಸಿ ಯಶಸ್ವಿಗೊಳಿಸಬೇಕಾಗಿ ಮನವಿ ಮಾಡುತ್ತೇನೆಂದು ಪಾಟೀಲ್ ತಿಳಿಸಿದರು ಚಿತ್ರದುರ್ಗದ ಶ್ರೀ ಶ್ರೀ ಕೇತೇಶ್ವರ ಮಹಾಮಠದಲ್ಲಿ ಟ್ರಸ್ಟ್‌ನ ಹಲವಾರು ಪದಾಧಿಕಾರಿಗಳು ಹಾಗೂ ಸಮುದಾಯದ ಮುಖಂಡರು ಶ್ರೀ ಶ್ರೀ ಇಮ್ಮಡಿ ಬಸವ ಮೇದಾರ ಕೇತೇಶ್ವರ ಶ್ರೀಗಳು ಸಹ ಉಪಸ್ಥಿತರಿದ್ದರು.

| ಈ ದಿನದ ದರ | ಪೆಟ್ರೋಲ್: 110.93 ₹/L | ಡೀಸೆಲ್ : 98.80₹/L | ಬಂಗಾರ: ₹ 15,938/Gram 24ct ₹14,610/Gram 22ct | ಬೆಳ್ಳಿ: ₹285.00/Gram |
|---|---|---|---|---|

# 108 ಅರೋಗ್ಯ ಕವಚ ಕೇಂದ್ರೀಕೃತ ಕಮಾಂಡ್, ಕಂಟ್ರೋಲ್ ಕೇಂದ್ರ' ಉದ್ಘಾಟಿಸಿದ ಸಿಎಂ

• ಉದಯವಾಹಿನಿ, ಬೆಂಗಳೂರು

ಇಂದಿನಿಂದ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಅತ್ಯಾಧುನಿಕ ತಂತ್ರಜ್ಞಾನವುಳ್ಳ ಆಂಬ್ಯುಲೆನ್ಸ್ ಸೇವೆ ಲಭ್ಯವಾಗಲಿದೆ. ಈ ಸೇವೆಯು ಪರಿಣಾಮಕಾರಿಯಾಗಿ ಜನರಿಗೆ ತಲುಪಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಸೋಮವಾರ ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ '108 ಅರೋಗ್ಯ ಕವಚ ಕೇಂದ್ರೀಕೃತ ಕಮಾಂಡ್ ಮತ್ತು ಕಂಟ್ರೋಲ್ ಕೇಂದ್ರ'ವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಇಡೀ ದೇಶದಲ್ಲಿಯೇ ಪ್ರಪ್ರಥಮ ಬಾರಿಗೆ ಕರ್ನಾಟಕದಲ್ಲಿ 108 ಅರೋಗ್ಯ ಕವಚ ಕೇಂದ್ರೀಕೃತ ಕಮಾಂಡ್ ಮತ್ತು ಕಂಟ್ರೋಲ್ ಕೇಂದ್ರದ ಆರೋಗ್ಯ ಸೇವೆಯನ್ನು ಪ್ರಾರಂಭಿಸಲಾಗಿದೆ. ತುರ್ತು ಸಂದರ್ಭಗಳಲ್ಲಿ ತ್ವರಿತಗತಿಯಲ್ಲಿ ಚಿಕಿತ್ಸೆ ದೊರೆಯಬೇಕು. ಈ ದಿಸೆಯಲ್ಲಿ ಅತ್ಯಾಧುನಿಕ ಮಾದರಿಯಲ್ಲಿ ಆರೋಗ್ಯ ಸೇವೆ ದೊರೆಯಲು ಈ ಕೇಂದ್ರ ಅತ್ಯಂತ ಸಹಕಾರಿಯಾಗಿದೆ ಎಂದರು. ರಾಜ್ಯದಲ್ಲಿ ಸುಮಾರು 18 ವರ್ಷಗಳಿಂದ 108 ಆಂಬ್ಯುಲೆನ್ಸ್ ಸೇವೆ ನಡೆಯುತ್ತಿದೆ. 2025-26ರ ಬಜೆಟ್ ಘೋಷಣೆಯಂತೆ 108 ತುರ್ತು ಆಂಬ್ಯುಲೆನ್ಸ್ ಸೇವೆಗಳ ನಿರ್ವಹಣೆಗೆ ಮೀಸಲಾದ ವ್ಯವಸ್ಥೆ ರೂಪಿಸಲಾಗಿದೆ. ಈ ಸೇವೆ ಪರಿಣಾಮಕಾರಿಯಾಗಿ ಜನರಿಗೆ ಲಭಿಸುವಂತಾಗುವುದು ಮುಖ್ಯ. ಸರ್ಕಾರದ ಗುಣಮಟ್ಟದ ಆರೋಗ್ಯ ಸೇವೆಯಿಂದ ಜನರ ವಿಶ್ವಾಸ ಹೆಚ್ಚುತ್ತದೆ ಎಂದು ಹೇಳಿದರು.



✦ ಉದಯವಾಹಿನಿ ಚಿತ್ರ

## ಆರೋಗ್ಯ ಕ್ಷೇತ್ರದ ಅಭಿವೃದ್ಧಿಗೆ ಸರ್ಕಾರ ಬದ್ಧ

ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ತಮ್ಮ ಆರೋಗ್ಯ ಸಮಸ್ಯೆಗೆ ನೆರವು ಕೇಳಿ ಬರುವ ಜನರು ಸರ್ಕಾರದ ಧನಸಹಾಯವನ್ನು ಬಯಸುತ್ತಾರೆ. ಆದರೆ, ಜನರು ಖಾಸಗಿ ಆಸ್ಪತ್ರೆಗೆ ಹೋಗಿ, ಸರ್ಕಾರದಿಂದ ಧನಸಹಾಯ ಕೇಳುವ ಬದಲು, ಚಿಕಿತ್ಸೆಗೆ ಸರ್ಕಾರಿ ಆಸ್ಪತ್ರೆಗೆ ಹೋಗಬೇಕು. ಕ್ಯಾನ್ಸರ್ ಸೇರಿದಂತೆ ಹಲವು ಕಾಯಿಲೆಗಳಿಗೆ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ದುಬಾರಿಯಾಗಿದ್ದು, ಸರ್ಕಾರಿ ಆಸ್ಪತ್ರೆಯಲ್ಲಿ ಗುಣಮಟ್ಟದ ಚಿಕಿತ್ಸೆಯ ವ್ಯವಸ್ಥೆಯಿದೆ. ಸಾಮಾನ್ಯ ಜನರಿಗೆ ಗುಣಮಟ್ಟದ ಆರೋಗ್ಯ ವ್ಯವಸ್ಥೆಯನ್ನು ನೀಡಲು ಆರೋಗ್ಯ ಕ್ಷೇತ್ರದ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದೆ ಎಂದರು.

**ಗೋಲ್ಡನ್ ಅವಧಿ ಚಿಕಿತ್ಸೆಯಿಂದ ಶೇ.80ರಷ್ಟು ಜನ ಬದುಕುಳಿದಿದ್ದಾರೆ:** ರಸ್ತೆ ಅಪಘಾತಗಳು, ಹೆರಿಗೆ, ಹೃದಯರೋಗಿ ಸೇರಿದಂತೆ ಹಲವು ಕ್ಲಿಷ್ಟ ಸಂದರ್ಭಗಳಲ್ಲಿ ತುರ್ತು ಚಿಕಿತ್ಸೆಯ ಅತ್ಯವಶ್ಯವಾಗಿದೆ. ಆ ಗೋಲ್ಡನ್ ಅವರ್‌ನಲ್ಲಿ ಚಿಕಿತ್ಸೆ ದೊರೆತರೆ, ರೋಗಿಗಳು ಬದುಕುವ ಸಾಧ್ಯತೆ ಹೆಚ್ಚಿರುತ್ತದೆ. ಗೋಲ್ಡನ್ ಅವರ್‌ನಲ್ಲಿ ದೊರೆತ ಚಿಕಿತ್ಸೆಯಲ್ಲಿ ಸುಮಾರು ಶೇ.80ರಷ್ಟು ಜನರು ಬದುಕುಳಿದಿದ್ದಾರೆ. ಜೀವನ್ಮರಣದ ಹೋರಾಟದಲ್ಲಿ ತುರ್ತು ಚಿಕಿತ್ಸೆ ಹೆಚ್ಚಿನ ಮಹತ್ವವನ್ನು ಹೊಂದಿದೆ. ಬೆಂಗಳೂರು ನಗರದಲ್ಲಿ 65 ರಿಂದ 70 ಆಂಬ್ಯುಲೆನ್ಸ್‌ಗಳಿದ್ದು, ತುರ್ತು ಚಿಕಿತ್ಸೆಗೆ ನೆರವಾಗಿವೆ. 108 ಆಂಬ್ಯುಲೆನ್ಸ್ ವ್ಯವಸ್ಥೆ ಖಾಸಗಿಯವರ ಕೈಯಲ್ಲಿದ್ದಾಗ, ಅವರ ಹೊಣೆಗಾರಿಕೆಯನ್ನು ಪ್ರಶ್ನಿಸುವಂತಿರಲಿಲ್ಲ. ಆದರೆ, ಪ್ರಸ್ತುತ ಈ ವ್ಯವಸ್ಥೆಯು ಸರ್ಕಾರದ ಅಧೀನದಲ್ಲಿರುವುದರಿಂದ ಈ ಸೇವೆಯ ಹೊಣೆಗಾರಿಕೆ ಹೆಚ್ಚಿದೆ ಎಂದು ತಿಳಿಸಿದರು.

# ವಾಯುಪಡೆ ಪರೀಕ್ಷಾ ಪೈಲಟ್‌ಗಳ ಶಾಲೆಯಲ್ಲಿ ಪದವಿ ಪ್ರದಾನ ಸಮಾರಂಭ



✦ ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಇಲ್ಲಿನ ವಾಯುಪಡೆಯ ಪರೀಕ್ಷಾ ಪೈಲಟ್‌ಗಳ ಶಾಲೆಯಲ್ಲಿ (ಎಎಫ್ ಟಿಪಿಎಸ್) 48 ವಾರಗಳ ಕಠಿಣ ಬಹು-ಶಿಸ್ತೀಯ ತರಬೇತಿ ಪೂರೈಸಿದ 48ನೇ ಫ್ಲೈಟ್ ಟೆಸ್ಟ್ ಕೋರ್ಸ್‌ನ 11 ಟೆಸ್ಟ್ ಪೈಲಟ್‌ಗಳು ಮತ್ತು 6 ಫ್ಲೈಟ್ ಟೆಸ್ಟ್ ಇಂಜಿನಿಯರ್‌ಗಳಿಗೆ ಪದವಿ ಪ್ರದಾನ ಮಾಡಲಾಯಿತು.

ಈ ಪದವೀಧರರು ಭಾರತೀಯ ವಾಯುಪಡೆಯ ಪ್ರಮುಖ ಘಟಕಗಳಲ್ಲಿ ಒಂದಾದ ವಿಮಾನ ಮತ್ತು ವ್ಯವಸ್ಥೆಗಳ ಪರೀಕ್ಷಾ ಸ್ಥಾಪನೆಯ ವಾಯುಯಾನ ವಿಭಾಗವನ್ನು ಸೇರಲಿದ್ದಾರೆ.

ವಾಯುಪಡೆಯ ಮುಖ್ಯಸ್ಥ ಏರ್ ಚೀಫ್ ಮಾರ್ಷಲ್ ಎ.ಪಿ. ಸಿಂಗ್ ಪ್ರಮಾಣಪತ್ರ ವಿತರಿಸಿದರು. ಉತ್ತಮ ಪ್ರದರ್ಶನ ನೀಡಿದವರಿಗೆ ಟ್ರೋಫಿ ಪ್ರದಾನ ಮಾಡಿದರು. ಸುರಂಜನ್ ದಾಸ್ ಟ್ರೋಫಿಯನ್ನು ಸ್ಕ್ಯಾಡ್ರನ್ ಲೀಡರ್ ಕೆ.ಕೆ. ಸಿಂಗ್, 'ಚೀಫ್ ಆಫ್ ದಿ ಏರ್ ಸ್ಟಾಫ್ ಟ್ರೋಫಿ'ಯನ್ನು ಸ್ಕಾಡ್ರನ್ ಲೀಡರ್ ಆದಿತ್ಯ ಜಮದಗ್ನಿ, 'ಮಹಾರಾಜ ಹನುಮಂತ್ ಸಿಂಗ್ ಸ್ಟೋರ್ಡ್' ಟ್ರೋಫಿಯನ್ನು ಸಿಡಿಆರ್ ಅಭಿನವ್ ಕುಮಾರ್, 'ಡನ್‌ಲಪ್ ಟ್ರೋಫಿ'ಯನ್ನು ಸಿಡಿಆರ್ ಪ್ರಣವ್ ಶರ್ಮಾ ಅವರಿಗೆ, 'ಕಪಿಲ್ ಭಾರ್ಗವ ಟ್ರೋಫಿಯನ್ನು ಸ್ಕ್ಯಾಡ್ರನ್ ಲೀಡರ್ ಪರಾಸ್ ಶರ್ಮಾ ಅವರಿಗೆ ಪ್ರದಾನ ಮಾಡಲಾಯಿತು.

ಏರ್ ಚೀಫ್ ಮಾರ್ಷಲ್ ಎ.ಪಿ. ಸಿಂಗ್ ಮಾತನಾಡಿ, ಪದವಿ ಪಡೆದ ಅಧಿಕಾರಿಗಳು ಗಮನವಿಟ್ಟು ಶ್ರಮ ಹಾಕುವುದನ್ನು ಮುಂದುವರಿಸಬೇಕು ಎಂದು ಸಲಹೆ ನೀಡಿದರು. ಭಾರತೀಯ ಸಶಸ್ತ್ರ ಪಡೆಗಳ ಸಾಮರ್ಥ್ಯ ನಿರ್ಮಾಣ ಮತ್ತು ಆಧುನೀಕರಣದ ಕಡೆಗೆ ಗಮನ ಹರಿಸಬೇಕು. ಸ್ಥಿತಿ ಸ್ಥಾಪಕ ಸ್ಥಳೀಯ ರಕ್ಷಣಾ ಸಾಮರ್ಥ್ಯಗಳನ್ನು ಅಭಿವೃದ್ಧಿಪಡಿಸಲು ಆತ್ಮನಿರ್ಭರ್' ಕಾರ್ಯತಂತ್ರ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

# ಮಳೆ ಬಂದರೆ ಕೆರೆಯಾಗುವ ನಗರ ಹೊಸಕೋಟೆ ಜನರ ವ್ಯಥೆ



✦ ಉದಯವಾಹಿನಿ ಚಿತ್ರ

• ಉದಯವಾಹಿನಿ, ಹೊಸಕೋಟೆ

ನಗರದಲ್ಲಿ ಈಚೆಗೆ ಒಂದೂವರೆ ತಾಸು ಸುರಿದ ಮಳೆಗೆ ಬಹುತೇಕ ರಸ್ತೆಗಳಲ್ಲಿ ಕೊಳಚೆ ನೀರು ಹರಿಯಿತು. ಕೆಸರಿನ ರಾಡಿಯಂತಾಗಿ ಸಂಚಾರ ಅಸ್ತವ್ಯಸ್ಥಗೊಂಡಿತ್ತು. ಇದರಿಂದ ಸಾರ್ವಜನಿಕರು, ಬೀದಿ ಬದಿ ವ್ಯಾಪಾರಿಗಳು, ಪದಾಚಾರಿಗಳು, ವಾಹನ ಸವಾರರು ಹೈರಾಣಾದರು. ಇದೇನು ಹೊಸತಲ್ಲ. ಪ್ರತಿ ಮಳೆಗಾಲದಲ್ಲೂ ಇಲ್ಲಿನ ಜನರು ಅನುಭವಿಸುವ ವ್ಯಥೆ.

ನಗರದಲ್ಲಿ ಕಣ್ಮರೆಯಾಗಿರುವ 25ಕ್ಕೂ ಹೆಚ್ಚು ರಾಜಕಾಲುವೆ, ಅವೈಜ್ಞಾನಿಕ ಚರಂಡಿ ವ್ಯವಸ್ಥೆ, ಜನಸಂಖ್ಯೆಗೆ ತಕ್ಕಂತೆ ಇಲ್ಲದ ಚರಂಡಿ, ಸ್ವಚ್ಛತೆ ಕೊರತೆ, ನಿರ್ವಹಣೆಗೆ ನಿರ್ಲಕ್ಷ್ಯ, ದೂರುದೃಷ್ಟಿ ಇಲ್ಲದೆ ಆಗ್ಗಾಗ್ಗೆ ನಡೆಯುವ ಕಾಮಗಾರಿ, ಅವೈಜ್ಞಾನಿಕ ರಸ್ತೆ ಹೀಗೆ ಹತ್ತು ಹಲವು ಕಾರಣಗಳಿಂದ ಪ್ರತಿ ಮಳೆಗಾಲದಲ್ಲೂ ನಗರದ ರಸ್ತೆಗಳು ಚರಂಡಿಮಯ ಆಗುತ್ತವೆ. ರಸ್ತೆ ಯಾವುದು? ಚರಂಡಿ ಯಾವುದು ಎಂದು ಹುಡುಕಬೇಕು. ಚರಂಡಿ ನೀರು ಉಕ್ಕಿ ರಸ್ತೆಯಲ್ಲೇ ಹರಿದು ವಾಹನಗಳ ಸಂಚಾರಕ್ಕೆ ತೊಂದರೆ ಉಂಟು ಮಾಡುತ್ತದೆ. ಅನ್ಯ ಮಾರ್ಗವಿಲ್ಲದೆ ಹೇಸಿಗೆಯ ನಡುವೆಯೇ ವಾಹನ ಸವಾರರು ಮತ್ತು ಪಾದಚಾರಿಗಳು ಓಡಾಡಬೇಕಾದ ಅನಿವಾರ್ಯ ನಿರ್ಮಾಣವಾಗುತ್ತದೆ.

ವಾಹನ ಸವಾರರಿಗಿಂತ ಸ್ಥಳೀಯ ನಿವಾಸಿ ಮತ್ತು ಅಂಗಡಿಗಳ ಮಾಲೀಕರ ಸಮಸ್ಯೆಯೇನು ಭಿನ್ನವಿಲ್ಲ. ಪ್ರತಿ ಮಳೆಗಾಲದಲ್ಲೂ ತಗ್ಗು ಪ್ರದೇಶದಲ್ಲಿರುವ ಮನೆಗಳಿಗೆ, ಅಂಗಡಿಗಳಿಗೆ ಚರಂಡಿ ನೀರು ನುಗ್ಗುತ್ತದೆ. ಮಳೆ ಸುರಿಯುವ ಆ ರಾತ್ರಿ ಈ ಭಾಗದ ಜನ ಜಾಗರಣೆ ಮಾಡಲೇಬೇಕು. ಚರಂಡಿಯ ದುರ್ನಾತ, ಹುಳು-ಉಪ್ಪಟ್ಟೆ ಸಹಿಸಿಕೊಂಡು ರೋಗ ರುಜಿನಗಳೊಡನೆ ಬದುಕು ಹೋರಾಟ ನಡೆಸುತ್ತಿದ್ದಾರೆ ಇಲ್ಲಿನ ಸ್ಥಳೀಯರು.

ಈ ಅವಾಂತರವನ್ನು ದಶಕಗಳಿಂದ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ನೋಡಿದರೂ ಜಾಣ ಕುರುಡತನ ಪ್ರದರ್ಶಿಸುತ್ತಿದ್ದಾರೆ.

**ವ್ಯವಸ್ಥಿತ ಒಳ ಚರಂಡಿ ಇಲ್ಲ:** 2008ರಲ್ಲಿ ನಗರದಲ್ಲಿ ವ್ಯವಸ್ಥಿತವಾದ ಒಳಚರಂಡಿ ನಿರ್ಮಾಣಕ್ಕೆ ಚಾಲನೆ ದೊರಕಿತ್ತು. ಆದರೆ ಹಲವು ಕಾರಣಕ್ಕೆ ಮುಂದುವರೆಯಲಿಲ್ಲ. ಮಳೆ ಬಂದಾಗ ಎಲ್ಲೆಲ್ಲಿ ಅವಾಂತರ ಆಗುತ್ತದೊ ಅಲ್ಲಿ ಮಾತ್ರ ನಗರಸಭೆ ತೇಪೆ ಹಾಕಿ ಕೈತೊಳೆದುಕೊಳ್ಳುತ್ತಿದೆ. ಇದರಿಂದ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಸಿಗುತ್ತಿಲ್ಲ. ಮಳೆ ಬಂತೆಂದರೆ ಪ್ರಮುಖ ರಸ್ತೆ, ತಗ್ಗು ಪ್ರದೇಶದ ವಸತಿ ಪ್ರದೇಶ, ಅಂಗಡಿ ಮುಂಗಟ್ಟು, ಶಾಲಾ ಕಾಲೇಜು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಚರಂಡಿ ನೀರು ತುಂಬಿ ಕೆಸರಿನ ರಾಡಿಯಾಗುತ್ತದೆ.

ವಾಹನ ಸವಾರರಿಗಿಂತ ಸ್ಥಳೀಯ ನಿವಾಸಿ ಆ ರಾತ್ರಿ ಈ ಭಾಗದ ಜನ ಜಾಗರಣೆ ಮಾಡಲೇಬೇಕು. ಈ ಸಮಸ್ಯೆಗೆ ಪರಿಹಾರ ಕಲ್ಪಿಸಿ, ಜನಸಂಖ್ಯೆಗೆ ಹಾಗೂ ನಗರ ವಿಸ್ತರಣೆಗೆ ಅನುಗುಣವಾಗಿ ಚರಂಡಿ ನಿರ್ಮಿಸಿ ಎಂಬ ದಶಕಗಳ ಬೇಡಿಕೆಗೆ ಇದುವರೆಗೆ ಯಾರು ಸ್ಪಂದಿಸಿಲ್ಲ.

## ನಿರ್ಲಕ್ಷ್ಯಕ್ಕೆ ಹಿಡಿದ ಕನ್ನಡಿ

ಚರಂಡಿ ನಿರ್ಮಿಸದೆ ರಸ್ತೆ ಅಭಿವೃದ್ಧಿ, ವಸತಿ ಪ್ರದೇಶಗಳ ಚರಂಡಿ ನೀರು ರಾಜಕಾಲುವೆಗೆ ಸಂಪರ್ಕ ಕಲ್ಪಿಸಿಲ್ಲ. ನಗರದಲ್ಲಿ ಮೂರು ಇಲ್ಲವೇ ಆರು ತಿಂಗಳಿಗೊಮ್ಮೆ ಕೈಗೊಳ್ಳುವ ಅವೈಜ್ಞಾನಿಕ ಕಾಮಗಾರಿ, ನಗರದಲ್ಲಿ ಹಾದು ಹೋಗಿರುವ ಅವೈಜ್ಞಾನಿಕ ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳು, ಸ್ಥಳೀಯ ಆಡಳಿತ ಹಾಗೂ ಹೆದ್ದಾರಿ ಪ್ರಾಧಿಕಾರದ ನಡುವೆ ಹೊಂದಾಣಿಕೆ ಇಲ್ಲದ ಕಾರಣ ಪ್ರತಿ ಮಳೆಗಾಲದಲ್ಲೂ ಅವ್ಯವಸ್ಥೆ ಉಂಟಾಗುತ್ತಿದೆ.

ನಿರ್ಲಕ್ಷ್ಯಕ್ಕೆ ಹಿಡಿದ ಕನ್ನಡಿ ರಸ್ತೆಗಳೇ ವಾಹನ ನಿಲುಗಡೆ ಸ್ಥಳ. ಆಗಲೋ ಈಗಲೋ ಬೀಳುವ ಹಂತದಲ್ಲಿರುವ ಚರಂಡಿಗಳ ಮೇಲೆ ಪಾದಚಾರಿಗಳ ಓಡಾಟ, ಮಳೆ ಬಂದರೆ ಕೆಸರಿನ ರಾಡಿಯ ಮೇಲೆ ವಾಹನಗಳು ಮತ್ತು ಪಾದಚಾರಿಗಳ ಸರ್ಕಸ್, ಚರಂಡಿಗಳು ಮತ್ತು ರಸ್ತೆಗಳೇ ಕಸ ಸುರಿಯುವ ತಾಣ. ಇದು ಆಡಳಿತ ವರಗದ ನಿರ್ಲಕ್ಷ್ಯಕ್ಕೆ ಹಿಡಿದ ಕನ್ನಡಿಯಾಗಿದೆ.

ಶ್ರೀನಿವಾಸ್, ಬೈಕ್ ಸವಾರ ಸಮನ್ವಯ ಕೊರತೆ ಅಧಿಕಾರಿಗಳಿಗೆ ಸಮಸ್ಯೆ ಬಗ್ಗೆ ಹೇಳಲು ಹೋದರೆ ಇದು ನಮ್ಮ ವ್ಯಾಪ್ತಿಗೆ ಸೇರಿದ್ದಲ್ಲ ಎಂದು ಪರಸ್ಪರ ಬೆರಳು ತೋರುತ್ತಾ ಕಾಲಹರಣ ಮಾಡುತ್ತಿದ್ದಾರೆ. ತಾಲ್ಲೂಕು ಆಡಳಿತ, ನಗರ ಸಭೆ ಹಾಗೂ ಹೆದ್ದಾರಿ ಅಭಿವೃದ್ಧಿ ಪ್ರಾಧಿಕಾರ ಹಾಗೂ ಪ್ರತಿನಿದಿಗಳ ಸಮನ್ವಯ ಕೊರತೆಯಿಂದ ಸಮಸ್ಯೆ ಬೇಗ ಪರಿಹಾರ ಸಿಗುತ್ತಿಲ್ಲ ಎನ್ನುತ್ತಾರೆ ಸ್ಥಳೀಯರು.

ನಗರೀಕರಣ ಒತ್ತುವರಿ ಭೂತ

## ಶಾಪವಾದ ಹೆದ್ದಾರಿ

ಕೋಲಾರ-ಹೊಸಕೋಟೆಯ ರಾಷ್ಟ್ರೀಯ ಹೆದ್ದಾರಿ-75, ಚೆನ್ನೈ ಎಕ್ಸ್‌ಪ್ರೆಸ್ ವೇ, ಶಿಡ್ಲಘಟ್ಟ ಹೊಸಕೋಟೆ ಮತ್ತು ಮಾಲೂರಿನ ರಾಜ್ಯ ಹೆದ್ದಾರಿ 95, ಹೊಸಕೋಟೆ-ಚಿಂತಾಮಣಿ ರಾಜ್ಯ ಹೆದ್ದಾರಿ 82, ಸೂಲಿಬೆಲೆ ಹೊಸಕೋಟೆ ಮತ್ತು ಚಿಕ್ಕ ತಿರುಪತಿ ರಾಜ್ಯ ಹೆದ್ದಾರಿ 648 ಹೀಗೆ ಐದು ಹೆದ್ದಾರಿಗಳು ನಗರದಲ್ಲಿ ಹಾದು ಹೋಗಿದ್ದು, ಇವು ಅವೈಜ್ಞಾನಿಕ ಎಂಬುದು ಸಾರ್ವಜನಿಕರ ಆರೋಪ. ಹೆದ್ದಾರಿ ಪ್ರಾಧಿಕಾರದ ಅವೈಜ್ಞಾನಿಕ ಚರಂಡಿ ಮತ್ತು ನಿರ್ವಹಣೆಯಲ್ಲಿ ನಿರ್ಲಕ್ಷವು ಅವಾಂತರಕ್ಕೆ ಕಾರಣವಾಗಿದೆ.

# ಗುಂಡಿ ಬಿದ್ದ ರಸ್ತೆಗಳು, ಚರಂಡಿ ತುಂಬ ಕಟ್ಟಡದ ತಾಜ್ಯ :ಸೌಲಭ್ಯ ವಂಚಿತ ರಾಜು ಬಡಾವಣೆ

• ಉದಯವಾಹಿನಿ, ರಾಜರಾಜೇಶ್ವರಿನಗರ

ಗುಂಡಿ ಬಿದ್ದ ರಸ್ತೆಗಳು, ಚರಂಡಿ ತುಂಬ ಕಟ್ಟಡದ ತಾಜ್ಯ, ಒಡೆದ ಮ್ಯಾನ್‌ಹೋಲ್ ಮುಚ್ಚಳ, ರಸ್ತೆ ಮೇಲೆ ಹರಿಯುವ ಗಲೀಜು ನೀರು, ಮೂಗು ಮುಚ್ಚಿಕೊಂಡು ಓಡಾಡಬೇಕಾದ ಸ್ಥಿತಿ ಇದು ನಾಗದೇವನಹಳ್ಳಿಯ ರಾಜು ಬಡಾವಣೆಯ ನಿವಾಸಿಗಳು ಅನುಭವಿಸುತ್ತಿರುವ ಸಮಸ್ಯೆ. ನೇತಾಜಿ ರಸ್ತೆಯ ಚರಂಡಿಗೆ ಕಟ್ಟಡದ ತ್ಯಾಜ್ಯ ತಂದು ಸುರಿಯಲಾಗಿದೆ. ಇದರ ಪರಿಣಾಮ ಜೋರು ಮಳೆ ಬಂದಾಗ ಚರಡಿ ನೀರು ರಸ್ತೆ ಮೇಲೆ ಹರಿಯುತ್ತದೆ. ಗಲೀಜು ನೀರಿನಲ್ಲಿ ಜನರು ಓಡಾಡುವಂತಾಗಿದೆ. ಮತ್ತೊಂದೆಡೆ ಮ್ಯಾನ್ ಹೋಲ್‌ಗೆ ಹಾಕಿರುವ ಮುಚ್ಚಳ ಸಹ ಒಡೆದು ಹೋಗಿದ್ದು, ವಾಹನ ಸಂಚಾರ ಕಷ್ಟವಾಗಿದೆ. ರಾತ್ರಿ ವೇಳೆ ದಿಚಕ್ರ ವಾಹನ ಸವಾರರು ಬಿದ್ದು ಗಾಯಗೊಂಡಿರುವ ಉದಾಹರಣೆಯೂ ಇದೆ. ಚರಂಡಿ ತುಂಬ ತ್ಯಾಜ್ಯ ತುಂಬಿರುವುದರಿಂದ ಸೊಳ್ಳೆ, ನೊಣಗಳ ಹಾವಳಿ ವಿಪರೀತವಾಗಿದೆ. ಮ್ಯಾನ್‌ಹೋಲ್ ಮುಚ್ಚಳ ದುರಸ್ತಿ ಮಾಡಬೇಕು. ಒಳಚರಂಡಿ ತುಂಬಿ ರಸ್ತೆಯಲ್ಲಿ ನೀರು ಹರಿದರೆ ದುರ್ವಾಸನೆ ಮೂಗಿಗೆ ಬಡಿಯುತ್ತದೆ ಎಂದು ಸ್ಥಳೀಯರು ಬೇಸರ ವ್ಯಕ್ತಪಡಿಸಿದರು. ಬಡಾವಣೆಯ ಕೆಲ ರಸ್ತೆಗಳ ಡಾಂಬರು ಕಿತ್ತುಹೋಗಿ ಹಲವು ವರ್ಷಗಳು ಕಳೆದಿದ್ದರೂ ಜಿಬಿಎ ಪಶ್ಚಿಮ ನಗರ ಪಾಲಿಕೆ ಅಧಿಕಾರಿಗಳು, ಬೆಂಗಳೂರು ನೀರು ಸರಬರಾಜು ಮಂಡಳಿ ಅಧಿಕಾರಿಗಳು ಚರಂಡಿ ಮತ್ತು ರಸ್ತೆ ಅಭಿವೃದ್ಧಿಪಡಿಸಲು ಮುಂದಾಗುತ್ತಿಲ್ಲ. ವಾಹನ ಸವಾರರು ಬಿದ್ದು ಗಾಯಗೊಂಡಿರುವ ಉದಾಹರಣೆಯೂ ಇದೆ.

ಮತ್ತೊಂದೆಡೆ ಮನೆ ಕಟ್ಟುವ ಸಲುವಾಗಿ ವಿದ್ಯುತ್, ನೀರು, ಒಳಚರಂಡಿ ಸಂಪರ್ಕ ಪಡೆಯಲು ರಸ್ತೆ ಅಗೆದು ಸರಿಯಾಗಿ ಮುಚ್ಚದ ಕಾರಣ ಗುಂಡಿಗಳು ಬೀಳುತ್ತಿವೆ' ಎಂದು ಆಕ್ರೋಶ ವ್ಯಕ್ತಪಡಿಸಿದರು.

# ತಪ್ಪಿದ ವಿಎಸ್‌ಎಸ್‌ಎನ್ ಅಧ್ಯಕ್ಷ ಸ್ಥಾನ ಜೆಡಿಎಸ್ ಮುಖಂಡನ ವಿರುದ್ಧ ದೂರು

• ಉದಯವಾಹಿನಿ,ದೊಡ್ಡಬಳ್ಳಾಪುರ:

ಜೆಡಿಎಸ್ ಹೆಸರು ಹೇಳಿಕೊಂಡು ತಿರುಗಾಡುವ ಹಸ್ಕೂರ್ ಆನಂದ್ ಅವರು ಕಾಂಗ್ರೆಸ್ ಪಕ್ಷದೊಂದಿಗೆ ಕೈಜೋಡಿಸಿ ನಿಷ್ಠಾವಂತ ಜೆಡಿಎಸ್ ಬೆಂಬಲಿತ ಅಭ್ಯರ್ಥಿ ರಾಮಮೂರ್ತಿ ಅವರಿಗೆ ಕೆಸ್ತೂರು ವಿಎಸ್‌ಎಸ್ ಎನ್ ಅಧ್ಯಕ್ಷ ಸ್ಥಾನ ತಪ್ಪುವಂತೆ ಮಾಡಿದ್ದಾರೆ ಎಂದು ಜೆಡಿಎಸ್ ತಾಲ್ಲೂಕು ಘಟಕದ ಅಧ್ಯಕ್ಷ ಹರೀಶ್‌ಗೌಡ ಆರೋಪಿಸಿದರು.

ಕೆಸ್ತೂರು ಗ್ರಾಮ ಪಂಚಾಯಿತಿ ಜೆಡಿಎಸ್ ಪಕ್ಷದ ಭದ್ರಕೋಟೆಯಾಗಿತ್ತು. ಆದರೆ ಇತ್ತೀಚಿನ ಬೆಳವಣಿಗೆಯಿಂದ ಜೆಡಿಎಸ್ ಪಕ್ಷ ಎರಡು ಬಣಗಳಾಗಿವೆ. ಆಂತಕರಿಕ ಬೇಗುದಿಯಿಂದ ಪಕ್ಷದ ಅಭ್ಯರ್ಥಿಗೆ ದೊರೆಯಬೇಕಿದ್ದ ಅಧ್ಯಕ್ಷ ಸ್ಥಾನ ಕಾಂಗ್ರೆಸ್ ಬೆಂಬಲಿತರ ಪಾಲಿಗಿದೆ. ಕಾಂಗ್ರೆಸ್ ಮುಖಂಡರು ಅವಕಾಶವಾದಿ ರಾಜಕಾರಣ ಮಾಡುತ್ತಿದ್ದಾರೆ ಎಂದು ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ದೂರಿದರು.

ಹುಸ್ಕೂರ್ ಆನಂದ್ ಅವರು ಅಧ್ಯಕ್ಷರಾಗಿ ಮಾಡುವುದಾಗಿ ಕೊಟ್ಟ ಮಾತಿಗೆ ತಪ್ಪಿದ್ದಾರೆ. ಅವರ ಮಾತು ನಂಬಿ ಮಗನ ಲಗ್ನ ಪತ್ರಿಕೆಯಲ್ಲಿ ಕೆಸ್ತೂರು ವಿ.ಎಸ್.ಎಸ್.ಎನ್ ಅಧ್ಯಕ್ಷ ಎಂದು ಮುದ್ರಿಸಿದ್ದೆ. ಈಗ ಅವರು ಕೊನೆ ಕ್ಷಣದಲ್ಲಿ ಬೇರೆಯವರನ್ನು ಅಧ್ಯಕ್ಷರಾಗಿ ಮಾಡಿ ನನಗೆ ಮೋಸ ಮಾಡಿದ್ದಾರೆ ಎಂದು ಅಧ್ಯಕ್ಷ ಸ್ಥಾನದ ಅಂಕಾಕ್ಷಿಯಾಗಿದ್ದ ರಾಮಮೂರ್ತಿ ಆಕ್ರೋಶ ವ್ಯಕ್ತಪಡಿಸಿದರು.

# ಸಿಗರೇಟ್ ಹೊಗೆ ವಿಚಾರಕ್ಕೆ ಆಟೋ ಚಾಲಕನ ಭೀಕರ ಕೊಲೆ; ಆರೋಪಿ ಅರೆಸ್ಟ

• ಉದಯವಾಹಿನಿ, ಬೆಂಗಳೂರು



✦ ಉದಯವಾಹಿನಿ ಚಿತ್ರ

ಕ್ಷುಲ್ಲಕ ಕಾರಣಕ್ಕೆ ಆರಂಭವಾದ ಗಲಾಟೆಯೊಂದು ಹತ್ಯೆಯಲ್ಲಿ ಅಂತ್ಯವಾಗಿರುವ ಘಟನೆ ಭಾನುವಾರ ತಡರಾತ್ರಿ ಅಬ್ಬಿಗೆರೆ ಮುಖ್ಯರಸ್ತೆಯಲ್ಲಿ ನಡೆದಿದೆ. ಸಿಗರೇಟ್ ಹೊಗೆ ಬಿಟ್ಟ ವಿಚಾರಕ್ಕೆ ಶುರುವಾದ ಜಗಳದಲ್ಲಿ ಆಟೋ ಚಾಲಕನೋರ್ವನನ್ನು ಡ್ರ್ಯಾಗರ್‌ನಿಂದ ಇರಿದು ಭೀಕರವಾಗಿ ಹತ್ಯೆಗೈಯ್ಯಲಾಗಿದೆ. ಬಾಗಲೂರಿನ ರಾಜಾ ಸಾಬ್ ಪಾಳ್ಯದ ನಿವಾಸಿ ಸೈಯದ್ ಶಫೀ (36) ಹತ್ಯೆಯಾದ ಆಟೋ ಚಾಲಕ. ಘಟನೆಗೆ ಸಂಬಂಧಿಸಿದಂತೆ ಆರೋಪಿ ದರ್ಶನ್ ಎಂಬಾತನನ್ನು ಚಿಕ್ಕಬಾಣಾವರ ಠಾಣೆ ಪೊಲೀಸರು ಬಂಧಿಸಿದ್ದಾರೆ.

**ಪ್ರಕರಣದ ವಿವರ:** ಸಮಯಕ್ಕೆ ಅಬ್ಬಿಗೆರೆ ಮುಖ್ಯರಸ್ತೆಯ ಮೀನಾ ಬಾರ್ ಬಳಿ ಬಂದಿದ್ದ ಶಫಿ ಮದ್ಯ ಖರೀದಿಸಿದ್ದ. ಬಾರ್ ಮುಚ್ಚುವ ಸಮಯವಾದ್ದರಿಂದ ಮುಂಭಾಗದಲ್ಲೇ ಆಟೋ ನಿಲ್ಲಿಸಿ ಗೆಳೆಯನೊಂದಿಗೆ ಮದ್ಯಪಾನ ಮಾಡುತ್ತಿದ್ದ. ಅದೇ ಸಂದರ್ಭದಲ್ಲಿ ಆರೋಪಿ ದರ್ಶನ್ ಸಹ ಆತನ ಸ್ನೇಹಿತರೊಂದಿಗೆ ಬಾರ್‌ನಿಂದ ಹೊರಬಂದಿದ್ದ. ಬಳಿಕ ಶಫಿಯ ಆಟೋ ಪಕ್ಕದಲ್ಲೇ ನಿಂತು ಸಿಗರೇಟ್ ಸೇದುತ್ತ, ಮೂತ್ರ ವಿಸರ್ಜನೆ ಮಾಡುತ್ತಾ ನಿಂತಿದ್ದ. ಸಿಗರೇಟ್ ಹೊಗೆ ತನ್ನತ್ತ ಬಂದಿದ್ದರಿಂದ ಆರೋಪಿಯತ್ತ ತಿರುಗಿ ಗುರಾಯಿಸಿದ್ದ. ಇದರಿಂದ ದರ್ಶನ್ ಹಾಗೂ ಶಫಿ ನಡುವೆ ಮಾತಿಗೆ ಮಾತು ಬೆಳೆದು ಗಲಾಟೆ ತಾರಕಕ್ಕೇರಿದೆ. ಸಿಟ್ಟಿಗೆದ್ದ ದರ್ಶನ್ ತನ್ನ ಬಳಿ ಇದ್ದ ಡ್ರ್ಯಾಗರ್‌ನಿಂದ ಶಫಿಯ ಕುತ್ತಿಗೆಗೆ ಮನಬಂದಂತೆ ಇರಿದಿದ್ದಾನೆ.

ತೀವ್ರ ರಕ್ತಸ್ರಾವದಿಂದಾಗಿ ಶಫಿ ರಸ್ತೆಯಲ್ಲೇ ಸಾವನ್ನಪ್ಪಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಘಟನೆಗೆ ಸಂಬಂಧಿಸಿದಂತೆ ಪ್ರಕರಣ ದಾಖಲಿಸಿದ ಚಿಕ್ಕಬಾಣಾವರ ಠಾಣೆ ಪೊಲೀಸರು ಆರೋಪಿ ದರ್ಶನ್‌ನನ್ನು ಬಂಧಿಸಿದ್ದಾರೆ. ದರ್ಶನ್ ವಿರುದ್ಧ 2023ರಲ್ಲಿ ಹಲ್ಲೆ ಪ್ರಕರಣವೊಂದು ದಾಖಲಾಗಿರುವುದು ಬೆಳಕಿಗೆ ಬಂದಿದ್ದು, ತನಿಖೆ ನಡೆಸಲಾಗುತ್ತಿದೆ ಎಂದು ವಾಯುವ್ಯ ವಿಭಾಗದ ಡಿಸಿಪಿ ನಾಗೇಶ್ ಡಿ. ಎಲ್ ಮಾಹಿತಿ ನೀಡಿದರು.

ಕೊಲೆಯಾದ ಶಫಿ ಯಶವಂತಪುರದ ಗ್ಯಾರೇಜ್ ಒಂದರಲ್ಲಿ ಕಳೆದ 15 ವರ್ಷಗಳಿಂದ ಟಿಂಕರಿಂಗ್ ಕೆಲಸ ಮಾಡಿಕೊಂಡಿದ್ದ. ಜೊತೆಗೆ ಬಿಡುವಿನ ಅವಧಿಯಲ್ಲಿ ಆಟೋ ಓಡಿಸುತ್ತಿದ್ದ. ಮೃತನಿಗೆ ಪತ್ನಿ ಹಾಗೂ ಇಬ್ಬರು ಮಕ್ಕಳಿದ್ದಾರೆ. ಆದರೆ ಶಫಿ ಕುಡಿದು ಬಂದು ಗಲಾಟೆ ಮಾಡುತ್ತಿದ್ದರಿಂದ ಬೇಸತ್ತಿದ್ದ ಪತ್ನಿ, ಕಳೆದ ಆರು ತಿಂಗಳಿನಿಂದ ಆತನನ್ನು ಮನೆಗೆ ಸೇರಿಸಿರಲಿಲ್ಲ. ಆತ ಎಲ್ಲಿದ್ದ, ಏನು ಮಾಡುತಿದ್ದ ಎಂಬ ಮಾಹಿತಿ ಕುಟುಂಬಸ್ಥರಿಗೆ ಇರಲಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ.

# ಸೊಸೆ ಮೇಲೆ ಲೈಂಗಿಕ ದೌರ್ಜನ್ಯ ಆರೋಪ: ಕೇಸ್ ಸೌಹಾರ್ದಯುತಯವಾಗಿ ಇತ್ಯರ್ಥ ಭರವಸೆ

• ಉದಯವಾಹಿನಿ,ಬೆಂಗಳೂರು

ಪ್ರಕರಣವನ್ನು ಸೌಹಾರ್ದಯುತವಾಗಿ ಬಗೆಹರಿಸಿಕೊಳ್ಳುವುದಾಗಿ ಸಂತ್ರಸ್ತೆ(ಸೊಸೆ) ತಿಳಿಸಿರುವ ಹಿನ್ನೆಲೆಯಲ್ಲಿ ಪದೇ ಪದೇ ಲೈಂಗಿಕ ದೌರ್ಜನ್ಯ ಆರೋಪ ಎದುರಿಸುತ್ತಿದ್ದ 75 ವರ್ಷದ ಮಾವನಿಗೆ ಹೈಕೋರ್ಟ್ ಜಾಮೀನು ಮಂಜೂರು ಮಾಡಿದೆ.

ಜಾಮೀನು ಮಂಜೂರು ಮಾಡುವಂತೆ ಕೋರಿ ಆರೋಪಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ಜಿ. ಎಸ್ ಕಮಲ್ ಅವರಿದ್ದ ನ್ಯಾಯಪೀಠ ಜಾಮೀನು ಮಂಜೂರು ಮಾಡಿ ಆದೇಶಿಸಿದೆ.

**ಸಂತ್ರಸ್ತೆಯಿಂದ ಪ್ರಮಾಣಪತ್ರ:** ವಿಚಾರಣೆಯ ವೇಳೆ ಸಂತ್ರಸ್ತೆ ಸ್ವತಃ ನ್ಯಾಯಾಲಯಕ್ಕೆ ಹಾಜರಾಗಿ, ತನ್ನ ಪರ ವಕೀಲರ ಮೂಲಕ ಪ್ರಕರಣವನ್ನು ಸೌಹಾರ್ದಯುತವಾಗಿ ಬಗೆಹರಿಸಿಕೊಳ್ಳಲಾಗುತ್ತಿದೆ. ಆರೋಪಿಗೆ ಜಾಮೀನು ನೀಡುವುದಕ್ಕೆ ಯಾವುದೇ ಆಕ್ಷೇಪ ಇಲ್ಲ ಎಂದು ಪ್ರಮಾಣ ಪತ್ರದ ಮೂಲಕ ನ್ಯಾಯಪೀಠಕ್ಕೆ ತಿಳಿಸಿದರು.

ಈ ಅಂಶವನ್ನು ದಾಖಲಿಸಿಕೊಂಡ ನ್ಯಾಯಪೀಠ, ಆರೋಪಿಯ ವಯಸ್ಸು ಹಾಗೂ ನ್ಯಾಯಾಂಗ ಬಂಧನವನ್ನು ಪರಿಶೀಲಿಸಿ ನ್ಯಾಯಪೀಠ ಜಾಮೀನು ಮಂಜೂರು ಮಾಡಿದೆ. ಅಲ್ಲದೆ, 1 ಲಕ್ಷ ರೂ.ಗಳ ವೈಯಕ್ತಿಕ ಬಾಂಡ್, ಅದೇ ಮೊತ್ತದ ಇಬ್ಬರು ಸ್ಥಳೀಯ ಶ್ಯೂರಿಟಿಗಳನ್ನು ಸಲ್ಲಿಸುವಂತೆ ಷರತ್ತುಗಳನ್ನು ವಿಧಿಸಿದೆ.

ಜಾಮೀನು ಮಂಜೂರು ಮಾಡಿರುವುದೇ ಆರೋಪಿಯ ನಿರ್ದೋಷಿತ್ವವನ್ನು ಸಾಬೀತುಪಡಿಸುವುದಲ್ಲ. ಪ್ರಕರಣದ ವಿಚಾರಣೆ ಮುಂದುವರಿಯಲಿದ್ದು, ಆರೋಪಗಳ ಸತ್ಯಾಸತ್ಯತೆ ಬಗ್ಗೆ ಅಂತಿಮ ತೀರ್ಮಾನವನ್ನು ನ್ಯಾಯಾಲಯವೇ ಕೈಗೊಳ್ಳಲಿದೆ ಎಂದು ಪೀಠ ತನ್ನ ಆದೇಶದಲ್ಲಿ ವಿವರಿಸಿದೆ. ಪ್ರಕರಣದಲ್ಲಿ ಸಂತ್ರಸ್ತೆಯಾಗಿರುವ ಮಹಿಳೆಯು, ಪತಿ, ಅತ್ತೆ ಮತ್ತು ಮಾವನಿಂದ ನಿರಂತರ ಲೈಂಗಿಕ ದೌರ್ಜನ್ಯಕ್ಕೊಳಗಾಗಿರುವ ಬಗ್ಗೆ ಆರೋಪಿಸಿ ದೂರು ದಾಖಲಿಸಿದ್ದರು.

ಈ ಅಂಶವನ್ನು ದಾಖಲಿಸಿಕೊಂಡ ಈ ಸಂಬಂಧ ಮಾವನ, ಅತ್ತೆಯ ಕುಟುಂಬಸ್ಥರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಾಗಿತ್ತು. ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರು, ಆರೋಪಿಗೆ 75 ವರ್ಷ ವಯಸ್ಸಾಗಿದ್ದು, ಹಿರಿಯ ನಾಗರಿಕರಾಗಿದ್ದಾರೆ. ಕಳೆದ ಎಂಟು ತಿಂಗಳಿನಿಂದ ನ್ಯಾಯಾಂಗ ಬಂಧನದಲ್ಲಿದ್ದಾರೆ.

# ಆಸ್ಪತ್ರೆ ಶೌಚಾಲಯದಲ್ಲಿ ಗರ್ಭಿಣಿಯ ವಿಡಿಯೋ ಚಿತ್ರೀಕರಣ ಆರೋಪ

• ಉದಯವಾಹಿನಿ, ಬೆಂಗಳೂರು

ಪ್ರತಿಷ್ಠಿತ ಖಾಸಗಿ ಆಸ್ಪತ್ರೆಯೊಂದರ ಶೌಚಾಲಯದಲ್ಲಿ ಗರ್ಭಿಣಿ ಮಹಿಳೆಯೊಬ್ಬರ ಫೋಟೋ/ವಿಡಿಯೋ ಚಿತ್ರೀಕರಿಸಲು ಯತ್ನಿಸಿದ ಆರೋಪ ಕೇಳಿಬಂದಿದೆ. ನೊಂದ ಮಹಿಳೆ ನೀಡಿದ ದೂರಿನನ್ವಯ ಆರೋಪಿತ ಹೌಸ್‌ಕೀಪಿಂಗ್ ಸಿಬ್ಬಂದಿ ಕೃಷ್ಣ ರಾಮ್ ಪಾಂಗಿಂಗ್ ಮತ್ತು ಆಸ್ಪತ್ರೆ ಆಡಳಿತ ಮಂಡಳಿ ವಿರುದ್ಧ ವರ್ತೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ದೂರುದಾರ ಮಹಿಳೆ ಮೇ 21ರಂದು ಮಧ್ಯಾಹ್ನ ಸರ್ಜಾಪುರ ರಸ್ತೆಯಲ್ಲಿರುವ ಖಾಸಗಿ ಆಸ್ಪತ್ರೆಗೆ ಭೇಟಿ ನೀಡಿದ್ದರು.

ಈ ವೇಳೆ ಆಸ್ಪತ್ರೆಯ ಶೌಚಾಲಯವನ್ನು ಬಳಸುತ್ತಿದ್ದಾಗ, ಅಲ್ಲಿನ ಹೌಸ್‌ಕೀಪಿಂಗ್ ಸಿಬ್ಬಂದಿ ಕೃಷ್ಣ ರಾಮ್ ಪಾಂಗಿಂಗ್ ಎಂಬಾತ ಸಂಶಯಾಸ್ಪದವಾಗಿ ವರ್ತಿಸುತ್ತಿರುವುದು ಅವರ ಗಮನಕ್ಕೆ ಬಂದಿತ್ತು. ಮೊಬೈಲ್ ಫೋನ್ ಬಳಸಿ ಶೌಚಾಲಯದ ಒಳಗಿನ ದೃಶ್ಯಗಳನ್ನು ಚಿತ್ರೀಕರಣ ಮಾಡುತ್ತಿರುವುದನ್ನು ಗಮನಿಸಿದ ಮಹಿಳೆ ತಕ್ಷಣ ಆತನನ್ನು ಪ್ರಶ್ನಿಸಿದ್ದರು. ಇದರಿಂದ ಗಾಬರಿಗೊಂಡ ಆರೋಪಿ ಸ್ಥಳದಿಂದ ಪರಾರಿಯಾಗಲು ಯತ್ನಿಸಿದ್ದ. ನೊಂದ ಮಹಿಳೆ ತಕ್ಷಣ ಆಸ್ಪತ್ರೆಯ ಆಡಳಿತ ಮಂಡಳಿಗೆ ಮಾಹಿತಿ ನೀಡಿದ್ದಾರೆ.

ಆತನ ಮೊಬೈಲ್ ಪರಿಶೀಲನೆ ವೇಳೆ ಹಲವು ಮಹಿಳೆಯರ ಫೋಟೋಗಳು, ವಿಡಿಯೋಗಳು ಪತ್ತೆಯಾಗಿವೆ ಎಂದು ನೊಂದ ಮಹಿಳೆ ದೂರಿದ್ದಾರೆ. ಈ ಘಟನೆಯಿಂದ ಆಘಾತಕ್ಕೊಳಗಾದ ಮಹಿಳೆ ತಕ್ಷಣ ವರ್ತೂರು ಪೊಲೀಸ್ ಠಾಣೆಗೆ ತೆರಳಿ ದೂರು ನೀಡಿದ್ದರು.

# ನನ್ನ ಮೂರನೇ ಅಧ್ಯಾಯ; ರಾಜಕೀಯಕ್ಕಿಳಿದ ನಿರೂಪಕಿ ಜಾಹ್ನವಿ ಹೇಳಿದ್ದಿಷ್ಟು...

• ಉದಯವಾಹಿನಿ,ದೊಡ್ಡಬಳ್ಳಾಪುರ:

ಬಿಗ್‌ಬಾಸ್ 12ರಲ್ಲಿ ಸ್ಪರ್ಧಿಯಾಗಿ ಆಗಮಿಸಿದ್ದ ನಿರೂಪಕಿ ಜಾಹ್ನವಿ ಅವರು ಮೇ 24 ರಂದು ಜೆಡಿಎಸ್‌ಗೆ ಸೇರ್ಪಡೆಯಾಗಿದ್ದಾರೆ.

ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, 'ಮಾಜಿ ಮುಖ್ಯಮಂತ್ರಿ, ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವರಾಗಿರುವ ಕುಮಾರಸ್ವಾಮಿ ಅವರ ನೇತೃತ್ವದಲ್ಲಿ ಜೆಡಿಎಸ್‌ಗೆ ಸೇರ್ಪಡೆಯಾಗಿದ್ದೇನೆ. ನನ್ನ ಈ ಬೆಳವಣಿಗೆಗೆ ರಾಜ್ಯದ ಜನರ ಆಶೀರ್ವಾದವೇ ಕಾರಣ. ವಿವಿಧ ಮಾಧ್ಯಮ ಸಂಸ್ಥೆಗಳಲ್ಲಿ 12 ವರ್ಷ ನ್ಯೂಸ್ ಅಂಕರ್ ಆಗಿ ಸೇವೆ ಸಲ್ಲಿಸಿದ್ದೆ. ಇದು ವೃತ್ತಿ ಜೀವನದ ಮೊದಲ ಪಯಣ. ಬಳಿಕ ಕಲರ್ಸ್ ಕನ್ನಡ ವಾಹಿನಿಯಿಂದ ಜೀವನದ ಎರಡನೇ ಅಧ್ಯಾಯ ಆರಂಭ ವಾಯಿತು. ರಿಯಾಲಿಟಿ ಶೋ, ಆಂಕರ್, ಬಿಗ್‌ಬಾಸ್‌ನಲ್ಲಿ ಸ್ಪರ್ಧಿಯಾಗಿ ಆಗಮಿಸಿದ್ದೆ. ಈಗ ಮೂರನೇ ಅಧ್ಯಾಯ ರಾಜಕೀಯ ಪಯಣಕ್ಕೆ ಕಾಲಿಟ್ಟಿದ್ದೇನೆ' ಎಂದು ಹೇಳಿಕೊಂಡಿದ್ದಾರೆ.

# ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಕಾರು ಪಲ್ಟಿ: ಪ್ರಯಾಣಿಕರು ಪಾರು

• ಉದಯ ವಾಹಿನಿ, ದೇವನಹಳ್ಳಿ

ಇಲ್ಲಿನ ಕೆಂಪೇಗೌಡ ಅಂತರ ರಾಷ್ಟ್ರೀಯ ವಿಮಾನ ನಿಲ್ದಾಣದ ಆವರಣದಲ್ಲಿ ಮುಂಜಾನೆ ಕಾರೊಂದು ನಿಯಂತ್ರಣ ತಪ್ಪಿ ಪಲ್ಟಿಯಾಗಿದೆ.

ಘಟನೆಯಲ್ಲಿ ಕಾರಿನಲ್ಲಿದ್ದ ಚಾಲಕ ಹಾಗೂ ಒಬ್ಬ ಪ್ರಯಾಣಿಕ ಸಣ್ಣಪುಟ್ಟ ಗಾಯಗಳೊಂದಿಗೆ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಪ್ರಯಾಣಿಕರನ್ನು ವಿಮಾನ ನಿಲ್ದಾಣಕ್ಕೆ ಬಿಡಲು ತೆರಳುತ್ತಿದ್ದ ವೇಳೆ ಈ ಘಟನೆ ನಡೆದಿದೆ.

ಭದ್ರತಾ ತಪಾಸಣೆ ಕೇಂದ್ರದ ಮುಂಭಾಗ ಕಾರು ಅತಿವೇಗದಿಂದ ಬರುತ್ತಿದ್ದಾಗ ಚಾಲಕನ ನಿಯಂತ್ರಣ ತಪ್ಪಿ ರಸ್ತೆ ಬದಿಯಿಂದ ಪಲ್ಟಿಯಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಅಪಘಾತದ ಪರಿಣಾಮ ಕೆಲಕಾಲ ವಾಹನ ಸಂಚಾರದಲ್ಲಿ ಅಸ್ತವ್ಯಸ್ತತೆ ಉಂಟಾಯಿತು. ಬಳಿಕ ಭದ್ರತಾ ಸಿಬ್ಬಂದಿ ಮತ್ತು ಪೊಲೀಸರು ಸ್ಥಳಕ್ಕೆ ಆಗಮಿಸಿ ಕಾರನ್ನು ತೆರವುಗೊಳಿಸಿ ವಾಹನ ದಟ್ಟಣೆ ತಿಳಿಗೊಳಿಸಿದರು.

# ಬನ್ನೇರುಘಟ್ಟದಲ್ಲಿ ಪ್ರಾಣಿ ದತ್ತು ಯೋಜನೆಯಿಂದ 30 ಲಕ್ಷ ಆದಾಯ

## ಉಚಿತವಾಗಿ ಕಲಾವಿದರಿಗೆ 10 ಲಕ್ಷ ರೂ. ಆರೋಗ್ಯ ವಿಮಾ ಪಾಲಿಸಿ

• ಉದಯವಾಹಿನಿ, ಬೆಂಗಳೂರು

ಬನ್ನೇರುಘಟ್ಟ ಜೈವಿಕ ಉದ್ಯಾನದಲ್ಲಿ(ಬಿಬಿಪಿ) ಪ್ರಾಣಿ, ಪಕ್ಷಿಗಳ ದತ್ತು ಪಡೆಯುವುದನ್ನು ಉತ್ತೇಜಿಸಲು ಕೈಗೊಂಡ ಸುಧಾರಣಾ ಕ್ರಮಗಳು ಫಲ ನೀಡುತ್ತಿವೆ. ದತ್ತು ಯೋಜನೆಯಡಿ ಒಂದೇ ವರ್ಷದಲ್ಲಿ 30 ಲಕ್ಷಕ್ಕೂ ಹೆಚ್ಚು ಆದಾಯ ಲಭಿಸಿದೆ.

ಜನರಲ್ಲಿ ಪ್ರಾಣಿ, ಪಕ್ಷಿಗಳ ಮೇಲಿನ ಪ್ರೀತಿ ಹೆಚ್ಚಿಸುವ ನಿಟ್ಟಿನಲ್ಲಿ ಉದ್ಯಾನವು ಕೆಲವು ವರ್ಷಗಳ ಹಿಂದೆ ಪ್ರಾಣಿ ದತ್ತು ಯೋಜನೆ ಆರಂಭಿಸಿದೆ. ಹುಲಿ, ಸಿಂಹ, ಚಿರತೆ, ಆನೆ, ಜಿರಾಫ್ ಸಹಿತ ಪ್ರಮುಖ ಪ್ರಾಣಿಗಳು ಮಾತ್ರವಲ್ಲದೇ ಪುಟ್ಟ ಪ್ರಾಣಿ, ಪಕ್ಷಿಗಳನ್ನು ವರ್ಷದ ಮಟ್ಟಿಗೆ ದತ್ತು ಪಡೆಯಲು ಅವಕಾಶ ನೀಡಲಾಗಿತ್ತು.

ಕೋವಿಡ್ ಕಾಲದಲ್ಲಿ ಪ್ರಾಣಿ, ಪಕ್ಷಿಗಳಿಗೆ ಆಹಾರ ಒದಗಿಸಲು ದೇಣಿಗೆಯೂ ಸೇರಿದಂತೆ



✦ ಉದಯವಾಹಿನಿ ಚಿತ್ರ

ದತ್ತು ಯೋಜನೆಯಡಿ ಸುಮಾರು 2 ಕೋಟಿ ಆದಾಯ ಲಭಿಸಿತ್ತು. ಆ ನಂತರ ಕಡಿಮೆಯಾಗಿತ್ತು.

ಜೈವಿಕ ಉದ್ಯಾನಕ್ಕೆ ಹೆಚ್ಚಿನ ಸಂಖ್ಯೆಯ ಪ್ರವಾಸಿಗರು, ಬೆಂಗಳೂರಿನಂತಹ ನಗರದಲ್ಲಿ ಪ್ರಮುಖ ಸೆಲೆಬ್ರಿಟಿಗಳು, ವಿವಿಧ ಕ್ಷೇತ್ರದ ಗಣ್ಯರು ಇದ್ದರೂ ಯೋಜನೆಗೆ ನಿರೀಕ್ಷಿತ ಪ್ರತಿಕ್ರಿಯೆ ಬಂದಿರಲಿಲ್ಲ. ಈ ಕಾರಣದಿಂದ ಕಳೆದ ವರ್ಷ ಕೆಲ ನಿಯಮಗಳನ್ನು ಬದಲಿಸಿದ್ದು, ಹೊಸ ಮಾರ್ಗಸೂಚಿಗಳನ್ನು ಬಿಬಿಪಿ ರೂಪಿಸಿದೆ.

ನಟಿ ಸಂಯುಕ್ತ ಹೊರನಾಡು ಅವರು ಸಿಂಚನಾ ಹೆಸರಿನ ಹುಲಿಯನ್ನು ವರ್ಷದ ಅವಧಿಗೆ 2 ಲಕ್ಷ ಪಾವತಿಸಿ ದತ್ತು ಪಡೆದಿದ್ದಾರೆ. ಉಳಿದಂತೆ ಉದ್ಯಮ ವಲಯ, ವಿವಿಧ ಸಂಸ್ಥೆಯವರು ದತ್ತು ಪಡೆದುಕೊಂಡಿದ್ದಾರೆ.

ಮೈಸೂರಿನ ಚಾಮರಾಜೇಂದ್ರ ಮೃಗಾಲಯದ ಮಾದರಿಯಲ್ಲಿಯೇ ದತ್ತು ಯೋಜನೆ ಮತ್ತಷ್ಟು ಜನಪ್ರಿಯಗೊಳಿಸಲು ಸೆಲೆಬ್ರೆಟಿಗಳತ್ತ ಗಮನ ಹರಿಸುತ್ತಿದೆ. ಸಾಮಾಜಿಕ ಮಾಧ್ಯಮ ಬಳಸಿಕೊಂಡು ಚಟುವಟಿಕೆಗಳನ್ನು ನಡೆಸಲಾಗುತ್ತಿದೆ.

ಮೊದಲು ಒಂದು ವರ್ಷಕ್ಕೆ ದತ್ತು ಪಡೆಯಲು ಇದ್ದ ಅವಕಾಶವನ್ನು ಈಗ ಐದು ವರ್ಷಕ್ಕೆ ವಿಸ್ತರಣೆ ಮಾಡಿದೆ. ಹೊಸ ನೀತಿಯಡಿ 5 ವರ್ಷಗಳವರೆಗೆ ದತ್ತು ಪಡೆಯಲು ಅವಕಾಶವಿದೆ. ಇದಲ್ಲದೇ ನಿಮಗೆ ಇಷ್ಟವಾದ ಪ್ರಾಣಿಗಳಿಗೆ ಹೆಸರಿಡುವ ಅವಕಾಶವನ್ನೂ ಮಾಡಿಕೊಡಲಾಗಿದೆ. ದತ್ತು ಪಡೆದವರಿಗೆ ಪ್ರಮಾಣಪತ್ರ, ಪ್ರಾಣಿ, ಪಕ್ಷಿ ಮನೆ ಆವರಣದಲ್ಲಿ ದತ್ತು ಪಡೆದವರ ಹೆಸರಿನ ಫಲಕ, 5 ವರ್ಷಗಳವರೆಗೆ ವಾರ್ಷಿಕ 5 ಉಚಿತ ಪ್ರವೇಶ ಪಾಸ್ ಕೂಡ ನೀಡಲಾಗುತ್ತದೆ.

ಕೋವಿಡ್ ಕಾಲದಲ್ಲಿ ಉದ್ಯಾನ ಮೂರ್ನಾಲ್ಕು ತಿಂಗಳು ಬಂದ್ ಆಗಿದ್ದರಿಂದ ಆದಾಯ ಕುಸಿತಗೊಂಡು ಪ್ರಾಣಿ, ಪಕ್ಷಿಗಳಿಗೆ ಆಹಾರ ಒದಗಿಸುವುದು ಕಷ್ಟವಾಗಿತ್ತು. ಆಗ ಹಲವಾರು ಮಂದಿ ದತ್ತು ನೀಡಲು, ಒಂದು ದಿನದ ಆಹಾರ ಒದಗಿಸುವ ಜತೆಗೆ ದೇಣಿಗೆ ನೀಡಲು ಮುಂದೆ ಬಂದರು. 2021-22ರಲ್ಲಿ ಪ್ರತಿ ವರ್ಷ ದತ್ತು ಯೋಜನೆಯಡಿ ಸಂಗ್ರಹವಾಗುವ ಆರ್ಥಿಕ ಸಂಪನ್ಮೂಲದ ಮೂರು ಪಟ್ಟು ಸಂಗ್ರಹವಾಗಿತ್ತು. ಇದರಲ್ಲಿ 770 ಮಂದಿ ಪ್ರಾಣಿ, ಪಕ್ಷಿ ದತ್ತು ಪಡೆದಿದ್ದರಿಂದ 1.24 ಕೋಟಿ, ಒಂದು ದಿನದ ಆಹಾರ ಒದಗಿಸುವ ಚಟುವಟಿಕೆಯಡಿ 200 ಮಂದಿ ನೆರವಾಗಿದ್ದರಿಂದ 10.52 ಲಕ್ಷ, ದೇಣಿಗೆ ರೂಪದಲ್ಲಿ 57.47 ಲಕ್ಷ ಸೇರಿ ಒಟ್ಟು 1.92 ಕೋಟಿ ಸಂಗ್ರಹವಾಗಿತ್ತು. ಇದು ಬಿಬಿಪಿ ಇತಿಹಾಸದಲ್ಲಿ ದಾಖಲೆಯಾಗಿದೆ.

> ಮೂರ್ನಾಲ್ಕು ವರ್ಷದಿಂದ ವಿವಿಧ ಕ್ಷೇತ್ರದವರನ್ನು ಸಂಪರ್ಕಿಸುತ್ತಲೇ ಇದ್ದೇವೆ. ಕೆಲವರು ಆಸಕ್ತಿ ತೋರಿಸುತ್ತಾರೆ. ಹೆಚ್ಚಿನ ಮಂದಿ ದತ್ತು ಪಡೆಯಲು ಮುಂದೆ ಬರುತ್ತಿಲ್ಲ. ಆದರೂ, ಉದ್ಯಾನಕ್ಕೆ ಬರುವ ಪ್ರತಿಯೊಬ್ಬ ವೀಕ್ಷಕರಿಗೂ ಮಾಹಿತಿ ನೀಡಿದರ ಫಲವಾಗಿ ಈ ವರ್ಷ ಆದಾಯ ಹೆಚ್ಚಿದ್ದು, ಮುಂದಿನ ವರ್ಷದಲ್ಲಿ ಏರಿಕೆಯಾಗಿ ಪ್ರಾಣಿ, ಪಕ್ಷಿ ನಿರ್ವಹಣೆಗೆ ಸಹಕಾರಿಯಾಗಲಿದೆ.
>
> ಎ.ವಿ.ಸೂರ್ಯಸೇನ್ ಕಾರ್ಯನಿರ್ವಾಹಕ ನಿರ್ದೇಶಕ

# ದತ್ತಾತ್ರಿ ಪಾಟೀಲ್ ಅವಧಿಯಲ್ಲಿ ಲಕ್ಷಾಂತರ ರೂಪಾಯಿ ಹಣ ಲೂಟಿ

## ಬಾದಲಗಾಂವ | ಗ್ರಾ.ಪಂನಲ್ಲಿ ಅವ್ಯವಹಾರ ಆರೋಪ; ತನಿಖೆಗೆ ಆಗ್ರಹ. ಎರಡು ವರ್ಷಗಳಲ್ಲಿ ಲಕ್ಷಾಂತರ ರೂಪಾಯಿ ಬಿಲ್ ಮಾಡಿ ಲೂಟಿ

• **ಉದಯವಾಹಿನಿ ,ಬೀದರ್:**

• **ಪರಮೇಶ.ಡಿ.ವಿಳಸಪೂರೆ**

ಜಿಲ್ಲೆಯ ಔರಾದ್ ತಾಲ್ಲೂಕಿನ ಬಾದಲಗಾಂವ ಗ್ರಾಮ ಪಂಚಾಯಿತಿಯಲ್ಲಿ 15ನೇ ಹಣಕಾಸು ಯೋಜನೆಯಲ್ಲಿ ಅವ್ಯವಹಾರ ನಡೆದಿದ್ದು, ಈ ಸಂಬಂಧ ಕೂಡಲೇ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಗ್ರಾಮ ಪಂಚಾಯಿತಿ ಉಪಾಧ್ಯಕ್ಷೆ ರಾಧಮ್ಮ ಗಂಡ ಮಾರುತರೆಡ್ಡಿ ಆಗ್ರಹಿಸಿದ್ದಾರೆ.

ಈ ಕುರಿತು ಉದಯವಾಹಿನಿ ವರದಿಗಾರರೊಂದಿಗೆ ಮಾತನಾಡಿದ ಅವರು, ''ಬಾದಲಗಾಂವ ಗ್ರಾಮ ಪಂಚಾಯಿತಿಯ ಪಿಡಿಒ ದತ್ತಾತ್ರಿ ಪಾಟೀಲ್ ಮತ್ತು ಕಾರ್ಯದರ್ಶಿ ವೈಜಿನಾಥ ಇವರು ಎರಡು ವರ್ಷಗಳಲ್ಲಿ 15ನೆ ಹಣಕಾಸು ಯೋಜನೆಯಡಿ 18 ಲಕ್ಷ ದಾಖಲೆ ಇಲ್ಲದ ಬಿಲ್ಲನ್ನು ತೆಗೆದುಕೊಂಡಿದ್ದಾರೆ. ಈ ಸಂಬಂಧ ಅಗತ್ಯ ದಾಖಲೆಗಳು ನನ್ನ ಬಳಿ ಇವೆ. ಎರಡು ವರ್ಷಗಳಲ್ಲಿ ಲಕ್ಷಾಂತರ ರೂಪಾಯಿ ಬಿಲ್ ಮಾಡಿ ಲೂಟಿ ಹೊಡೆದಿದ್ದಾರೆ ಎಂದು ಆರೋಪಿಸಿದರು.



ಉದಯವಾಹಿನಿ ಚಿತ್ರ



ಉದಯವಾಹಿನಿ ಚಿತ್ರ

ಗ್ರಾಮಗಳಲ್ಲಿ ಹಲವಾರು ಸಮಸ್ಯೆಗಳಿದ್ದು, ಬೀದಿ ದೀಪವಾಗಲಿ ಕುಡಿಯುವ ನೀರಾಗಲಿ ಯಾವುದೇ ಕೆಲಸ ಮಾಡದೆ. ತಮ್ಮ ಮನಸ್ಸಿಗೆ ಬಂದಂತೆ ಬಿಲ್ ನೀಡಿದ್ದಾರೆ. ಈ ಬಗ್ಗೆ ಸಭೆಯಲ್ಲಿ ಪ್ರಶ್ನೆ ಮಾಡಿದರೆ ಉಡಾಫೆ ಉತ್ತರ ನೀಡುತ್ತಾರೆ. ಇಲ್ಲಿಯವರೆಗೆ ಯಾವುದೇ ಮಾಹಿತಿ ಕೊಡದೆ ಸತಾಯಿಸಿದ್ದಾರೆ'' ಎಂದು ದೂರಿದರು. ಅಭಿವೃದ್ಧಿ ಹೆಸರಿನಲ್ಲಿ ಲಕ್ಷ ಲಕ್ಷ ಹಣ ಖರ್ಚಾದರೂ ಸಹ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿನ ಗ್ರಾಮಗಳಲ್ಲಿ ಸಮಸ್ಯೆಗಳಿಗೆ ಪರಿಹಾರ ಸಿಗುತ್ತಿಲ್ಲ ಬೋಗಸ್ ಬಿಲ್ ಗಳನ್ನು ಮಾಡುತ್ತಿದ್ದಾರೆ. ಹಣ ದುರ್ಬಳಕೆ ಮಾಡಿಕೊಳ್ಳುತ್ತಿದ್ದಾರೆ. ಸಾರ್ವಜನಿಕ ಉಪಯೋಗಕ್ಕೆ ಬಳಕೆಯಾಗಬೇಕಾಗಿದ್ದ ಹಣ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಅಧ್ಯಕ್ಷರು, ಕಾರ್ಯದರ್ಶಿ ಸೇರಿದಂತೆ ಕೆಲವರ ಕೈ ಸೇರುತ್ತಿದೆ ಎಂಬ ಗಂಭೀರ ಆರೋಪಗಳು ನಿರಂತರವಾಗಿ ಕೇಳಿಬರುತ್ತಿವೆ ಹಳ್ಳಿಗಳಲ್ಲಿ ಚರಂಡಿಗಳು ತುಂಬಿ ತುಳುಕುತ್ತಿವೆ. ಬೀದಿ ದೀಪದ ವ್ಯವಸ್ಥೆ ಇಲ್ಲದೆ ಹಳ್ಳಿಗಳು ಕತ್ತಲಲ್ಲಿ ಮುಳುಗಿವೆ. ಪಿಡಿಒಗಳು ತಮ್ಮ ಆಪ್ತರು, ಸ್ನೇಹಿತರ ವಲಯದ ನಕಲಿ ಗುತ್ತಿಗೆದಾರರ ಹೆಸರಿಗೆ ಬೇಕಾಬಿಟ್ಟಿ ಹಣ ಪಾವತಿ ಮಾಡುತ್ತಾ ಲೂಟಿ ನಡೆಸುತ್ತಿದ್ದಾರೆ. ನರೇಗಾ ಕಾಮಗಾರಿಗಳಲ್ಲಿ ತಮ್ಮ ಆಪ್ತ ಗುತ್ತಿಗೆದಾರರಿಗೆ ಶೇ 40ರ ಸಾಮಗ್ರಿ ಹಣವನ್ನು ಹಾಕುತ್ತಿದ್ದಾರೆ ಎಂದು ಪಂಚಾಯಿತಿ ವ್ಯಾಪ್ತಿಯ ಮಮದಾಪೂರ ಗ್ರಾಮದ ಯುವ ಮುಖಂಡ ಅನಿಲ್ ರೆಡ್ಡಿ ಆರೋಪಿಸಿದ್ದಾರೆ.

### ಕ್ರಮಕ್ಕೆಗೊಳ್ಳದ ಇಒ ಕೀರಣ್ ಪಾಟೀಲ್:

ಗ್ರಾಮ ಪಂಚಾಯಿತಿಯಲ್ಲಿ ನಡೆದಿರುವ ಅವ್ಯವಹಾರಗಳ ಬಗ್ಗೆ ಸೂಕ್ತ ತನಿಖೆ ಆಗಬೇಕು. 206ರ ಏಪ್ರಿಲ್ 27ರಂದು ಔರಾದ್ ತಾಲ್ಲೂಕ ಪಂಚಾಯಿತಿ ಕಾರ್ಯನಿರ್ವಾಹಣಾಧಿಕಾರಿಗೆ ತಿಳಿಸಿದರೂ ಈವರೆಗೂ ಯಾವುದೇ ತನಿಖೆಯಾಗಿಲ್ಲ. ತಾಲೂಕು ಪಂಚಾಯಿತಿ ಅಧಿಕಾರಿಗಳೂ ಕ್ರಮ ತೆಗೆದುಕೊಂಡಿಲ್ಲ'' ಎಂದು ಅಲ್ಲಾಪೂರ ಗ್ರಾಮದ ಯುವ ಮುಖಂಡ ಪ್ರಕಾಶ್ ಕಾಂಬ್ಳೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

### ಕ್ರಮ ಕೈಗೊಳ್ಳದೇ ಇದ್ದಲ್ಲಿ ತಾಪಂ ಮುತ್ತಿಗೆ:

ಮುಂದಿನ ಎರಡು ಮೂರು ದಿನಗಳಲ್ಲಿ ಮೇಲಾಧಿಕಾರಿಗಳು ಸೂಕ್ತ ಕ್ರಮ ತೆಗೆದುಕೊಂಡು ತನಿಖೆ ಮಾಡಿ ನ್ಯಾಯ ಕೊಡಿಸಬೇಕು. ಇಲ್ಲದಿದ್ದರೆ ಔರಾದ್ ಪಟ್ಟಣದ ತಾಲ್ಲೂಕ ಪಂಚಾಯಿತಿ ಕಚೇರಿಗೆ ಪಂಚಾಯಿತಿ ಕಚೇರಿಗೆ ಬೀಗ ಹಾಕಿ ಪ್ರತಿಭಟನೆ ಮಾಡಲಾಗುವುದು'' ಎಂದು ಎಚ್ಚರಿಕೆ ನೀಡಿದರು.

**ಬೀದಿ ದೀಪವಾಗಲಿ ಕುಡಿಯುವ ನೀರಾಗಲಿ**

**ಯಾವುದೇ ಕೆಲಸವಾಗಿಲ್ಲ**

ಬಾದಲಗಾಂವ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ದತ್ತಾತ್ರಿ ಪಾಟೀಲ್ 15ನೇ ಹಣಕಾಸು ಯೋಜನೆಯಡಿ ಬಂದ ಅನುದಾನ ದುರ್ಬಳಕೆ ಮಾಡಿಕೊಂಡಿರುವ ದೂರಿನ ಬಗ್ಗೆ ಹಾಗೂ 11ಎ ಖಾತೆಯ ಅವ್ಯವಹಾರ ಕುರಿತು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೂ ಹಾಗೂ ತಾಲೂಕು ಪಂಚಾಯಿತಿ ಅಧಿಕಾರಿಗಳು ಗಮನಕ್ಕೆ ತಂದರೂ ಕೂಡ ವಿಳಂಬ ಮಾಡುತ್ತಿರುವುದು ಅನುಮಾನಕ್ಕೆ ಕಾರಣವಾಗಿದೆ. ಭ್ರಷ್ಟ ಅಧಿಕಾರಿಗಳಿಗೆ ಮೇಲಾಧಿಕಾರಿಗಳು ಪ್ರೋತ್ಸಾಹವಿದೆ ಎಂಬುದು ಎದ್ದು ಕಾಣುತ್ತಿದೆ.

---

# ಸರ್ಕಾರಿ ಶಾಲೆ ಕಟ್ಟಡಗಳೆಷ್ಟು ಸುರಕ್ಷಿತ?

• **ಉದಯವಾಹಿನಿ ಕಾರವಾರ:**

ಶಾಲೆಗಳ ಪುನರಾರಂಭಕ್ಕೆ ದಿನಗಣನೆ ಆರಂಭಗೊಂಡಿದೆ. ಜೊತೆಗೆ ಮಳೆಗಾಲ ಶುರುವಾಗುವ ಲಕ್ಷಣ ಗೋಚರಿಸಿದೆ. ಆದರೆ, ಶಾಲೆಗಳ ಸುರಕ್ಷತೆ ಕುರಿತು ಪರಿಶೀಲನೆ ಮಾತ್ರ ಇನ್ನೂ ಸರಿಯಾಗಿ ನಡೆದಿಲ್ಲ ಎಂಬ ದೂರು ಹೆಚ್ಚಿದೆ.ಮೇ 29ರಿಂದ ಶಾಲೆ ಆರಂಭಗೊಳ್ಳಲಿದೆ. ಜಿಲ್ಲೆಯ ಹಲವೆಡೆ ಶಾಲೆ ಆವರಣದಲ್ಲಿನ ಅಪಾಯಕಾರಿ ಮರ, ಬಿರುಕು ಬಿಟ್ಟಿರುವ ಗೋಡೆ, ದುರ್ಬಲ ಸ್ಥಿತಿಯಲ್ಲಿನ ಚಾವಣಿ ಸರಿಪಡಿಸುವ ಕೆಲಸ ನಡೆದಿಲ್ಲ. ಈ ಬಗ್ಗೆ ಶಿಕ್ಷಣ ಇಲಾಖೆ ಅಧಿಕಾರಿಗಳನ್ನು ವಿಚಾರಿಸಿದರೆ 'ಶಾಲೆ ಕಟ್ಟಡಗಳ ಸ್ಥಿತಿಗತಿ ಬಗ್ಗೆ ಮೇ 26ರ ಒಳಗೆ ವರದಿ ಸಲ್ಲಿಸಲು ಸೂಚಿಸಿದ್ದೇವೆ' ಎಂಬುದಾಗಿ ಹೇಳುತ್ತಿದ್ದಾರೆ.'ಮಳೆಗಾಲಕ್ಕೆ ಮುನ್ನ, ಶಾಲೆ ಆರಂಭಕ್ಕೂ ಮೊದಲು ಕಟ್ಟಡಗಳ ಸುರಕ್ಷತೆ ಪರಿಶೀಲಿಸಿಕೊಂಡು ಸಮಸ್ಯೆ ಇದ್ದರೆ ಸರಿಪಡಿಸಿಕೊಳ್ಳಬೇಕಿದೆ. ಆದರೆ, ಕೊನೆ ಕ್ಷಣದಲ್ಲಿ ಪಟ್ಟಿ ಸಿದ್ಧಪಡಿಸುತ್ತಾರೆ. ದುರಸ್ತಿಗೆ ಪ್ರಸ್ತಾವ ಸಲ್ಲಿಸಿ, ಅನುದಾನ ಸಿಗುವ ಹೊತ್ತಿಗೆ ಅರ್ಧ ವರ್ಷವೇ ಮುಗಿಯುತ್ತದೆ' ಎನ್ನುತ್ತಾರೆ ಶಾಲಾಭಿವೃದ್ಧಿ ಸಮಿತಿಯೊಂದರ ಸದಸ್ಯ ಸುದರ್ಶನ ನಾಯಕ. ಜಿಲ್ಲಾ ಕೇಂದ್ರ, ಕಾರವಾರದಲ್ಲೇ ಕೆಲ ಶಾಲೆಗಳ ಕೊಠಡಿಗಳು ಬಿರುಕು ಬಿಟ್ಟಿವೆ. ನಗರ ಮಧ್ಯದಲ್ಲಿರುವ ಬಾಯಿ ಕುವರಬಾಯಿ ಶಾಲೆ ಆವರಣ ತಗ್ಗಿನಿಂದ ಕೂಡಿದ್ದು, ಮಳೆಗಾಲದಲ್ಲಿ ನೀರು ನಿಲ್ಲುವ ಅಪಾಯವಿದೆ. ದೇವಬಾಗದಲ್ಲಿನ ಶಾಲೆ ಕೊಠಡಿಗಳು ದುರ್ಬಲ ಸ್ಥಿತಿಯಲ್ಲಿರುವುದಾಗಿ ಸ್ಥಳೀಯರು ಹೇಳುತ್ತಾರೆ. ಶಿರಸಿ ತಾಲ್ಲೂಕಿನಲ್ಲಿ 50ಕ್ಕೂ ಹೆಚ್ಚು ಶಾಲಾ ಕೊಠಡಿಗಳು ಶಿಥಿಲ ಸ್ಥಿತಿಯಲ್ಲಿವೆ. ಕೇವಲ ಕೊಠಡಿಯಷ್ಟೇ ಅಲ್ಲದೇ 63 ಶಾಲೆಗಳಲ್ಲಿ ಅಡುಗೆ ಕೋಣೆಗಳು ದುರಸ್ತಿ ಆಗಬೇಕಿದೆ. 42 ಕಡೆ ಹೊಸ



ಉದಯವಾಹಿನಿ ಚಿತ್ರ

ಕೋಣೆಗಳ ಅಗತ್ಯವಿದೆ. 85 ಶಾಲೆಗಳಿಗೆ ಕಾಂಪೌಂಡ್ ಅಗತ್ಯವಿದೆ. ಶಾಲೆ ಗೋದಾಮುಗಳು ಹಲವೆಡೆ ಜೀರ್ಣಗೊಂಡಿವೆ. ಹಳಿಯಾಳ ತಾಲ್ಲೂಕಿನಲ್ಲಿ ಶಿಥಿಲಾವಸ್ತೆಯಲ್ಲಿರುವ 16 ಶಾಲಾ ಕೊಠಡಿಗಳನ್ನು ನೆಲಸಮಗೊಳಿಸಲಾಗಿದೆ. 53 ಕೊಠಡಿಗಳ ಚಿಕ್ಕಪುಟ್ಟ ದುರಸ್ತಿ ಕೈಗೊಳ್ಳಲಾಗುತ್ತಿದೆ. 11 ಶಾಲೆಗಳಿಗೆ ಹೊಂದಿಕೊಂಡ ಅಪಾಯಕಾರಿ ಮರಗಳು, ಮರದ ಟೊಂಗೆಗಳನ್ನು ತೆರವುಗೊಳಿಸಿ ಈಗಾಗಲೇ ಸಂಬಂಧಪಟ್ಟ ಇಲಾಖೆಗೆ ಲಿಖಿತವಾಗಿ ಮನವಿ ಸಲ್ಲಿಸಲಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಪ್ರಮೋದ ಮಹಾಲೆ ತಿಳಿಸಿದರು.

ದಾಂಡೇಲಿ ತಾಲ್ಲೂಕಿನ 3 ಶಾಲೆಗಳ ಕಾಂಪೌಂಡ್‌ಗೆ ಹೊಂದಿಕೊಂಡಂತೆ ಅಪಾಯಕಾರಿ ಮರಗಳ ತೆರವು ಮಾಡಲು ಸಂಬಂಧಪಟ್ಟ ಅಧಿಕಾರಿಗಳಿಗೆ ಪತ್ರ ಬರೆಯಲಾಗಿದೆ. ಬಂಗೂರನಗರ ಶಾಲೆ ಸೇರಿದಂತೆ ಎರಡು ಶಾಲಾ ಕಾಂಪೌಂಡ್ ದುರಸ್ತಿ, ತಾಲ್ಲೂಕಿನ 7 ಶಾಲೆಗಳಲ್ಲಿ ಸಣ್ಣ ಪುಟ್ಟ ದುರಸ್ತಿ ಕೆಲಸ ಹಾಗೂ 5 ಶಾಲೆಗಳ ಶೌಚಾಲಯ ದುರಸ್ತಿ, 6 ಶಾಲೆಗಳ ಅಡುಗೆ ಕೊಠಡಿ ದುರಸ್ತಿ 7 ಶಾಲೆಗಳಲ್ಲಿ ಮರ ತೆರವು ಮಾಡಲು ವಿನಂತಿ ಬಂದಿದೆ ಎಂಬುದಾಗಿ ಶಿಕ್ಷಣ ಇಲಾಖೆ ಅಧಿಕಾರಿಗಳು ಹೇಳುತ್ತಾರೆ.

---

# ಗುತ್ತಿಗೆ ನೌಕರರಿಗೆ ಜೀವನ ಭದ್ರತೆ ಬೇಕು: ಮಂಜು

## ಸರ್ಕಾರದಿಂದ ಸಿಬ್ಬಂದಿ ನೇಮಕಾತಿ ವೇಳೆ ಹೊರಗುತ್ತಿಗೆ ನೌಕರರ ಸೇವೆ ಪರಿಗಣಿಸಿ ಉದ್ಯೋಗ ಕಾಯಂಗೊಳಿಸಬೇಕು

• **ಉದಯವಾಹಿನಿ ಮೂಡಿಗೆರೆ:**

ಹೊರಗುತ್ತಿಗೆ ನೌಕರರಿಗೆ ಸರ್ಕಾರವು ಜೀವನ ಭದ್ರತೆ ಒದಗಿಸಬೇಕು ಎಂದು ಹೊರಗುತ್ತಿಗೆ ನೌಕರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಮಂಜು ಒತ್ತಾಯಿಸಿದರು. ಪಟ್ಟಣದ ಕೆ.ಪಿ. ಪೂರ್ಣಚಂದ್ರ ತೇಜಸ್ವಿ ಸಭಾಂಗಣದಲ್ಲಿ ಹೊರಗುತ್ತಿಗೆ ನೌಕರರ ಸಂಘದ ವತಿಯಿಂದ ಏರ್ಪಡಿಸಿದ್ದ ಕುಂದುಕೊರತೆ ಸಭೆಯಲ್ಲಿ ಅವರು ಮಾತನಾಡಿದರು. ಸರ್ಕಾರದ ಯೋಜನೆಗಳನ್ನು ಜನರಿಗೆ ತಲುಪಿಸುವಲ್ಲಿ ಹೊರಗುತ್ತಿಗೆ ನೌಕರರು ಪ್ರಮುಖ ಪಾತ್ರವಹಿಸಿದ್ದಾರೆ.

ಆದರೆ, ಅವರು ನಿತ್ಯವೂ ಜೀವನ ಭದ್ರತೆ ಇಲ್ಲದೇ ದಿನ ದೂಡುವಂತಾಗಿದೆ. ಉದ್ಯೋಗ ಕಾಯಂ, ವೇತನ ಪರಿಷ್ಕರಣೆ ಹಾಗೂ ಭವಿಷ್ಯ ನಿಧಿ ಸೇರಿದಂತೆ ಎಲ್ಲಾ ಸೌಲಭ್ಯಗಳನ್ನು ಕಲ್ಪಿಸಬೇಕು.

ಸರ್ಕಾರದಿಂದ ಸಿಬ್ಬಂದಿ ನೇಮಕಾತಿ ವೇಳೆ ಹೊರಗುತ್ತಿಗೆ ನೌಕರರ ಸೇವೆ ಪರಿಗಣಿಸಿ ಉದ್ಯೋಗ ಕಾಯಂಗೊಳಿಸಬೇಕು. ಈಗ ದಿನಬಳಕೆಯ ವಸ್ತುಗಳ ಬೆಲೆ ಗಗನಕ್ಕೆ ತಲುಪಿದ್ದು, ಗುತ್ತಿಗೆ ನೌಕರರ ವೇತನವು ಅತ್ಯಂತ ಕಡಿಮೆ ಇರುವುದರಿಂದ ಸರ್ಕಾರವು ಕೂಡಲೇ ಗುತ್ತಿಗೆ ನೌಕರರ ವೇತನವನ್ನು ವೈಜ್ಞಾನಿಕವಾಗಿ ಪರಿಷ್ಕರಿಸಬೇಕು ಎಂದು ಒತ್ತಾಯಿಸಿದರು. ಶಾಸಕಿ ನಯನಾ ಮೋಟಮ್ಮ ಮಾತನಾಡಿ, 'ಗುತ್ತಿಗೆ ನೌಕರರ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತಂದು ಸಮಸ್ಯೆಗಳ ಪರಿಹಾರಕ್ಕೆ ಚರ್ಚಿಸಲಾಗುವುದು. ಎಲ್ಲರಿಗೂ ಉದ್ಯೋಗ



ಉದಯವಾಹಿನಿ ಚಿತ್ರ

ಭದ್ರತೆ ಅಗತ್ಯವಾಗಿದ್ದು, ಇದರ ಕುರಿತು ಅಗತ್ಯ ಕ್ರಮ ಕೈಗೊಳ್ಳಲು ಮನವಿ ಮಾಡಲಾಗುವುದು' ಎಂದರು. ಸಂಘದ ತಾಲ್ಲೂಕು ಘಟಕದ ಅಧ್ಯಕ್ಷೆ ಶೈಲಾ ಮಾತನಾಡಿ, 'ಮಕ್ಕಳ ವಿದ್ಯಾಭ್ಯಾಸ, ದಿನಬಳಕೆ ವಸ್ತುಗಳು ಸೇರಿದಂತೆ ಎಲ್ಲಾ ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗಿದ್ದು ಗುತ್ತಿಗೆ ನೌಕರರು ಜೀವನ ನಡೆಸುವುದೇ ಕಷ್ಟಕರವಾಗಿದೆ. ಆದ್ದರಿಂದ ಸರ್ಕಾರವು ಪೂರ್ಣಕಾಲಿಕ ಸಿಬ್ಬಂದಿಗೆ ನೀಡುವ ವೇತನವನ್ನು ಗುತ್ತಿಗೆ ನೌಕರರಿಗೂ ನೀಡಬೇಕು. ಸರ್ಕಾರವು ಗುತ್ತಿಗೆ ನೌಕರರು ಮತ್ತು ಅವರ ಅವಲಂಬಿತರಿಗೆ ಜ್ಯೋತಿ ಸಂಜೀವಿನಿ ಯೋಜನೆಯನ್ನು ಜಾರಿಗೊಳಿಸಬೇಕು' ಎಂದು ಒತ್ತಾಯಿಸಿದರು.

---

# ಸರ್ವಿಸ್ ರಸ್ತೆಯ ಬದಿ ತ್ಯಾಜ್ಯದ ಕೊಂಪೆ

• **ಉದಯವಾಹಿನಿ. ಉಡುಪಿ:**



ಉದಯವಾಹಿನಿ ಚಿತ್ರ

ನಗರದ ಕಿನ್ನಿಮುಲ್ಕಿ ಬಳಿಯ ಸರ್ವಿಸ್ ರಸ್ತೆ ಬದಿ ತ್ಯಾಜ್ಯ ಕೊಂಪೆಯಾಗಿ ನಗರದ ಅಂದಗೆಡಿಸುವುದರ ಜೊತೆಗೆ ರೋಗ ಭೀತಿಯನ್ನೂ ಸೃಷ್ಟಿಸಿದೆ. ಹಲವು ತಿಂಗಳುಗಳಿಂದ ಇಲ್ಲಿ ರಾಶಿ ರಾಶಿ ಕಸ ಎಸೆಯುತ್ತಿದ್ದರು ಸಂಬಂಧಪಟ್ಟವರು ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಸ್ಥಳೀಯರು ದೂರಿದ್ದಾರೆ ಕಿನ್ನಿಮುಲ್ಕಿಯಿಂದ ಕರಾವಳಿ ಜಂಕ್ಷನ್ ಕಡೆಗೆ ಹೋಗುವ ಸರ್ವಿಸ್ ರಸ್ತೆಯ ಬದಿಯಲ್ಲಿ ನಿರಂತರ ಕಸ ಎಸೆಯಲಾಗುತ್ತಿದೆ. ಪ್ಲಾಸ್ಟಿಕ್ ಚೀಲದಲ್ಲಿ ಕಸವನ್ನು ತುಂಬಿಸಿ ರಸ್ತೆ ಬದಿಗೆ ಎಸೆಯಲಾಗುತ್ತಿದೆ. ಕಸ ರಾಶಿ ಬಿದ್ದಿರುವುದರಿಂದ ಪರಿಸರದಲ್ಲಿ ದುರ್ವಾಸನೆ ಹರಡಿದ್ದು, ಪಾದಚಾರಿಗಳು ಮೂಗು ಮುಚ್ಚಿಕೊಂಡು ತೆರಳಬೇಕಾಗಿದೆ. ವಾಹನಗಳಲ್ಲಿ ತೆರಳುವವರ ಮೂಗಿಗೆಗೂ ದುರ್ಗಂಧ ಬಡಿಯುತ್ತಿದೆ. ರಾತ್ರಿ ವೇಳೆಗಳಲ್ಲಿ ವಾಹನಗಳಲ್ಲಿ ತಂದು ಕಸವನ್ನು ಇಲ್ಲಿ ಎಸೆಯಲಾಗುತ್ತಿದೆ ಎಂದು ಸ್ಥಳೀಯರು ಆರೋಪಿಸಿದ್ದಾರೆ. ಕಸ ಎಸೆಯುತ್ತಿರುವ ಪ್ರದೇಶಕ್ಕಿಂತ ಕೆಳಭಾಗದಲ್ಲಿ ಮನೆಗಳಿದ್ದು ಅಲ್ಲಿನ ಜನರು ಸಂಕಷ್ಟ ಅನುಭವಿಸುವಂತಾಗಿದೆ.

ಜೋರಾಗಿ ಮಳೆ ಬಂದರೆ ಈ ಕಸ ಮಳೆ ನೀರಿನಲ್ಲಿ ಕೊಚ್ಚಿಕೊಂಡು ಹೋಗಿ ಚರಂಡಿಯಲ್ಲಿ ಕಟ್ಟಿ ನಿಲ್ಲುವ ಸಾಧ್ಯತೆಯೂ ಇದೆ ಎಂದು ಜನರು ಹೇಳುತ್ತಾರೆ. ಸ್ವಾಗತ ಗೋಪುರದ ಬಳಿಯ ಸರ್ವಿಸ್ ರಸ್ತೆಯ ಬದಿಯಲ್ಲಿ ಕಸದ ರಾಶಿ ತುಂಬಿದ್ದರೆ. ಅಲ್ಲಿಂದ ಮುಂದೆ ರಸ್ತೆ ಬದಿಯ ಗಿಡ ಗಂಟೆಗಳ ನಡುವೆಯೂ ರಾಶಿ ರಾಶಿ ಕಸ ಎಸೆಯಲಾಗಿದೆ. ಕಸ ಎಸೆಯುತ್ತಿರುವ ಪ್ರದೇಶದಲ್ಲಿ ಸಿ.ಸಿ.ಟಿ.ವಿ. ಕ್ಯಾಮೆರಾ ಸ್ಥಾಪಿಸಿ, ಕಸ ಎಸೆಯುವವರಿಗೆ ದಂಡ ವಿಧಿಸಬೇಕೆಂದು ಜನರು ಆಗ್ರಹಿಸುತ್ತಲೇ ಇದ್ದಾರೆ. ಆದರೆ ಇನ್ನೂ ಯಾವುದೇ ಪ್ರಯೋಜನವಾಗಿಲ್ಲ ಎಂದು ಸ್ಥಳೀಯರ ದೂರಿದ್ದಾರೆ. ಇದೇ ಸರ್ವಿಸ್ ರಸ್ತೆಯ ಬದಿಯ ಚರಂಡಿಯ ಸ್ಲಾಬ್ ಕಿತ್ತು ಹೋಗಿರುವ ಜಾಗದಲ್ಲಿ ಚರಂಡಿ ಒಳಗೆ ರಾಶಿ ರಾಶಿ ಕಸವನ್ನು ತುಂಬಿಸಲಾಗಿದೆ. ಚರಂಡಿಯಲ್ಲಿ ಕಸ ತುಂಬಿರುವ ಕಾರಣ ಮಳೆ ನೀರು ಹರಿಯದೆ ರಸ್ತೆಯಲ್ಲಿ ಹರಿಯುವ ಸಾಧ್ಯತೆ ಇದೆ ಎಂದು ಜನರು ಹೇಳಿದ್ದಾರೆ. ಅಂಗಡಿ, ಹೋಟೆಲ್‌ನವರು ಕೂಡ ಇಲ್ಲಿ ಕಸ ತಂದು ಎಸೆಯುತ್ತಿದ್ದಾರೆ ಎಂದು ಆರೋಪಿಸಿದ್ದಾರೆ. ಕಸ ರಾಶಿ ಬಿದ್ದಿರುವುದರಿಂದ ಅದರಲ್ಲಿರುವ ಆಹಾರ ಪದಾರ್ಥಗಳನ್ನು ತಿನ್ನಲು ಬೀದಿನಾಯಿಗಳು ಸಾಕಷ್ಟು ಸಂಖ್ಯೆಯಲ್ಲಿ ಬರುತ್ತವೆ ಅದರಿಂದ ಪಾದಾಚಾರಿಗಳಿಗೆ ಸಮಸ್ಯೆ ಉಂಟಾಗುತ್ತಿದೆ ಎಂದೂ ದೂರಿದ್ದಾರೆ.

---

# ಮೂಲ ಸೌಲಭ್ಯ ಪೂರೈಕೆಗೆ ಆದ್ಯತೆ

• **ಉದಯವಾಹಿನಿ. ಯಾದಗಿರಿ:**

ಮತಕ್ಷೇತ್ರ ವ್ಯಾಪ್ತಿಯಲ್ಲಿನ ಜಿಲ್ಲಾ ಕೇಂದ್ರ ಮತ್ತು ಗ್ರಾಮೀಣ ಭಾಗಗಳಲ್ಲಿನ ಮೂಲ ಸೌಲಭ್ಯಗಳ ಪೂರೈಕೆಗೆ ಆದ್ಯತೆ ನೀಡಲಾಗುತ್ತದೆ' ಎಂದು ಶಾಸಕ ಚನ್ನಾರೆಡ್ಡಿ ಪಾಟೀಲ ತುನ್ನೂರು ಭರವಸೆ ನೀಡಿದರು.

ನಗರದ ಹೊಸಳ್ಳಿ ಕ್ರಾಸ್ ಹತ್ತಿರ ಲೋಕೋಪಯೋಗಿ ಇಲಾಖೆಯಿಂದ ಆಯೋಜಿಸಿದ್ದ ಜೆಸ್ಕಾಂ ಉಪವಿಭಾಗ ಕಚೇರಿಯ ವರೆಗಿನ ರಸ್ತೆ ಅಗಲೀಕರಣ, ವಿದ್ಯುತ್ ಸೌಕರ್ಯ, ವಿಭಜಕಗಳು ಮತ್ತು ಪಾದಚಾರಿ ಮಾರ್ಗ ನಿರ್ಮಾಣ ಹಾಗೂ ಡಾಂಬರೀಕರಣ ಕಾಮಗಾರಿಯ ಶಂಕುಸ್ಥಾಪನೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಯಾದಗಿರಿ ಜಿಲ್ಲಾ ಕೇಂದ್ರವಾಗಿ 15 ವರ್ಷ ಕಳೆದಿದೆ.

ದಿನೇ ದಿನೇ ನಗರ ವಿಸ್ತರಿಸಿದ್ದು, ಜನ ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದರು. ನಾನು ಶಾಸಕನಾದ ನಂತರ 3 ವರ್ಷಗಳಲ್ಲಿ ನಗರ ಹಾಗೂ ಗ್ರಾಮೀಣ ಭಾಗದ ಜನರಿಗೆ ಮೂಲಸೌಕರ್ಯಗಳನ್ನು ಒದಗಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತಿದ್ದೇನೆ' ಎಂದರು. ಹೊಸಳ್ಳಿ ಕ್ರಾಸ್‌ನಲ್ಲಿ ಹೆಚ್ಚು ಜನ ಸಂದಣಿಯಿರುತ್ತದೆ.

ಇಲ್ಲಿ ವಾಹನಗಳ ನಿಲುಗಡೆ, ಸುಗಮ ಸಂಚಾರಕ್ಕೆಂದು 900 ಮೀಟರ್ ರಸ್ತೆ ಅಗಲೀಕರಣ ಮತ್ತು ಒಟ್ಟು 4.8ಕಿ.ಮೀ ರಸ್ತೆ ಮರು ಡಾಂಬರೀಕರಣದಿಂದ ಜನತೆಗೆ ಅನುಕೂಲವಾಗಲಿದೆ' ಎಂದು ಹೇಳಿದರು.

ಮಳೆಗಾಲದ ವೇಳೆ ಹಳ್ಳಿಗಳಿಂದ ಬರುವವರಿಗೆ ಪಗಲಾಪೂರ ಸೇತುವೆ ಕಿರಿದಾಗಿದ್ದ ಕಾರಣ ತೊಂದರೆಯಾಗಿತ್ತು. 8 ಕೋಟಿ ಅನುದಾನದಲ್ಲಿ ದೊಡ್ಡ ಸೇತುವೆ ಮತ್ತು ರಸ್ತೆ ಸುಧಾರಣೆ ಕಾಮಗಾರಿಯಿಂದ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಲಾಗಿದೆ.

ಜತೆಗೆ ನಗರದ ಹತ್ತಿಕುಣಿ ಕ್ರಾಸ್‌ನಲ್ಲೂ ಕಾಮಗಾರಿಗೆ 5 ಕೋಟಿ ಮೀಸಲಿಡಲಾಗಿದೆ. ಶೀಘ್ರವೇ ಕಾಮಗಾರಿಗೆ ಚಾಲನೆ ನೀಡಲಾಗುವುದು' ಎಂದರು.

---

# ಜಾತಿ ವ್ಯವಸ್ಥೆ ತೊಲಗದೆ ಸಮಾನತೆ ಮರೀಚಿಕೆ: ಡಾ.ನಾಗಲಕ್ಷ್ಮಿ ಚೌಧರಿ



ಉದಯವಾಹಿನಿ ಚಿತ್ರ

• **ಉದಯವಾಹಿನಿ. ಕಾರ್ಕಳ:**


ಜಾತಿ ವ್ಯವಸ್ಥೆ ಎಂಬ ಹೆಮ್ಮರವನ್ನು ಬುಡಸಮೇತ ಕಿತ್ತೆಸೆಯುವವರೆಗೂ ಇಲ್ಲಿ ನಿಜವಾದ ಸಮಾನತೆ ಮರೀಚಿಕೆ ಎಂದು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಚೌಧರಿ ಹೇಳಿದರು. ಇಲ್ಲಿನ ಬಂಡಿಮಠ ಬಸ್ ನಿಲ್ದಾಣದಲ್ಲಿ ಪರಿಶಿಷ್ಟ ಜಾತಿ ಹಾಗೂ ಪಂಗಡದ ವಿದ್ಯಾರ್ಥಿಗಳಿಗೆ 'ಜೈ ಭೀಮ್ ಯುವ ಸೇನಾ' ವತಿಯಿಂದಆಯೋಜಿಸಿದ್ದ ಪುರಸ್ಕಾರ ಸಮಾವೇಶಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಕಾಂಗ್ರೆಸ್ ಮುಖಂಡ ಉದಯಕುಮಾರ್ ಶೆಟ್ಟಿ ಮಾತನಾಡಿ ಸಮಾನತೆ ಕೊಡುವುದಲ್ಲ, ಪಡೆದುಕೊಳ್ಳುವುದು ಮುಖ್ಯ ಎಂದರು. ಮನೆಗೆ ಬಂದಿದ್ದ ಕಳ್ಳನನ್ನು ಹಿಡಿದು ಪೊಲೀಸರಿಗೊಪ್ಪಿಸಿದ ಪಳ್ಳಿಯ ಬಾಲಕಿ ಶ್ರಾವ್ಯಾ, ಭೂಸೇನೆಯ ನಿವೃತ್ತ ಯೋಕ ಆನಂದ್ ಕಬ್ಬಿನಾಲೆ, ಕ್ರೀಡಾ ಸಾಧಕಿ ಸಾರ್ವಿಕ ಧನ್ಯಾ ಅವರನ್ನು ಸನ್ಮಾನಿಸಲಾಯಿತು. ವಿದ್ಯಾರ್ಥಿಗಳಿಗೆ ಬ್ಯಾಗ್, ಪುಸ್ತಕ ವಿತರಿಸಲಾಯಿತು. 10ನೇ ತರಗತಿ ಮತ್ತು ಪಿಯುಸಿಯಲ್ಲಿ ಶೇಕಡ 90ಕ್ಕಿಂತ ಅಧಿಕ ಅಂಕ ಗಳಿಸಿದವರನ್ನು ಗೌರವಿಸಲಾಯಿತು. ತಹಶಿಲ್ದಾರ್ ಪ್ರದೀಪ್ ಕುಮಾರ್, ತೆಂಗುರಾಜ ಪ್ರೊಡಕ್ಷನ್‌ನ ಜಾನ್ ಆರ್ ಡಿಸೋಜ, ಕರ್ನಾಟಕ ಜೈ ಭೀಮ್ ಯುವ ಸೇನೆ ಪ್ರಧಾನ ಕಾರ್ಯದರ್ಶಿ ಸತೀಶ್ ಆರ್. ಮೂಡಬಿದ್ರೆ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಶ್ರೀಲತಾ, ಎ.ಎಲ್ ಗ್ರೂಪ್ ಮಾಲೀಕ ಸಮದ್ ಖಾನ್, ಕುಕ್ಕುಂದೂರು ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷೆ ಉಷಾ, ಸ್ವಾಮಿ ಕೃಪಾ ಕನ್ಸಕ್ಷನ್ ಮಾಲೀಕ ತಿಮ್ಮಪ್ಪ, ಪುರಸಭೆ ಮಾಜಿ ಅಧ್ಯಕ್ಷೆ ಪ್ರತಿಮಾ ರಾಣೆ, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ್ ನಾಯ್ಕ, ಮಹಿಳಾ ಅಧ್ಯಕ್ಷೆ ಶಾಂತಿ ಹಾಗೂ ಪದಾಧಿಕಾರಿಗಳಾದ ಸುನಿಲ್, ರಮೇಶ್, ಸುನಿಲ್ ನಿಂಜೂರು, ಕೃಷ್ಣಕೆ. ಅಜೆಕಾರ್, ರಮೇಶ್ ಕಾರ್ಕಳ, ಶೋಭಾ, ಸತೀಶ್ ಕೆರ್ವಾಶೆ, ಪದ್ಮಾವತಿ, ಗಣೇಶ್ ಹಿರಿಯಡ್ಕ ಶಾಲಿನಿ ಅಂಡಾರ್, ವಸಂತ ಟಿ ಪಾಲ್ಗೊಂಡಿದ್ದರು. ಕರ್ನಾಟಕ ಜೈ ಭೀಮ್ ಯುವ ಸೇನೆಯ ರಾಜ್ಯಾಧ್ಯಕ್ಷ ಎಸ್. ಪಿ. ಅಶೋಕ್ ಕುಮಾರ್ ಪ್ರಾಸ್ತಾವಿಕವಾಗಿ ಮಾತನಾಡಿದರು. ತಾಲ್ಲೂಕು ಘಟಕದ ಅಧ್ಯಕ್ಷೆ ವಾಣಿ ಸ್ವಾಗತಿಸಿದರು.

---

# ಮಿನಿ ನ್ಯೂಸ್

## ಮದ್ಯವರ್ಜನ ಶಿಬಿರ ಸಮಾರೋಪ

• **ಉದಯವಾಹಿನಿ ಬಸವನಬಾಗೇವಾಡಿ:**



ಉದಯವಾಹಿನಿ ಚಿತ್ರ

ಧರ್ಮಸ್ಥಳದ ಡಾ. ೀರೇಂದ್ರ ಹೆಗ್ಗಡೆ ಅವರ ನೇತೃತ್ವದಲ್ಲಿ ನಡೆಯುವ ಮದ್ಯ ವರ್ಜನ ಶಿಬಿರವು ಅನೇಕ ಹೆಣ್ಣುಮಕ್ಕಳ ಕಣ್ಣೀರು ಒರೆಸುವ ಕಾರ್ಯಕ್ರಮವಾಗಿದೆ ಎಂದು ತಾಲೂಕಿನ ಯರನಾಳ ರಕ್ತಮಠದ ಸಂಗನಬಸವ ಸ್ವಾಮೀಜಿ ಅಭಿಪ್ರಾಯಪಟ್ಟರು.

ತಾಲ್ಲೂಕಿನ ಯರನಾಳದಲ್ಲಿ ಸೋಮವಾರ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಂದ ಆಯೋಜಿಸಿದ್ದ 2056ನೇ ಮದ್ಯವರ್ಜನ ಶಿಬಿರದ ಸಮಾರೋಪದ ಪಾವನ ಸಾನಿಧ್ಯವಹಿಸಿ ಮಾತನಾಡಿದ ಅವರು, ಹೆಗ್ಗಡೆ ಪೂಜ್ಯರ ಸಮುದಾಯ ಕಾರ್ಯಕ್ರಮಗಳು ದೇಶಕ್ಕೆ ಮಾದರಿಯಾಗಿವೆ ಎಂದು ಶುಭ ಹಾರೈಸಿದರು.

ಕಲಬುರ್ಗಿ ಪ್ರಾದೇಶಿಕ ನಿರ್ದೇಶಕ ದಿನೇಶ ಪೂಜಾರಿ ಮಾತನಾಡಿ, ಒಂದು ಗ್ರಾಮ ಬದಲಾವಣೆಗೆ ಮೊದಲು ನಾವು ಬದಲಾಗುವುದು ಮುಖ್ಯವಾಗಿದೆ. ಕುಡಿತ ಬಿಟ್ಟು ಉಳಿತಾಯಕ್ಕೆ ಮುಂದಾಗಬೇಕು. ನಾವು ಮಾಡುವ ಉಳಿತಾಯ ಕುಟುಂಬ ಹಾಗೂ ದೇಶಕ್ಕೆ ಉಪಯೋಗವಾಗುವ ಕಲೆ ತಿಳಿಸಿಕೊಟ್ಟರು.

## ಮತ್ತೆ ಕುಸಿದ ಓಂ ಬೀಚ್ ಸಂಪರ್ಕ ರಸ್ತೆ

• **ಉದಯವಾಹಿನಿ ಗೋಕರ್ಣ:**

ಮೂರು ವರ್ಷಗಳ ಹಿಂದೆ 1 ಕೋಟಿ ವೆಚ್ಚದಲ್ಲಿ ನಿರ್ಮಿಸಿದ್ದ ಭದ್ರಕಾಳಿ ಕಾಲೇಜಿನ ಎದುರಿನಿಂದ ಓಂ ಬೀಚ್ ಮುಖ್ಯ ರಸ್ತೆಗೆ ಸಂಪರ್ಕ ಕಲ್ಪಿಸುವ ಸಿಮೆಂಟ್ ರಸ್ತೆ, ಕಳಪೆ ಕಾಮಗಾರಿಯಿಂದ ಸ್ವಲ್ಪ ಭಾಗ ಕುಸಿದುಬಿದ್ದಿತ್ತು. ಕೆಲವು ದಿನಗಳ ಹಿಂದೆ ಲಕ್ಷಾಂತರ ರೂಪಾಯಿ ವ್ಯಯಿಸಿ ಅದನ್ನು ದುರಸ್ತಿ ಮಾಡಿದ್ದರೂ ಈಗ ಮತ್ತೆ ರಸ್ತೆ ಬಿರುಕು ಬಿಟ್ಟಿದ್ದು, ನಾಗರಿಕರ ಆತಂಕಕ್ಕೆ ಕಾರಣವಾಗಿದೆ. ಓಂ ಬೀಚಿಗೆ ಹೋಗಲು ಸಮೀಪ ಮತ್ತು ಪದೇ ಪದೇ ಆಗುವ ಟ್ರಾಫಿಕ್ ಜಾಮ್‌ಗೆ ಪರಿಹಾರವಾಗಿ ಭದ್ರಕಾಳಿ ಕಾಲೇಜಿನ ಎದುರಿನಿಂದ ಓಂ ಬೀಚಿಗೆ 1 ಕೋಟಿ ರೂಪಾಯಿ ವೆಚ್ಚದಲ್ಲಿ ಸಿಮೆಂಟ್ ರಸ್ತೆ ನಿರ್ಮಾಣ ಮಾಡಲಾಗಿತ್ತು. ಮಳೆಯ ಅಬ್ಬರಕ್ಕೆ ಅದು ಪುನಃ ಒಂದೇ ವರ್ಷದಲ್ಲಿ ಕುಸಿದು ಬಿದ್ದಿತ್ತು. ಅಲ್ಲದೇ ತಡೆಗೋಡೆ ಹಾಗೂ ಚರಂಡಿ ನಿರ್ಮಾಣ ಕಾಮಗಾರಿ ಸಮರ್ಪಕವಾಗಿ ಆಗದ ಕಾರಣ ಮಣ್ಣು, ಕಲ್ಲುಗಳ ರಾಶಿಯೇ ಬಿದ್ದಿತ್ತು. ನಂತರ ವರ್ಷಗಳ ಕಾಲ ಅಪಾಯದ ರಸ್ತೆಯಲ್ಲೇ ವಾಹನ ಸಂಚರಿಸುತ್ತಿತ್ತು. ಬಳಿಕ ಎಚ್ಚೆತ್ತ ಲೋಕೋಪಯೋಗಿ ಇಲಾಖೆ 15 ಲಕ್ಷ ಮಂಜೂರಿ ಮಾಡಿ ದುರಸ್ತಿ ಕಾರ್ಯಕ್ಕೆ ಚಾಲನೆ ನೀಡಿತ್ತು. 'ರಸ್ತೆ ಬಿರುಕು ಬಿಟ್ಟ ಕಡೆಯಲ್ಲಿ ತಡಗೋಡೆ ನಿರ್ಮಿಸಲಾಗಿದೆ. ಇಲ್ಲಿ ಮಣ್ಣು ತುಂಬಿ ಸಮತಟ್ಟು ಮಾಡಿರುವುದು ಮಳೆಯ ನೀರಿಗೆ ಕೊಚ್ಚಿ ಹೋಗಿದೆ. ಕೆಲವೆಡೆ ಕಂದಕ ಬಿದ್ದಿದೆ. ಮಳೆಗಾಲ ಪ್ರಾರಂಭವಾಗುವ ಮೊದಲೇ ಸರಿಪಡಿಸಬೇಕು' ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

## ಅಂಬಳಿಕೆ ಗಿರೀಶ್ ಅವಿರೋಧವಾಗಿ ಆಯ್ಕೆ



ಉದಯವಾಹಿನಿ ಚಿತ್ರ

• **ಉದಯವಾಹಿನಿ ,ತೀರ್ಥಹಳ್ಳಿ :**

ಭಾರತೀಯ ಜೀವ ವಿಮಾ ನಿಗಮದ (ಎಲ್‌ಐಸಿ) ಪ್ರತಿನಿಧಿಗಳ ಸಂಘದ ತೀರ್ಥಹಳ್ಳಿ –ಹೊಸನಗರ ಶಾಖೆಯ ಅಧ್ಯಕ್ಷರಾಗಿ ಅಂಬಳಿಕೆ ಗಿರೀಶ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ತೀರ್ಥಹಳ್ಳಿಯ ಗಾಯತ್ರಿ ಮಂದಿರದಲ್ಲಿ ನಡೆದ ಸದಸ್ಯರ ಮಹಾಸಭೆಯಲ್ಲಿ ಆಯ್ಕೆ ನಡೆಯಿತು. ಕಾರ್ಯದರ್ಶಿಯಾಗಿ ಮಾಸ್ತಿಕಟ್ಟೆ ವಾಸಪ್ಪ, ಖಜಾಂಚಿ ಯಾಗಿ ಬಸವಾನಿ ರಾಘವೇಂದ್ರ, ಸೇರಿದಂತೆ ಕಾರ್ಯಕಾರಿ ಮಂಡಳಿಯು ಒಟ್ಟು 28 ಸದಸ್ಯರನ್ನು ಆಯ್ಕೆ ಮಾಡಲಾಯಿತು. ಚುನಾವಣಾ ಅಧಿಕಾರಿಗಳಾಗಿ ಟಿ.ಮಂಜುನಾಥ್, ಕೆ.ವಿ.ಕೇಶವಮೂರ್ತಿ ಕಾರ್ಯ ನಿರ್ವಹಿಸಿದರು.ಗೌರವ ಸದಸ್ಯರಾದ ವಾದಿರಾಜ್, ಮಾಜಿ ಅಧ್ಯಕ್ಷ ಶ್ರೀನಿವಾಸ್, ಮಾಜಿ ಕಾರ್ಯದರ್ಶಿ ಚಂದ್ರಶೇಖರ್, ಮಾಜಿ ಖಜಾಂಚಿ ಅಂಬುತೀರ್ಥ ರಾಘವೇಂದ್ರ, ಹೊಸನಗರ ಶಿವಪ್ಪಗೌಡ ಇದ್ದರು.

---

# ಪೆಟ್ರೋಲ್, ಡೀಸೆಲ್ ದರ ಏರಿಕೆಗೆ ಬಳ್ಳಾರಿ ಜನರ ಆಕ್ರೋಶ

• **ಉದಯವಾಹಿನಿ, ಬಳ್ಳಾರಿ**

ಪೆಟ್ರೋಲ್ ಮತ್ತು ಡೀಸೆಲ್ ದರವನ್ನು ಕೇವಲ ಹತ್ತು ದಿನಗಳಲ್ಲಿ ಕೇಂದ್ರ ಸರ್ಕಾರ ನಾಲ್ಕನೇ ಬಾರಿ ಹೆಚ್ಚಿಸಿರುವ ಹಿನ್ನೆಲೆಯಲ್ಲಿ ಬಳ್ಳಾರಿ ನಗರದಲ್ಲಿ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದರು. ಇಂಧನ ದರ ಏರಿಕೆಯಿಂದ ಈಗಾಗಲೇ ಸಂಕಷ್ಟದಲ್ಲಿರುವ ಜನಸಾಮಾನ್ಯರ ಬದುಕು ಮತ್ತಷ್ಟು ದುಬಾರಿಯಾಗುತ್ತಿದೆ ಎಂದು ವಾಹನ ಸವಾರರು ಹಾಗೂ ವ್ಯಾಪಾರಿಗಳು ತಿಳಿಸಿದರು. ನಿರಂತರವಾಗಿ ಪೆಟ್ರೋಲ್, ಡೀಸೆಲ್ ದರ ಏರಿಸುತ್ತಾ ಹೋದರೆ ನಾವು ಬದುಕೋದು ಹೇಗೆ? ಎಂದು ಜನರು ಪ್ರಶ್ನಿಸಿದರು. ಕೇಂದ್ರ ಸರ್ಕಾರವೇ ಹೆಚ್ಚು ತೆರಿಗೆ ಹಾಕುತ್ತಿದೆಯೋ ಅಥವಾ ರಾಜ್ಯ ಸರ್ಕಾರ ದರ ಹೆಚ್ಚಿಸುತ್ತಿದೆಯೋ ಎಂಬ ಗೊಂದಲವೂ ಜನರಲ್ಲಿದೆ. ಇಂಧನ ದರ ಏರಿಕೆಯಿಂದ ಸಾರಿಗೆ ವೆಚ್ಚ ಹೆಚ್ಚಾಗಿ ಅದರ ನೇರ ಪರಿಣಾಮ ತರಕಾರಿ, ದಿನಸಿ ಸೇರಿದಂತೆ ನಿತ್ಯ ಬಳಕೆಯ ವಸ್ತುಗಳ ಬೆಲೆಗಳ ಮೇಲೆ ಬೀಳಲಿದೆ ಎಂಬ ಆತಂಕ ವ್ಯಕ್ತವಾಗಿದೆ. ಇನ್ನು, ನಗರದ ಕೆಲವು ಪೆಟ್ರೋಲ್ ಬಂಕ್‌ಗಳಲ್ಲಿ, ಯಾವುದೇ ಕಾರಣಕ್ಕೂ ಬಾಟಲಿ ಮತ್ತು ಕ್ಯಾನ್ ಗಳಲ್ಲಿ ಪೆಟ್ರೋಲ್ ಹಾಗೂ ಡೀಸೆಲ್ ತುಂಬಿಕೊಡುವುದಿಲ್ಲ ಎಂಬ ಸೂಚನಾ ಫಲಕ ಅಳವಡಿಸಲಾಗಿದೆ. ಸುರಕ್ಷತಾ ಕಾರಣಗಳಿಂದಾಗಿ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಸಿಬ್ಬಂದಿ ತಿಳಿಸಿದರು. ಪಶ್ಚಿಮ ಏಷ್ಯಾ ಸಂಘರ್ಷದಿಂದಾಗಿ ದೇಶದಲ್ಲಿ ಇಂಧನ ಬೆಲೆಗಳು ಮತ್ತೆ ಏರಿವೆ. ಪೆಟ್ರೋಲ್ ಮತ್ತು ಡೀಸೆಲ್ ಬೆಲೆಗಳನ್ನು ಕ್ರಮವಾಗಿ 2.61 ರೂ ಮತ್ತು 2.71 ರೂ.ಗಳಷ್ಟು ಹೆಚ್ಚಿಸಲಾಗಿದೆ.

---

# ಹಾವೇರಿ ಜಿಲ್ಲೆಯಲ್ಲಿ ನೀರಿನ ಬವಣೆ: ಪ್ರತಿವರ್ಷವೂ ಜನ ಹೈರಾಣು

• **ಉದಯವಾಹಿನಿ.ಹಾವೇರಿ:**

'ಕೃಷಿ ಪ್ರಧಾನ ಜಿಲ್ಲೆ' ಎನಿಸಿಕೊಂಡಿರುವ ಹಾವೇರಿಯಲ್ಲಿ ವರದಾ–ತುಂಗಭದ್ರಾ ನದಿಗಳು ಹರಿಯುತ್ತಿವೆ. ಜಿಲ್ಲೆಯ ಕೆರೆಗಳೂ ವಿಶಾಲವಾಗಿವೆ. ಮಳೆಗಾಲದಲ್ಲಿ ನೀರಿನ ಲಭ್ಯತೆಯೂ ಉತ್ತಮವಾಗಿದೆ. ಆದರೆ, ನೀರನ್ನು ವ್ಯವಸ್ಥಿತ ರೀತಿಯಲ್ಲಿ ಸಂಗ್ರಹಿಸಿಟ್ಟುಕೊಂಡು ಬೇಸಿಗೆಯಲ್ಲಿ ಜನರಿಗೆ ಪೂರೈಸಲು ಸಮರ್ಪಕ ಯೋಜನೆಗಳಿಲ್ಲ!

ಇದರಿಂದಾಗಿ ಕೆಲ ಯೋಜನೆಗಳು ಜಾರಿಯಾದರೂ ವ್ಯವಸ್ಥೆಯ ಲೋಪದಿಂದಾಗಿ ಕಾಮಗಾರಿಯು ಅಪೂರ್ಣ ಸ್ಥಿತಿಯಲ್ಲೇ ಅಂತ್ಯವಾಗುತ್ತಿದೆ. ಜಿಲ್ಲೆಯ ಜನರು, ಪ್ರತಿವರ್ಷ ಬೇಸಿಗೆಯಲ್ಲಿ ನೀರಿಗಾಗಿ ಪರದಾಡುತ್ತಿದ್ದಾರೆ. ಈ ವರ್ಷವೂ ಜನರು ನೀರಿಗಾಗಿ ಹೋರಾಟ ಮಾಡುವ ಸ್ಥಿತಿ ಬಂದೊದಗಿದೆ. ಜಿಲ್ಲೆಯ ಬ್ಯಾಡಗಿ, ಹಾನಗಲ್, ಹಾವೇರಿ, ಶಿಗ್ಗಾವಿ, ಸವಣೂರು, ಹಿರೇಕೆರೂರು, ರಟ್ಟಿಹಳ್ಳಿ ಹಾಗೂ ರಾಣೆಬೆನ್ನೂರು ತಾಲ್ಲೂಕಿನ ಹಲವು ಗ್ರಾಮಗಳಲ್ಲಿ ಈಗಾಗಲೇ ನೀರಿನ ಸಮಸ್ಯೆ ಉಲ್ಬಣಿಸಿದೆ ಜಿಲ್ಲಾಡಳಿತವು ತಾತ್ಕಾಲಿಕ ಕ್ರಮಗಳ ಮೂಲಕ ನೀರು ಸರಬರಾಜಿ ವ್ಯವಸ್ಥೆ ಮಾಡಿದೆ. ಅಷ್ಟಾದರೂ ಜನರಿಗೆ ದಿನಬಳಕೆಗೆ ಅಗತ್ಯದಷ ನೀರು ಲಭ್ಯವಾಗುತ್ತಿಲ್ಲ. ''ನಮಗೆ ನೀರು ದೊರಕಿಸಲು ಶಾಶ್ವತ ಪರಿಹಾರ ಬೇಕು' ಎಂದು ಜನರು ಒತ್ತಾಯಿಸುತ್ತಿದ್ದಾರೆ. ಹಾವೇರಿ, ಸವಣೂರು, ಬಂಕಾಪುರ, ಶಿಗ್ಗಾವಿ ಪಟ್ಟಣದ ಹಲವು ಕಡೆಗಳಲ್ಲಿ ನೀರಿನ ಸಮಸ್ಯೆ ತೀವ್ರವಾಗಿದೆ. ಐದರಿಂದ 15 ದಿನಕ್ಕೊಮ್ಮೆ ನೀರು ಬಿಡುವ ಸ್ಥಿತಿ ಬಂದಿದೆ. ಈ ಪಟ್ಟಣದ



ಉದಯವಾಹಿನಿ ಚಿತ್ರ

ಜನರಿಗೆ, ನೀರು ಸಂಗ್ರಹಿಸಿಟ್ಟುಕೊಳ್ಳುವುದೇ ದೊಡ್ಡ ಸವಾಲಾಗಿದೆ. ಮನೆಗೊಂದು ತಳ್ಳುಗಾಡಿ ಇಟ್ಟುಕೊಂಡಿರುವ ಜನರು, ನೀರು ತರುವುದನ್ನೇ ಕಾಯಕ ಮಾಡಿಕೊಂಡಿದ್ದಾರೆ. ''ಬೇಸಿಗೆ ಆರಂಭವಾಗುತ್ತಿದ್ದಂತೆ ಜಿಲ್ಲೆಯ 286 ಗ್ರಾಮಗಳಲ್ಲಿ ...ರಿನ ಸಮಸ್ಯೆ ಉಲ್ಬಣಿಸುತ್ತದೆ' ಎಂಬ ಮಾಹಿತಿ ...ಲ್ಲಾಡಳಿತದ ಬಳಿಯಿದೆ. ಪ್ರತಿ ವರ್ಷವೂ ...ತ್ರಿಕಾ ಪ್ರಕಟಣೆ ಹೊರಡಿಸುವ ಜಿಲ್ಲಾಡಳಿತ, ...86 ಗ್ರಾಮಗಳಲ್ಲಿ ನೀರಿಗೆ ವ್ಯವಸ್ಥೆ ...ಮಾಡಿದ್ದೇವೆ. ಖಾಸಗಿ ಕೊಳವೆ ಬಾವಿ ...ಬಾಡಿಗೆ ಪಡೆದಿದ್ದೇವೆ' ಎಂದಷ್ಟೇ ಹೇಳಿ ...ದಿನದೂಡುತ್ತದೆ. ಆದರೆ, ಈ ಗ್ರಾಮಗಳ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರವೇನು? ಎಂಬುದನ್ನು ಯೋಚಿಸುತ್ತಿಲ್ಲ. ಜಿಲ್ಲೆಯ ಆಡಳಿತ ವರ್ಗದ ಮುಖ್ಯಸ್ಥರಾದ ಜಿಲ್ಲಾಧಿಕಾರಿ ಹಾಗೂ ಸರ್ಕಾರದ ಕೆಲಸಗಳ ಪ್ರಗತಿಯ ಹೊಣೆ ಹೊತ್ತ ಜಿಲ್ಲಾ ಉಸ್ತುವಾರಿ ಸಚಿವರು, ಆಗಾಗ ಬದಲಾಗುತ್ತಾರೆ. ಇವರೆಲ್ಲರೂ ತಾತ್ಕಾಲಿಕ ಪರಿಹಾರಕ್ಕಷ್ಟೇ ಸೀಮಿತವಾಗುವ ಕೆಲಸ ಮಾಡಿ ಹೋಗುತ್ತಿದ್ದಾರೆ. ಶಾಶ್ವತ ಪರಿಹಾರದತ್ತ ಗಮನ ಹರಿಸುತ್ತಿಲ್ಲ. ಇದೇ ಕಾರಣಕ್ಕೆ, ಹಾವೇರಿ ಜಿಲ್ಲೆಯ ನೀರಿನ ಸಮಸ್ಯೆಗೆ ಇಂದಿಗೂ ಪರಿಹಾರ ಸಿಕ್ಕಿಲ್ಲವೆಂಬ ನೋವು ಜನರಲ್ಲಿದೆ. ನಿರಂತರ ನೀರು, ಮನೆ ಮನೆಗೆ ನೀರು, ಅಮೃತ ಯೋಜನೆ, ಬಹುಗ್ರಾಮ ಯೋಜನೆ ಸೇರಿ ಹಲವು ಯೋಜನೆಗಳು ಜಿಲ್ಲೆಯಲ್ಲಿ ಜಾರಿಯಲ್ಲಿವೆ. ಇದೇ ವಿಚಾರವಾಗಿಯೇ ಜಿಲ್ಲಾ ಉಸ್ತುವಾರಿ ಸಚಿವ ಶಿವಾನಂದ ಪಾಟೀಲ, ಪ್ರತಿ ಬಾರಿಯ ಸಭೆಯಲ್ಲಿ ಅಧಿಕಾರಿಗಳ ವಿರುದ್ಧ ಹರಿಹಾಯುತ್ತಿದ್ದಾರೆ.

ಜನರಿಗೆ ನೀರು ಕೊಡಲು ಜಿಲ್ಲೆಯಲ್ಲಿ ಹಲವು ಯೋಜನೆಗಳಿವೆ. ಆದರೆ, ಅಧಿಕಾರಿಗಳ ಬೇಜವಾಬ್ದಾರಿಯಿಂದ ಯೋಜನೆ ಪೂರ್ಣಗೊಳಿಸಲು ಆಗುತ್ತಿಲ್ಲ. ನಮಗೂ ಜನರಿಗೆ ಮುಖ ತೋರಿಸಲು ಆಗುತ್ತಿಲ್ಲ. ಜನರು ನಮ್ಮ ಮೇಲೆ ಹಿಡಿಶಾಪ ಹಾಕುತ್ತಿದ್ದಾರೆ' ಎಂದು ಶಿವಾನಂದ ಪಾಟೀಲ ಬಹಿರಂಗವಾಗಿ ಅಳಲು ತೋಡಿಕೊಳ್ಳುತ್ತಿದ್ದಾರೆ. ಅಷ್ಟಾದರೂ ಅಧಿಕಾರಿಗಳು, ಯೋಜನೆ ಯಶಸ್ವಿಗೆ ತಲೆಕೆಡಿಸಿಕೊಳ್ಳುತ್ತಿಲ್ಲ. ಪ್ರಗತಿ ಪರಿಶೀಲನೆ ನೆಪದಲ್ಲಿಯೇ ಕಾಲಹರಣ ಮಾಡುತ್ತಿದ್ದಾರೆ. ''ಸಭೆಯಲ್ಲಿ ಸಚಿವರು ಹೇಳುತ್ತಾರೆ. ವಾಪಸು ಹೋಗುತ್ತಾರೆ' ಎಂಬ ಭಾವನೆಯಲ್ಲಿಯೇ ಅಧಿಕಾರಿಗಳು ದಿನ ಕಳೆಯುತ್ತಿದ್ದಾರೆ.

ಈ ಮನಸ್ಥಿತಿಯಿಂದಲೇ ಜಿಲ್ಲೆಯ ನೀರಿನ ಸಮಸ್ಯೆಗೆ ಪರಿಹಾರ ಸಿಗುತ್ತಿಲ್ಲವೆಂದು ಜನರು ದೂರುತ್ತಿದ್ದಾರೆ. 'ಯೋಜನೆಗಳ ಅಂತಿಮ ದಿನವನ್ನು ಹತ್ತಕ್ಕೂ ಹೆಚ್ಚು ಬಾರಿ ವಿಸ್ತರಣೆ ಮಾಡಿಸಿಕೊಂಡಿದ್ದಾರೆ. ಅಷ್ಟಾದರೂ ಜನರಿಗೆ ನೀಡು ಕೊಡಲು ಆಗಿಲ್ಲ. ಮೇಲಿಂದ ಮೇಲೆ ನೊಟೀಸ್ ನೀಡಿ, ದಂಡ ವಿಧಿಸಿದರೂ ಗುತ್ತಿಗೆದಾರರು ಕ್ಯಾರೇ ಎಂದಿಲ್ಲ.

ನಿರ್ಲಕ್ಷ್ಯ ವಹಿಸುತ್ತಿರುವ ಅವರ ಮೇಲೆ ಕಠಿಣ ಕ್ರಮದ ಅನಿವಾರ್ಯತೆಯಿದೆ. ಅಧಿಕಾರಿಗಳ ಬೇಜವಾಬ್ದಾರಿಯೂ ಇದರಲ್ಲಿದೆ' ಎಂದು ಕಿಡಿಕಾರಿದ್ದರು. ಆದರೆ, ಯೋಜನೆ ಅನುಷ್ಠಾನದಲ್ಲಿ ಲೋಪ ಎಸಗಿದ ಅಧಿಕಾರಿಗಳು ಹಾಗೂ ಗುತ್ತಿಗೆದಾರರ ಮೇಲೆ ಇದುವರೆಗೂ ಯಾವುದೇ ಕ್ರಮವಾಗಿಲ್ಲ. 'ಕೇವಲ ಭಾಷಣಕ್ಕಷ್ಟೇ ಸೀಮಿತವಾದ ಸಚಿವರ ನಡೆಯೂ ಅನುಮಾನಕ್ಕೆ ಕಾರಣವಾಗಿದೆ' ಎಂದು ಜನರು ಆರೋಪಿಸುತ್ತಿದ್ದಾರೆ.

**ನೀರು ದೊರಕಿಸಲು ಶಾಶ್ವತ ಪರಿಹಾರ**

ಬೆಂಗಳೂರಿನ ವಿಧಾನಸೌಧದಲ್ಲಿ ಇತ್ತೀಚೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಪಾಲ್ಗೊಂಡಿದ್ದ ಸಚಿವ ಶಿವಾನಂದ ಪಾಟೀಲ, 'ಹಾವೇರಿ ಜಿಲ್ಲೆಯ ಜನರಿಗೆ ಕುಡಿಯುವ ನೀರು ಒದಗಿಸಲು ಬಹುಗ್ರಾಮ, ನಿರಂತರ ನೀರು ಸೇರಿ ಹಲವು ಯೋಜನೆಗಳನ್ನು ಜಾರಿಗೊಳಿಸಲಾಗಿದೆ. ಆದರೆ, ನಿಗದಿತ ಅವಧಿಯೊಳಗೆ ಕಾಮಗಾರಿ ಪೂರ್ಣಗೊಳಿಸುವಲ್ಲಿ ಗುತ್ತಿಗೆದಾರರು ವಿಫಲರಾಗಿದ್ದಾರೆ. ಜಿಲ್ಲೆಯಲ್ಲಿ ಎದುರಾಗಿರುವ ಕುಡಿಯುವ ನೀರಿನ ಸಮಸ್ಯೆಗೆ ಗುತ್ತಿಗೆದಾರರೇ ನೇರ ಕಾರಣ' ಎಂದು ನೇರವಾಗಿ ಆರೋಪಿಸಿದ್ದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾನ | 03:00 ರಿಂದ 04:30 |
| ಗುಳಿಕ ಕಾಲ | ಮಧ್ಯಾನ | 12:00 ರಿಂದ 01:30 |
| ಯಮಗಂಡ ಕಾಲ | ಬೆಳಿಗ್ಗೆ | 09:30 ರಿಂದ 10:30 |

**ಮೇಷ** ನೀವು ಚೈತನ್ಯದಿಂದ ತುಂಬಿರುತ್ತೀರಿ ಮತ್ತು ಇಂದು ಅಸಾಮಾನ್ಯವಾದದ್ದೇನಾದರೂ ಸಾಧಿಸುತ್ತೀರಿ. ದೀರ್ಘ ಕಾಲ ಬಾಕಿಯಿದ್ದ ಬಾಕಿಗಳು ಕೊನೆಗೂ ದೊರಕುತ್ತವೆ. ನಿಮ್ಮ ಕುಟುಂಬದ ಸದಸ್ಯರು ನಿಮ್ಮ ಪ್ರಯತ್ನ ಮತ್ತು ಸಮರ್ಪಣೆಯನ್ನು ಪ್ರಶಂಸಿಸುತ್ತಾರೆ ಚಿಂತಿಸಬೇಡಿ.

**ವೃಷಭ** ನಿಮ್ಮ ಹಾಸ್ಯಪ್ರಜ್ಞೆ ಇನ್ನೊಬ್ಬರಿಗೆ ಸಂತೋಷ ವಸ್ತುಗಳನ್ನು ಹೊಂದುವುದರಲ್ಲದೇ ನಮ್ಮೊಳಗೇ ಇದೆಯೆಂದು ಅರ್ಥ ಮಾಡಿಸುವುದರಿಂದ ಅವರು ಸ್ವತಃ ಈ ಕೌಶಲ್ಯವನ್ನು ಹೊಂದಲು ಪ್ರೋತ್ಸಾಹಿಸಿದಂತಾಗುತ್ತದೆ. ನಿಮ್ಮ ಖರ್ಚುಗಳಲ್ಲಿ ಅನಿರೀಕ್ಷಿತ ಏರಿಕೆ ನಿಮ್ಮ ಮನಸ್ಸಿನ ಶಾಂತಿಗೆ ಭಂಗ ತರುತ್ತದೆ.

**ಮಿಥುನ** ಆರೋಗ್ಯ ಪರಿಪೂರ್ಣವಾಗಿರುತ್ತದೆ. ಆರ್ಥಿಕ ಜೀವನದಲ್ಲಿ ಇಂದು ಸಂತೋಷ ಉಳಿದಿರುತ್ತದೆ. ಇದರೊಂದಿಗೆ ನೀವು ಇಂದು ಸಾಲಗಳಿಂದ ಮುಕ್ತರಾಗಬಹುದು. ಮನೆಯ ಕೆಲಸ ನಿಮ್ಮನ್ನು ಯಾವಾಗಲೂ ವ್ಯಸ್ತವಾಗಿರಿಸುತ್ತದೆ. ಪ್ರೀತಿ ನಿಮ್ಮ ಪ್ರೀತಿಪಾತ್ರರೊಡನೆ ಹಂಚಿಕೊಳ್ಳಬೇಕಾದ ಭಾವನೆ.

**ಕರ್ಕಾಟಕ** ನಿಮ್ಮ ಕುಟುಂಬದ ಸಲುವಾಗಿ ಏನಾದರೂ ಉದಾತ್ತ ಮತ್ತು ಉಪಯುಕ್ತವಾದದ್ದರ ಸಲುವಾಗಿ ಶ್ರಮಪಡಿ. ಒಂದು ತಪ್ಪಿದ ಅವಕಾಶ ಮತ್ತೆ ಮರಳದೇ ಇರಬಹುದಾದ್ದರಿಂದ ಹಿಂಜರಿಯಬೇಡಿ. ನಿಮ್ಮ ಪ್ರೇಮಿಯ ಭಾವನಾತ್ಮಕ ಬೆದರಿಕೆಯ ಬೇಡಿಕೆಗಳಿಗೆ ಸಮ್ಮತಿಸಬೇಡಿ.

**ಸಿಂಹ** ನಿಮ್ಮ ಸಂತೋಷದ ಪ್ರಕೃತಿ ಇತರರಿಗೆ ಸಂತೋಷ ತರುತ್ತದೆ. ನೀವು ವಿಪರೀತವಾಗಿ ಖರ್ಚು ಮಾಡುವುದನ್ನು ನಿಲ್ಲಿಸಿದಾಗ ಮಾತ್ರ ನಿಮ್ಮ ಹಣವು ನಿಮ್ಮ ಕೆಲಸಕ್ಕೆ ಬರುತ್ತದೆ, ಇಂದು ನೀವು ಈ ವಿಷಯವನ್ನು ಚೆನ್ನಾಗಿ ಅರ್ಥಮಾಡಿಕೊಳ್ಳಬಹುದು. ಕೆಲವರಿಗೆ ಕುಟುಂಬದಲ್ಲಿ ಒಂದು ಹೊಸ ಆಗಮನ ಸಂಭ್ರಮಾಚರಣೆ ತೆರೆದಿಡುತ್ತದೆ.

**ಕನ್ಯಾ** ವಿಶ್ರಾಂತಿ ಪ್ರಮುಖವಾದ ಒಂದು ದಿನ ? ಇತ್ತೀಚೆಗೆ ನೀವು ಬಹಳಷ್ಟು ಮಾನಸಿಕ ಒತ್ತಡ ಎದುರಿಸುತ್ತಿದ್ದೀರಿ – ಮನೋಲ್ಲಾಸ ಮತ್ತು ಮನೋರಂಜನೆ ನಿಮಗೆ ವಿಶ್ರಾಂತಿ ಪಡೆಯಲು ಸಹಾಯ ಮಾಡುತ್ತದೆ. ಇಂದು ಯಾವುದೇ ಸಹಾಯವಿಲ್ಲದೆ, ನೀವು ಹಣವನ್ನು ಗಳಿಸುವಲ್ಲಿ ಸಾಮರ್ಥ್ಯರಾಗಿರುತ್ತೀರಿ.

**ತುಲಾ** ನೀವು ಇಂದು ಹಾಜರಾಗುವ ಉಪನ್ಯಾಸಗಳು ಮತ್ತು ವಿಚಾರಗೋಷ್ಠಿಗಳು ಬೆಳವಣಿಗೆಗೆ ಹೊಸ ವಿಚಾರಗಳನ್ನು ತರುತ್ತವೆ. ನೀವು ಸಹಾಯಕ್ಕಾಗಿ ನಿಮ್ಮ ಬಳಿ ಬರುವ ಜನರಿಗೆ ಬದ್ಧತೆ ನೀಡುತ್ತೀರಿ. ನಿಮ್ಮ ಸಂಗಾತಿಯ ಇಂದು ಪ್ರಣಯದ ಭಾವನೆಯಲ್ಲಿರುವಂತೆ ಕಾಣುತ್ತದೆ.

**ವೃಶ್ಚಿಕ** ಕೆಲಸದ ಒತ್ತಡ ಇಂದು ಸ್ವಲ್ಪ ಒತ್ತಡ ತರಬಹುದು. ಆರ್ಥಿಕ ನಿರ್ಬಂಧಗಳನ್ನು ತಪ್ಪಿಸಲು ನಿಮ್ಮ ಬಜೆಟ್‌ಗೆ ಅಂಟಿಕೊಳ್ಳಿ. ನಿಮ್ಮ ಕೋಪವನ್ನು ನಿಯಂತ್ರಿಸಿ ಹಾಗೂ ಕುಟುಂಬದ ಸದಸ್ಯರ ಮನ ನೋಯಿಸುವುದನ್ನು ತಪ್ಪಿಸಿ. ನಿಮ್ಮ ಪ್ರೀತಿ ಒಂದು ಹೊಸ ಎತ್ತರವನ್ನು ತಲುಪುತ್ತದೆ.

**ಧನಸ್ಸು** ಫಿಟ್ ನೆಸ್ ಮತ್ತು ತೂಕ ನಷ್ಟ ಕಾರ್ಯಕ್ರಮಗಳು ನೀವು ಒಳ್ಳೆಯ ದೇಹರಚನೆ ಹೊಂದಲು ಸಹಾಯ ಮಾಡುತ್ತದೆ. ಇಂದು ನೀವು ನಿಮ್ಮ ಮನೆಯ ಹಿರಿಯ ಜನರಿಂದ ಹಣವನ್ನು ಉಳಿಸುವ ಬಗ್ಗೆ ಯಾವುದೇ ಸಲಹೆಯನ್ನು ತೆಗೆದುಕೊಳ್ಳಬಹುದು ಮತ್ತು ಆ ಸಲಹೆಗೆ ಜೀವನದಲ್ಲಿ ಸ್ಥಾನವನ್ನು ಸಹ ನೀಡಬಹುದು

**ಮಕರ** ಬಿಡುವಿರದ ಕಾರ್ಯಕ್ರಮದ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದೆ. ಈ ರಾಶಿಚಕ್ರದ ಕೆಲವು ಜನರಿಗೆ ಇಂದು ಮಕ್ಕಳ ಬದಿಯಿಂದ ಆರ್ಥಿಕ ಲಾಭವನ್ನು ಪಡೆಯುವ ಭರವಸೆ ಇದ. ಇಂದು ನೀವು ನಿಮ್ಮ ಮಕ್ಕಳ ಮೇಲೆ ಹೆಮ್ಮೆಯನ್ನು ಅನುಭವಿಸುವಿರಿ. ಮಕ್ಕಳು ನಿಮ್ಮ ದಿನವನ್ನು ಕಠಿಣಗೊಳಿಸುತ್ತಾರೆ.


**ಕುಂಭ** ನಿಮ್ಮ ಶಾಂತತೆಯನ್ನು ಕಾಪಾಡಿಕೊಳ್ಳಲು ಸಹಾಯ ಮಾಡುವ ಚಟುವಟಿಕೆಗಳಲ್ಲಿ ನಿಮ್ಮನ್ನು ತೊಡಗಿಸಿಕೊಂಡಿರಿ. ಇಂದು ಷೇರು ಮಾರುಕಟ್ಟೆಯಲ್ಲಿ ಹಣವನ್ನು ಹೂಡಿಕೆ ಮಾಡುವವರು ತಮ್ಮ ಹಣವನ್ನು ಕಳೆದುಕೊಳ್ಳಬಹುದು. ಸಮಯಕ್ಕೆ ನೀವು ಜಾಗರೂಕರಾಗಿದ್ದರೆ ಅದು ನಿಮಗೆ ಉತ್ತಮವಾಗಿರುತ್ತದೆ.

**ಮೀನ** ದೈಹಿಕ ಲಾಭಕ್ಕಾಗಿ ವಿಶೇಷವಾಗಿ ಮಾನಸಿಕ ದೃಢತೆಗಾಗಿ ಧ್ಯಾನ ಮತ್ತು ಯೋಗ ಪ್ರಾರಂಭಿಸಿ. ಮನರಂಜನೆ ಅಥವಾ ಹೊರನೋಟದ ಸುಧಾರಣೆಗಾಗಿ ಹೆಚ್ಚು ಖರ್ಚು ಮಾಡಬೇಡಿ. ನಿಮ್ಮ ಹಠಮಾರಿ ಪ್ರಕೃತಿ ನಿಮ್ಮ ಪೋಷಕರ ಶಾಂತಿಯನ್ನು ಹಾಳು ಮಾಡಬಹುದು. ನೀವು ಅವರ ಸಲಹೆಯನ್ನು ಪಾಲಿಸಬೇಕು.

# ಬಿಜೆಪಿ ಸರ್ಕಾರ ಮಾಡಿದ ಡೀಮ್ಡ್

• ಉದಯವಾಹಿನಿ, ಉಡುಪಿ:

ಪರಿಭಾವಿತ ಅರಣ್ಯ ಪ್ರದೇಶದಲ್ಲಿ ಸರ್ಕಾರಿ ಕಟ್ಟಡ, ಆಸ್ಪತ್ರೆ, ಅಂಗನವಾಡಿ ಇತ್ಯಾದಿ ಇದ್ದು, ಬಿಜೆಪಿ ಸರ್ಕಾರದ ಆಡಳಿತದಲ್ಲಿ ಆಗಿರುವ ತಪ್ಪು ಸರಿಪಡಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತಿರುವುದಾಗಿ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ. ಮೊದಲಿಗೆ ಸುಪ್ರೀಂಕೋರ್ಟ್‌ಗೆ ಪ್ರಮಾಣಪತ್ರ ಸಲ್ಲಿಸಿದಾಗ 9 ಲಕ್ಷ ಹೆಕ್ಟೇರ್ ಜಮೀನನ್ನು ಡೀಮ್ಡ್ ಎಂದು ಗುರುತಿಸಲಾಗಿತ್ತು.



ಉದಯವಾಹಿನಿ ಚಿತ್ರ

ನಂತರ 2022ರಲ್ಲಿ ಪ್ರಮಾಣಪತ್ರ ಸಲ್ಲಿಸಿದಾಗ 3 ಲಕ್ಷ 33 ಸಾವಿರ ಹೆಕ್ಟೇರ್ ಜಮೀನು ಎಂದು ಪರಿಷ್ಕರಿಸಲಾಯಿತು. ಆಗ ಸಮರ್ಪಕವಾಗಿ ಸರ್ವೆ ನಡೆಸದೆ, ಖುದ್ದು ಪರಿಶೀಲಿಸದ ಕಾರಣ ಸರ್ಕಾರಿ ಕಟ್ಟಡ, ಶಾಲೆ, ಆಸ್ಪತ್ರೆ, ಪಟ್ಟಾ ಭೂಮಿ ಸೇರಿದೆ. ಬಡ ಮತ್ತು ಮಧ್ಯಮ ವರ್ಗದ ಜನರು ಸಂಕಷ್ಟ ಎದುರಿಸುತ್ತಿದ್ದು, ಈ ಲೋಪ ಸರಿಪಡಿಸಬೇಕಾಗಿದೆ. ಕುದುರೆಮುಖ ಕಬ್ಬಿಣದ ಅದಿರು ಕಂಪನಿ ಅರಣ್ಯ ಇಲಾಖೆಗೆ ದಂಡ ಮತ್ತು ಇತರ ಶುಲ್ಕವನ್ನು ಪಾವತಿಸಬೇಕಾಗಿದೆ. ಪ್ರಸ್ತುತ ಹೈಕೋರ್ಟ್ ಈ ಸಂಬಂಧ ನಿರ್ದೇಶನ ನೀಡಿದ್ದು, ನ್ಯಾಯಾಲಯದ ಆದೇಶದಂತೆ ಸರ್ಕಾರ ನಡೆಯಲಿದೆ ಎಂದು ಹೇಳಿದರು. ತರುವಾಯ ಅರಣ್ಯ ಅಧಿಕಾರಿಗಳಿಗೆ ಮತ್ತು ಸಿಬ್ಬಂದಿಗೆ ಒದಗಿಸಲಾಗಿರುವ ಆಧುನಿಕ ಮತ್ತು ಹಗುರ ಬಂದೂಕುಗಳ ಪರಿಶೀಲನೆ ನಡೆಸಿ ಮಾತನಾಡಿದ ಅವರು, ಮುಂಚೂಣಿ ಸಿಬ್ಬಂದಿಯ ಸುರಕ್ಷತೆಗೂ ಗಮನ ಹರಿಸುವಂತೆ ತಿಳಿಸಿದರು. ಆನೆ ಕಾರ್ಯಪಡೆ, ಕಳ್ಳಬೇಟೆ ನಿಗ್ರಹ ಪಡೆ, ಮುಂಚೂಣಿ ಸಿಬ್ಬಂದಿಗಳಿಗೆ ವಸತಿಗೃಹಗಳನ್ನು ನೀಡಲಾಗಿದೆಯೇ ಎಂದೂ ಪ್ರಶ್ನಿಸಿದ ಸಚಿವರು, ಕಷ್ಟಪಟ್ಟು ಅಪಾಯದಲ್ಲಿ ಕಾರ್ಯ ನಿರ್ವಹಿಸುವ ಸಿಬ್ಬಂದಿಗೆ ಅಪಾಯಭತ್ಯೆ ನೀಡಲಾಗುತ್ತಿದೆಯೇ ಎಂಬುದನ್ನು ಖಾತ್ರಿ ಪಡಿಸಿಕೊಳ್ಳುವಂತೆ ತಿಳಿಸಿದರು. ನಂತರ ಪ್ರವಾಸಿ ಮಂದಿರಕ್ಕೆ ತೆರಳಿದ ಸಚಿವರು ಪಕ್ಷದ ಕಾರ್ಯಕರ್ತರನ್ನು ಭೇಟಿ ಮಾಡಿ ಅಹವಾಲು ಆಲಿಸಿದರು. ಇದೇ ಸಂದರ್ಭದಲ್ಲಿ ವಲಯ ಅರಣ್ಯಾಧಿಕಾರಿಗಳ ಕಚೇರಿಯ ಆವರಣದಲ್ಲಿ ಸಸಿ ನೆಟ್ಟು ನೀರೆರೆದರು. ಇದಕ್ಕೂ ಮುನ್ನ ಕಟೀಲು ದುರ್ಗಾ ಪರಮೇಶ್ವರಿ ದೇವಾಲಯಕ್ಕೆ ತೆರಳಿದ ಈಶ್ವರ ಖಂಡ್ರೆ, ದೇವರ ದರ್ಶನ ಪಡೆದು, ರಾಜ್ಯದಲ್ಲಿ ಉತ್ತಮ, ಮಳೆ, ಬೆಳೆ, ಆಗಲಿ, ಸಮೃದ್ಧಿ ನೆಲೆಸಲಿ ಎಂದು ಪ್ರಾರ್ಥಿಸಿದರು. ಈ ಸಂದರ್ಭದಲ್ಲಿ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಕರಿಕಳನ್, ಕಮಲಾ ಕರಿಕಳನ್ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.

**9 ಲಕ್ಷ ಹೆಕ್ಟೇರ್ ಜಮೀನು**

**ಮುಂಚೂಣಿ ಸಿಬ್ಬಂದಿಗೆ ಸುರಕ್ಷತಾ ಸಲಕರಣೆ**

**ಅರಣ್ಯ ರಕ್ಷಣೆಯಲ್ಲಿ ಮುಂಚೂಣಿ ಸಿಬ್ಬಂದಿಯ ಪಾತ್ರ ಮಹತ್ವದ್ದಾಗಿದ್ದು, ಅವರ ಸುರಕ್ಷತೆಗಾಗಿ ವಿದ್ಯುತ್ ಪ್ರವಹಿಸುವ ಕೈಗೋಲು ಮಳೆಯಿಂದ ರಕ್ಷಿಸುವ ಜಾಕೆಟ್, ಶೂ ಇತ್ಯಾದಿ ನೀಡುವಂತೆ ಈಶ್ವರ ಖಂಡ್ರೆ ಸೂಚಿಸಿದ್ದಾರೆ.**

**ಕಾರ್ಕಳದಲ್ಲಿಂದು ವಲಯ ಅರಣ್ಯಾಧಿಕಾರಿಗಳ ಮತ್ತು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಯವರ ನೂತನ ಕಟ್ಟಡ ಉದ್ಘಾಟಿಸಿ, ಅರಣ್ಯ ಹುತಾತ್ಮರಿಗೆ ಪುಷ್ಪನಮನ ಸಲ್ಲಿಸಿ ಮಾತನಾಡಿದ ಅವರು, ಡೀಮ್ಡ್ ಅರಣ್ಯ ಸಮಸ್ಯೆ ಪರಿಹರಿಸಲು ಕೊನೆಯ ಅವಕಾಶ ದೊರೆತಿದ್ದು, ಸರ್ವೋನ್ನತ ನ್ಯಾಯಾಲಯಕ್ಕೆ ಮರು ಮನವಿ ಸಲ್ಲಿಸುವ ಸಲುವಾಗಿ ಜಿಲ್ಲಾ ಮಟ್ಟ ಮತ್ತು ರಾಜ್ಯಮಟ್ಟದಲ್ಲಿ ಸಮಿತಿ ರಚಿಸಲಾಗಿದೆ ಎಂದರು.**

## ಬಾಲಕಿ ಮೇಲೆ ಅತ್ಯಾಚಾರ ?

• ಉದಯವಾಹಿನಿ, ಧಾರವಾಡ:

ಅಪ್ರಾಪ್ತ ಬಾಲಕಿ ಮೇಲೆ ದುರುಳನೊಬ್ಬ ಅತ್ಯಾಚಾರ ಎಸಗಿರುವ ಘಟನೆ ಧಾರವಾಡದ ಬಡಾವಣೆಯೊಂದರಲ್ಲಿ ನಡೆದಿದೆ. 9ನೇ ತರಗತಿಯಲ್ಲಿ ಓದುತಿದ್ದ 14 ವರ್ಷದ ಬಾಲಕಿ ಮೇಲೆ ಅತ್ಯಾಚಾರ ಎಸಗಿದ ದುರುಳ ಖಾಜಾಸಾಬ್ ಪಠಾಣ್ ವಿರುದ್ಧ ವಿದ್ಯಾಗಿರಿ ಠಾಣೆಯಲ್ಲಿ ಪೋಕ್ಸೋ ಪ್ರಕರಣ ದಾಖಲಾಗಿದೆ. ಬಾಲಕಿಯನ್ನ ನಿರ್ಜನ ಪ್ರದೇಶಕ್ಕೆ ಕರೆದೊಯ್ದಿದ್ದ ಖಾಜಾಸಾಬ್, ಆಕೆಯನ್ನ ಪ್ರೀತಿಸುವುದಾಗಿ ಹೇಳಿ ಅತ್ಯಾಚಾರ ಎಸಗಿದ್ದಾನೆ ಎನ್ನಲಾಗಿದೆ. ಈ ವೇಳೆ ಸ್ಥಳೀಯರು ಖಾಜಾಸಾಬ್‌ನನ್ನು ಹಿಡಿದು ವಿಚಾರಿಸಿದ್ದಾರೆ. ಆತನ ಮೊಬೈಲ್ ಪರಿಶೀಲಿಸಿದಾಗ, ಮೊಬೈಲ್‌ನಲ್ಲಿ ಬಾಲಕಿ ಜೊತೆಗಿನ ಕೆಲ ಖಾಸಗಿ ಫೋಟೋಗಳು ಪತ್ತೆಯಾಗಿದೆ. ಸದ್ಯ ಖಾಜಾಸಾಬ್ ವಿರುದ್ಧ ಪೋಕ್ಸೋ ಪ್ರಕರಣ ದಾಖಲಾಗಿದೆ.

## ಸರ್ವರ್ ಆಟಕ್ಕೆ ಸಾರ್ವಜನಿಕರು ಹೈರಾಣು


• ಉದಯವಾಹಿನಿ, ಬಳ್ಳಾರಿ

ರಾಜ್ಯದಲ್ಲಿ ಜಾರಿಗೆ ತಂದಿರುವ ಹೊಸ ನಿಯಮವೊಂದು ಸದ್ಯ ಪಡಿತರ ಚೀಟಿದಾರರ ಪಾಲಿಗೆ ನರಕಯಾತನೆಯಾಗಿ ಪರಿಣಮಿಸಿದೆ. ತಾಂತ್ರಿಕ ದೋಷ ಹಾಗೂ ಇತರ ಕಾರಣಗಳಿಂದಾಗಿ ಮೇ ಮತ್ತು ಜೂನ್ ತಿಂಗಳ ಆಹಾರ ಧಾನ್ಯಗಳನ್ನು ಒಟ್ಟಿಗೆ ವಿತರಿಸಲು ಸರ್ಕಾರ ಮುಂದಾಗಿದ್ದು, ಇದು ನ್ಯಾಯಬೆಲೆ ಅಂಗಡಿಗಳ ಮುಂದೆ ಗಂಟೆಗಟ್ಟಲೆ ಜನಸಾಮಾನ್ಯರು ಕ್ಯೂ ನಿಲ್ಲುವಂತೆ ಮಾಡಿದೆ. ಇತ್ತ ಸಾರ್ವಜನಿಕರ ಆಕ್ರೋಶಕ್ಕೆ ತುತ್ತಾಗಿರುವ ಪಡಿತರ ವಿತರಕರು, ಈಗ ಸರ್ಕಾರದ ವಿರುದ್ಧ ಬೀದಿಗಿಳಿಯಲು ಸಜ್ಜಾಗಿದ್ದಾರೆ.

**ಸಮಸ್ಯೆಯನ್ನು ಜಟಿಲಗೊಳಿಸಿದ 'ಡಬಲ್ ಬಯೋಮೆಟ್ರಿಕ್'**: ಪ್ರಸ್ತುತ ಎರಡು ತಿಂಗಳ ಪಡಿತರವನ್ನು ಒಟ್ಟಿಗೆ ನೀಡುತ್ತಿರುವುದರಿಂದ, ಪ್ರತಿಯೊಬ್ಬ ಕಾರ್ಡುದಾರರು ನ್ಯಾಯಬೆಲೆ ಅಂಗಡಿಯಲ್ಲಿ ಪ್ರತ್ಯೇಕವಾಗಿ ಎರಡೆರಡು ಬಾರಿ ಹೆಬ್ಬೆಟ್ಟಿನ ಗುರುತು (ಬಯೋಮೆಟ್ರಿಕ್) ನೀಡಬೇಕಾಗಿದೆ. ಈಗಾಗಲೇ ಮಂದಗತಿಯಲ್ಲಿ ಸಾಗುತ್ತಿರುವ ಸರ್ವರ್ ವ್ಯವಸ್ಥೆಯ ನಡುವೆ, ಈ ಪ್ರಕ್ರಿಯೆಯು ಪ್ರತಿಯೊಬ್ಬ ಗ್ರಾಹಕನಿಗೆ ಕನಿಷ್ಠ 15 ರಿಂದ 20 ನಿಮಿಷಗಳನ್ನು ತೆಗೆದುಕೊಳ್ಳುತ್ತಿದೆ. ಇದರಿಂದಾಗಿ ಬೆಳಗಿನಿಂದ ಸಂಜೆಯವರೆಗೆ ಕಾದರೂ ಅಕ್ಕಿ ಸಿಗದೇ ಜನ ನಿತ್ಯ ಪರದಾಡುವಂತಾಗಿದೆ. ಕೆಲವೆಡೆ ಸಾರ್ವಜನಿಕರು ಹಾಗೂ ಅಂಗಡಿ ಮಾಲೀಕರ ನಡುವೆ ಮಾತಿನ ಚಕಮಕಿ, ಗಲಾಟೆಗಳೂ ಸಂಭವಿಸಿರುವ ಉದಾಹರಣೆ ಉಂಟು.

ತಿಂಗಳ ಕೊನೆಯ ವಾರಕ್ಕೆ (ಮೇ 30) ದಿನಗಣನೆ ಆರಂಭವಾಗಿದ್ದರೂ, ಸರ್ವರ್ ಸಮಸ್ಯೆಯಿಂದಾಗಿ ಇಷ್ಟರವರೆಗೆ ಕೇವಲ ಶೇ. 30 ರಿಂದ 40ರಷ್ಟು ಜನರಿಗೆ ಮಾತ್ರ ಪಡಿತರ ವಿತರಿಸಲು ಸಾಧ್ಯವಾಗಿದೆ.

## ಸಭೆ ಕರೆಯಲು ಕಾರಂಜಾ ಸಂತ್ರಸ್ತರ ಆಗ್ರಹ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೀದರ್:

ಕಾರಂಜಾ ಯೋಜನೆಯಲ್ಲಿ ಜಮೀನು ಕಳೆದುಕೊಂಡು ಸಂತ್ರಸ್ತರಾದವರ ಸಮಸ್ಯೆ ಪರಿಹಾರಕ್ಕೆ ಸಂಬಂಧಿಸಿದಂತೆ ಇದುವರೆಗೆ ನಡೆದ ಬೆಳವಣಿಗೆ, ಸರ್ಕಾರ ಕೈಗೊಂಡ ಕ್ರಮಗಳ ಕುರಿತು ಜಿಲ್ಲಾಧಿಕಾರಿ ಅಧ್ಯಕ್ಷತೆಯಲ್ಲಿ ಸಭೆ ಕರೆಯಬೇಕೆಂದು ಕಾರಂಜಾ ಮುಳುಗಡೆ ಸಂತ್ರಸ್ತರ ಹಿತರಕ್ಷಣಾ ಸಮಿತಿ ಆಗ್ರಹಿಸಿದೆ. ಈ ಸಂಬಂಧ ಸಮಿತಿಯ ಪದಾಧಿಕಾರಿಗಳು ನಗರದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಅವರಿಗೆ ಮನವಿ ಪತ್ರ ಸಲ್ಲಿಸಿ ಒತ್ತಾಯಿಸಿದರು. ಸರ್ಕಾರದ ಅಂಕಿ ಅಂಶಗಳ ಪ್ರಕಾರ, ಕಾರಂಜಾ ಯೋಜನೆಗೆ 1981ರಿಂದ 1986ರ ವರೆಗೆ ಒಟ್ಟು 21,217 ಎಕರೆ 36 ಗುಂಟೆ ಜಮೀನು ಸ್ವಾಧೀನಪಡಿಸಿಕೊಳ್ಳಲಾಗಿದೆ. ಸದರಿ ಒಟ್ಟು 15,597 ಎಕರೆಯಲ್ಲಿ ಕಾರಂಜಾ ಅಣೆಕಟ್ಟೆ, 5,242 ಎಕರೆ 4 ಗುಂಟೆ ಕಾಲುವೆಗಳ ನಿರ್ಮಾಣಕ್ಕಾಗಿ, 378 ಎಕರೆ 14 ಗುಂಟೆ ಜಮೀನು ಪುನರ್ ವಸತಿಗೆ ನಿಗದಿಪಡಿಸಲಾಗಿದೆ. ಸರ್ಕಾರ ಪ್ರತಿ ಎಕರೆಗೆ 3 ಸಾವಿರ ಪರಿಹಾರ ನಿಗದಿಪಡಿಸಿ ವಿತರಿಸಿದೆ. ಆದರೆ, ಇದನ್ನು ಪ್ರಶ್ನಿಸಿ, ರೈತರು ಹೆಚ್ಚಿನ ಪರಿಹಾರಕ್ಕೆ ನ್ಯಾಯಾಲಯದ ಮೊರೆ ಹೋಗಿದ್ದಾರೆ. ಪ್ರತಿ ಎಕರೆಗೆ 6ರಿಂದ 7,200 ನೀಡಬೇಕೆಂದು ನ್ಯಾಯಾಲಯ ಆದೇಶ ನೀಡಿದೆ.

## ವರ್ಷದ ಬಳಿಕ ಅದೇ ಸಂತ್ರಸ್ತೆ ಮೇಲೆ ರೇಪ್

• ಉದಯವಾಹಿನಿ, ಗದಗ:

ಕಂಪ್ಯೂಟರ್ ಕ್ಲಾಸ್‌ಗೆ ಹೋಗಿದ್ದ ಬಾಲಕಿಯನ್ನ ಪುಸಲಾಯಿಸಿ, ಅಪಹರಿಸಿ ಅತ್ಯಾಚಾರ ನಡೆಸಿರುವ ಪ್ರಕರಣ ಗದಗ ಜಿಲ್ಲೆ ಲಕ್ಷ್ಮೇಶ್ವರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ. 17 ವರ್ಷ 5 ತಿಂಗಳ ಬಾಲಕಿ ಮೇಲೆ ಅಲ್ಲಾಭಕ್ಷಿ ಕೊಪ್ಪದ ಎಂಬ ಆರೋಪಿ ಅತ್ಯಾಚಾರ ನಡೆಸಿದ್ದಾನೆ ಎಂಬ ಆರೋಪವಿದೆ. ಎರಡು ದಿನಗಳ ಹಿಂದೆ ನಡೆದ ಪ್ರಕರಣ ತಡವಾಗಿ ಬೆಳಕಿಗೆ ಬಂದಿದೆ. ಸಂತ್ರಸ್ತೆ ಮೇಲೆ ಆರೋಪಿ 2ನೇ ಬಾರಿಗೆ ಅತ್ಯಾಚಾರ ಎಸಗಿದ್ದಾಗಿ ಪ್ರಕರಣ ದಾಖಲಾಗಿದೆ.

ಈ ಹಿಂದೆ 2025 ರಲ್ಲಿ ಇದೆ ಬಾಲಕಿಯಿಂದ, ಇದೇ ಆರೋಪಿ ಮೇಲೆ ಶಿರಹಟ್ಟಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು. ಆಗ ಆರೋಪಿ ಅಲ್ಲಾಭಕ್ಷಿ ಪೋಕ್ಸೋ ಕೇಸ್ ಮೇಲೆ ಜೈಲು ಸೇರಿದ್ದ. ಜೈಲಿನಿಂದ ಹೊರಬಂದ ನಂತರ ಸೇಡು ತೊರಿಸಿಕೊಳ್ಳಲು ಆರೋಪಿಪಿ ಅದೇ ಸಂತ್ರಸ್ತೆ ಮೇಲೆ 2ನೇ ಬಾರಿ ಕೃತ್ಯ ಎಸಗಿದ್ದಾನೆ.

ಮೇ 23 ರಂದು ಬಾಲಕಿ ಲಕ್ಷ್ಮೇಶ್ವರ ಪಟ್ಟಣದಲ್ಲಿ ಕಂಪ್ಯೂಟರ್ ಕ್ಲಾಸ್ ಗೆ ಹೋಗುತ್ತಿದ್ದಳು, ಆಕೆಯನ್ನ ಹಿಂಬಾಲಿಸಿ ಪೋಸ್ಟ್ ಆಫೀಸ್ ಬಳಿ ಬಂದು ನಿಮ್ಮ ಅಣ್ಣ ಕರೆಯುತ್ತಿದ್ದಾನೆ ಬಾ ಎಂದು ಆರೋಪಿ ಅಲ್ಲಾಭಕ್ಷಿ ಹಾಗೂ ಆತನ ಸ್ನೇಹಿತ ಆಸೀಫ್ ನದಫ್ ಎಂಬ ಇಬ್ಬರು ಬಲವಂತವಾಗಿ ಗೂಡ್ಸ್ ವಾಹನದಲ್ಲಿ ಕರೆದೊಯ್ದಿದ್ದಾರೆ. ಲಕ್ಷ್ಮೇಶ್ವರ ಪಟ್ಟಣ ಹೊರವಲಯದ ಜಮೀನೊಂದರಲ್ಲಿ ಕರೆದೊಯ್ದು ಅಲ್ಲಾಭಕ್ಷಿ ಅತ್ಯಾಚಾರ ನಡೆಸಿದ್ದಾನೆ.





ಉದಯವಾಹಿನಿ ಚಿತ್ರ

ಸಂತ್ರಸ್ತೆ ಕುಟುಂಬಸ್ಥರಿಂದ ಅಲ್ಲಾಭಕ್ಷಿ ಹಾಗೂ ಆಸೀಫ್ ಎಂಬ ಇಬ್ಬರ ಮೇಲೆ ದೂರು ದಾಖಲಾಗಿತ್ತು. ಪ್ರಕರಣ ದಾಖಲಿಸಿಕೊಂಡಿದ್ದ ಲಕ್ಷ್ಮೇಶ್ವರ ಠಾಣೆ ಪೊಲೀಸರು ಆರೋಪಿಗಳನ್ನು ಬಂಧಿಸಿ, ವಿಚಾರಣೆ ನಡೆಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

# ಕಸದ ತಾಣಗಳೀಗ ಕಿರು ಉದ್ಯಾನ!

• ಉದಯವಾಹಿನಿ, ರಾಣೆಬೆನ್ನೂರು:

ವಾಣಿಜ್ಯ ನಗರಿಯ ಪ್ರಮುಖ ರಸ್ತೆಗಳು, ವೃತ್ತಗಳು, ವಿವಿಧ ಬಡಾವಣೆಗಳು ಹಾಗೂ ಮನೆಯ ಸಮೀಪದ ಓಣಿಗಳು ಹೀಗೆ ಎಲ್ಲೆಂದರಲ್ಲಿ ಕಸ ಎಸೆಯುವ ಪ್ರಮುಖ ಪ್ರದೇಶಗಳನ್ನು ಗುರುತಿಸಿರುವ ನಗರಸಭೆ ಅಲ್ಲಿ ಕಸ ಹಾಕುವುದನ್ನು ತಡೆಯಲು ಕಿರು ಉದ್ಯಾನಗಳ ನಿರ್ಮಾಣದ ಪ್ರಯೋಗಕ್ಕೆ ಮುಂದಾಗಿದೆ. ಇದಕ್ಕೆ 'ಕನಸಿನ ರಾಣೆಬೆನ್ನೂರು' ಜೊತೆಯಾಗಿದೆ. ಕಸ ಎಸೆಯುವ ಜಾಗದಲ್ಲಿ ಎಚ್ಚರಿಕೆಯ ಫಲಕವನ್ನು ನಗರಸಭೆ ಅಳವಡಿಸಿದ್ದರೂ ಜನ ಆ ಫಲಕದ ಎದುರೇ ಕಸ ಚೆಲ್ಲುತ್ತಿದ್ದಾರೆ. ನಿತ್ಯ ಮನೆ ಮನೆ ಕಸ ಸಂಗ್ರಹಿಸುವ ನಗರಸಭೆಯ ವಾಹನಗಳಲ್ಲಿ ಹಸಿ ಕಸ, ಒಣ ಕಸ ಸಂಗ್ರಹ ಕುರಿತು ಹಾಗೂ ಪರಿಸರ ಕಾಪಾಡುವ ಬಗ್ಗೆ ಜಾಗೃತಿ ಹಾಡುಗಳನ್ನು ಹಾಕಲಾಗುತ್ತದೆ.

ಜಾಗೃತಿ ಕಾರ್ಯಕ್ರಮ ನಡೆಸಲಾಗಿದೆ ಆದರೂ ಕಸ ತಂದು ಮೂಲೆಯಲ್ಲಿ ಸುರಿಯುವುದು ಬಿಟ್ಟಿಲ್ಲ. ತಾಂತ್ರಿಕ ಕಾರಣದಿಂದ ಒಂದು ದಿನ ಕಸದ ಗಾಡಿ ಬರಲಿಲ್ಲ ಎಂದರೆ ಸಾಕು, ರಾತ್ರಿ ಹೊತ್ತು ತ್ಯಾಜ್ಯ ತಂದು ರಸ್ತೆಯ ಬದಿಗೆ ಸುರಿಯುವುದು ಕಂಡು ಬರುತ್ತಿದೆ. ಕೆಲವು ಬಡಾವಣೆಗಳಲ್ಲಿ ದಿನವೂ ಮತ್ತು ಕೆಲ ಬಡಾವಣೆಗಳಲ್ಲಿ ಎರಡು ಮೂರು ದಿನಗಳಿಗೊಮ್ಮೆ ಕಸ ಸಂಗ್ರಹ ವಾಹನಗಳು ಬರುತ್ತಿವೆ. ಅಲ್ಲಿಯ ತನಕ ಕಾಯದೇ ಜನರು ಮನೆ ಸಮೀಪದ ರಸ್ತೆ, ಮೂಲೆ ಅಥವಾ ಖಾಲಿ ನಿವೇಶನಗಳಲ್ಲಿ ಕಸ ಹಾಕುವ ರೂಢಿ ಮಾಡಿಕೊಂಡಿದ್ದಾರೆ. 'ಕನಸಿನ ರಾಣೆಬೆನ್ನೂರು ತಂಡ' ಹಾಗೂ ವಿವಿಧ ಸಂಘ ಸಂಸ್ಥೆಗಳು ಪಟ್ಟಣದ ನಗರಸಭೆ ಸಿಬ್ಬಂದಿಯೊಂದಿಗೆ ಕೈಜೋಡಿಸಿ ನಾಲ್ಕೈದು ಕಡೆಗಳಲ್ಲಿ ಕಸ ಸುರಿಯುವ ಬ್ಲಾಕ್ ಸ್ಪಾಟ್‌ಗಳನ್ನು ಗುರುತಿಸಿದ್ದಾರೆ. ವಿನಾಯಕ ನಗರ ಗಣೇಶ ದೇವಸ್ಥಾನ, ಹೆಸ್ಕಾಂ ಗ್ರಿಡ್ ಆವರಣದ ಗೋಡೆ ಮೂಲೆ, ಮೇಡೇರಿ ಡಿವೈಡರ್ ರಸ್ತೆಯ ಲಯನ್ಸ್ ಸ್ಕೂಲ್ ಬಳಿ ವಾಹನ ನಿಲುಗಡೆ ಪ್ರದೇಶ, ಹೌಸಿಂಗ್ ಕಾಲೊನಿಯ ಸ್ವಾಮಿ ವಿವೇಕಾನಂದ ಸ್ಕೂಲ್ ಕಾಂಪೌಂಡ್ ಮತ್ತು ಅಶೋಕನಗರದ ಹಳೇ ಹೇಮಾ ಪಾಟೀಲ ಆಸ್ಪತ್ರೆಯ ಬಳಿ ಕಸದ ರಾಶಿ ಬೀಳುವ ಜಾಗಗಳನ್ನು ಸ್ವಚ್ಛಗೊಳಿಸಲಾಗಿದ್ದು, ಅವು ಈಗ 'ಕಿರು ಉದ್ಯಾನ' ವಾಗಿ ಮಾರ್ಪಟ್ಟಿವೆ' ಎಂದು ನಗರಸಭೆ ಮಾಜಿ ಸದಸ್ಯೆ ತ್ರಿವೇಣಿ ಪವಾರ, ನಗರಸಭೆಯ ಆರೋಗ್ಯ ನಿರೀಕ್ಷಕ ರಾಘವೇಂದ್ರ, ಗಾವಡೆ ಹಾಗೂ ಶೃತಿ ಎಂ.ತಿಳಿಸಿದ್ದಾರೆ. ನಗರದ ಮೇಡೇರಿ ಡಿವೈಡರ್ ರಸ್ತೆಯ ಬಳಿ ಲಯನ್ಸ್ ಸ್ಕೂಲ್ ಮತ್ತು ಸ್ವಾಮಿ ವಿವೇಕಾನಂದ ಸ್ಕೂಲ್ ಬಳಿಯ ಜಾಗವನ್ನು ಪೌರಕಾರ್ಮಿಕರಿಂದ ಸ್ವಚ್ಛಗೊಳಿಸಿ ಅಲ್ಲಿ ಇಟ್ಟಿಗೆಗಳಿಂದ ಕಿರು ಉದ್ಯಾನ ನಿರ್ಮಿಸಲಾಗಿದೆ. ಸಿಮೆಂಟ್ ಇಟ್ಟಿಗೆ, ಹಳೆ ಎಣ್ಣೆ ಡಬ್ಬಿ, ಕುಡಿಯುವ ನೀರಿನ ಕ್ಯಾನ್, ವಾಹನಗಳ ಹಳೆ ಟೈರ್‌ಗಳಿಗೆ ಬಣ್ಣ ಬಳಿದು ಅದರಲ್ಲಿ ಸಸಿಗಳನ್ನು ಬೆಳೆಸಲಾಗುತ್ತಿದೆ. ರಂಗೋಲಿ ಬಿಡಿಸಿ ಕಸ ಚೆಲ್ಲಬೇಡಿ ಎಂಬ ಎಚ್ಚರಿಕೆ ಫಲಕವನ್ನು ಅಳವಡಿಸಲಾಗಿದೆ. ಯಾವಾಗಲೂ ದುರ್ನಾತ ಬೀರುತ್ತಿದ್ದ ಈ ಜಾಗದಲ್ಲಿ ಈಗ ಕಿರು ಉದ್ಯಾನ ಕಂಗೊಳಿಸುತ್ತಿದೆ.





ಉದಯವಾಹಿನಿ ಚಿತ್ರ

## 'ಸೂರ್ಯಕಿರಣ' ಏರೋಬ್ಯಾಟಿಕ್ ತಂಡಕ್ಕೆ 30ರ ಸಂಭ್ರಮ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೀದರ್:

ವಾಯುಪಡೆಯ ಪ್ರತಿಷ್ಠಿತ 'ಸೂರ್ಯಕಿರಣ' ಏರೋಬ್ಯಾಟಿಕ್ ತಂಡ (ಎಸ್‌ಕೆಎಟಿ) ಈಗ 30ರ ಸಂಭ್ರಮದಲ್ಲಿದೆ. ಮೂರು ದಶಕಗಳಲ್ಲಿ ಈ ತಂಡದ ಕಾರ್ಯ ಹಾಗೂ ಸಾಧನೆ ಅನನ್ಯವಾಗಿದ್ದು, ವಾಯುಪಡೆಯ 'ರಾಯಭಾರಿ' ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಒಂಬತ್ತು ಸೂರ್ಯಕಿರಣ ವಿಮಾನಗಳ ಏರೋಬ್ಯಾಟಿಕ್ ತಂಡವು ಮೈನವಿರೇಳಿಸುವ ವೈಮಾನಿಕ ಪ್ರದರ್ಶನಕ್ಕೆ ಹೆಸರಾಗಿದೆ. ಕಣಿವೆ, ಸಮುದ್ರ ತೀರ ಸೇರಿದಂತೆ ಹಲವು ಪ್ರಮುಖ ಸ್ಥಳಗಳಲ್ಲಿ ತನ್ನ ವೃತ್ತಿಪರತೆ ಪ್ರದರ್ಶಿಸಿದ ಖ್ಯಾತಿ ಇದಕ್ಕಿದೆ. ಭಾರತದ ಪ್ರಮುಖ ನಗರಗಳು ಸೇರಿದಂತೆ ಚೀನಾ, ಶ್ರೀಲಂಕಾ, ಮ್ಯಾನ್ಮಾರ್, ಥೈಲ್ಯಾಂಡ್, ಸಿಂಗಪುರ, ಯುನೈಟೆಡ್ ಅರಬ್ ಎಮಿರೇಟ್ಸ್ ಸೇರಿದಂತೆ ಹಲವೆಡೆ ಸಾವಿರಾರು ಕಿ.ಮೀ ಕ್ರಮಿಸಿ, ಅತ್ಯುತ್ತಮ ಪ್ರದರ್ಶನ ನೀಡಿದೆ.

★ಏರೋಬ್ಯಾಟಿಕ್ ತಂಡ 1996ರ ಮೇ 27ರಂದು ಬೀದರ್ ವಾಯುಪಡೆ ತರಬೇತಿ ಕೇಂದ್ರದಲ್ಲಿ ಸ್ಥಾಪನೆಗೊಂಡಿತ್ತು. 1996ರ ಸೆಪ್ಟೆಂಬರ್‌ನಲ್ಲಿ ಕಿರಣ ಎಮ್.ಕೆ.-2 ಹೆಸರಿನ ವಿಮಾನಗಳ ಮೊಟ್ಟ ಮೊದಲ ಸಾರ್ವಜನಿಕ ವೈಮಾನಿಕ ಪ್ರದರ್ಶನ ತಮಿಳುನಾಡಿನ ಕೊಯಮತ್ತೂರಿನಲ್ಲಿ ನಡೆದಿತ್ತು.

ಇದಾದ ಬಳಿಕ ಹಲವೆಡೆ ಈ ಲೋಹದ ಹಕ್ಕಿಗಳು ಕರಾಮತ್ತು ತೋರಿದ್ದವು. 2015ರಲ್ಲಿ ಕಿರಣ ಎಮ್.ಕೆ.-2 ವಿಮಾನಗಳ ಜಾಗವನ್ನು ಕೆಂಪು-ಬಣ್ಣಗಳ 'ಹಾಕ್ ಎಮ್.ಕೆ.-132 ಜೆಟ್ ವಿಮಾನಗಳು ತುಂಬಿದವು. ತಂಡ ಈವರೆಗೆ 800ಕ್ಕೂ ಹೆಚ್ಚು ವೈಮಾನಿಕ ಪ್ರದರ್ಶನಗಳನ್ನು ನೀಡಿದೆ.

ಈ ವಿಮಾನಗಳ ತರಬೇತಿ ಬೀದರ್ ಆಕಾಶದಲ್ಲಿ ನಿತ್ಯ ಸಾಮಾನ್ಯ.

**ಸಂಕೀರ್ಣ ತರಬೇತಿ:** ಈ ತಂಡದ ಪೈಲಟ್‌ಗಳಿಗೆ ಅತ್ಯಂತ ಸಂಕೀರ್ಣ ತರಬೇತಿಗೆ ಒಳಪಡಿಸಲಾಗುತ್ತದೆ. ಜಗತ್ತಿನ ಅತ್ಯುತ್ತಮ ಪೈಲಟ್‌ಗಳನ್ನು ಕೊಟ್ಟಿರುವ ಈ ತಂಡವು ಈಗ 30ರ ಸಂಭ್ರಮಕ್ಕೆ ಸಿದ್ಧಗೊಂಡಿದೆ.

## ಜೋತು ಬಿದ್ದ ತಂತಿಗಳು; ಅಪಾಯಕಾರಿ ವಿದ್ಯುತ್ ಪರಿವರ್ತಕ

• ಉದಯವಾಹಿನಿ, ಚಿಕ್ಕಮಗಳೂರು:

ಮಳೆಗಾಲ ಸಮೀಪಿಸುತ್ತಿದ್ದು, ಜಿಲ್ಲೆಯಲ್ಲಿ ವಿದ್ಯುತ್ ಪರಿವರ್ತಕಗಳು ಮತ್ತು ಕಂಬಗಳ ಪೈಕಿ ಹಲವು ಅಪಾಯಕಾರಿ ಸ್ಥಿತಿಯಲ್ಲಿವೆ. ಕೈಗೆ ಎಟಕುವಷ್ಟು ಹತ್ತಿರದಲ್ಲೇ ಇರುವ ವಿದ್ಯುತ್ ಪರಿವರ್ತಕಗಳು ಅಪಾಯಕ್ಕೆ ಆಹ್ವಾನ ನೀಡುತ್ತಿವೆ. ಮುಖ್ಯರಸ್ತೆ, ಗಲ್ಲಿ ರಸ್ತೆಗಳ ಅಲ್ಲಲ್ಲಿ ಅಳವಡಿಸಿರುವ ವಿದ್ಯುತ್ ಪರಿವರ್ತಕಗಳ ಬಳಿ ಸ್ವಲ್ಪ ಎಚ್ಚರ ತಪ್ಪಿದರೂ ಅನಾಹುತ ಸಂಭವಿಸುವುದು ಖಚಿತ. ಸುರಕ್ಷತೆ ಇಲ್ಲದಿದ್ದರೂ ಈ ಸ್ಥಳಗಳಲ್ಲಿ ಅಪಾಯ ಲೆಕ್ಕಿಸದೆ ಜನ ಓಡಾಡುತ್ತಿದ್ದಾರೆ. ಮಳೆ ಸಂದರ್ಭದಲ್ಲಿ ವಿದ್ಯುತ್ ಪರಿವರ್ತಕಗಳಿಗೆ ಮರಗಳು, ಬಳ್ಳಿಗಳು ತಗುಲಿದರೆ ಪರಿವರ್ತಕಗಳು ಸುಟ್ಟು ಹೋಗುವ ಸಾಧ್ಯತೆ ಹೆಚ್ಚು. ಮಳೆಗಾಲಕ್ಕೆ ಮುನ್ನವೇ ಮೆಸ್ಕಾಂ ಸಿಬ್ಬಂದಿ ನಿರ್ವಹಣೆ ಮಾಡುವುದು ಸಾಮಾನ್ಯ. ಆದರೆ, ಈ ವರ್ಷ ಜೂನ್ ಸಮೀಪಿಸುತ್ತಿದ್ದು, ಇನ್ನೂ ಹಲವೆಡೆ ಅಪಾಯಕಾರಿ ಸ್ಥಿತಿಯಲ್ಲೇ ಉಳಿದುಕೊಂಡಿವೆ. ಕಡೂರಿನಲ್ಲಿ ಇತ್ತೀಚೆಗೆ ವಿದ್ಯುತ್ ತಂತಿ ತಗುಲಿ ರೈತ ಮೃತಪಟ್ಟಿದ್ದು, ಮಲೆನಾಡಿನಲ್ಲಿ ಮಳೆ ನಡುವೆ ರಸ್ತೆ ಬದಿಯ ವಿದ್ಯುತ್ ಪರಿವರ್ತಕ ಸುಟ್ಟು ಆತಂಕ ಸೃಷ್ಟಿಸಿತ್ತು. ಅವಘಡಗಳು ಸಂಭವಿಸುವ ಮುನ್ನ ಎಚ್ಚರ ವಹಿಸಬೇಕು ಎಂಬುದು ಸಾರ್ವಜನಿಕರ ಒತ್ತಾಯ. ಮಳೆಗಾಲಕ್ಕೂ ಮುನ್ನ ಮಾರ್ಗ ನಿರ್ವಹಣೆ ಕಾರ್ಯ ನಡೆಯುತ್ತಿದೆ. ಅದಕ್ಕಾಗಿ ಪ್ರತ್ಯೇಕ ಸಿಬ್ಬಂದಿಯನ್ನೂ ನಿಯೋಜನೆ ಮಾಡಲಾಗಿದೆ.

## ಅಗತೀರ್ಥದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಲ್ಬಣ

• ಉದಯವಾಹಿನಿ, ಹುಣಸಗಿ:



ಉದಯವಾಹಿನಿ ಚಿತ್ರ

ತಾಲ್ಲೂಕಿನಲ್ಲಿ ನಾರಾಯಣಪುರ ಎಡದಂಡೆ ಕಾಲುವೆಗೆ ಮಾರ್ಚ್ ಅಂತ್ಯದ ವರೆಗೂ ಕಾಲುವೆಗೆ ನೀರು ಹರಿಸಿದ್ದರಿಂದಾಗಿ ತಾಲ್ಲೂಕಿನ ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆ ಅಷ್ಟಾಗಿ ಇರಲಿಲ್ಲ. ನೀರು ಸ್ಥಗಿತವಾದ ಬಳಿಕ ಕುಡಿಯುವ ನೀರಿನ ಸಮಸ್ಯೆ ಎದುರಾಗುತ್ತಿದೆ.

ತಾಲ್ಲೂಕಿನ ಅಗ್ನಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅಗತೀರ್ಥ ಗ್ರಾಮದಲ್ಲಿ ಸುಮಾರು 400ಕ್ಕೂ ಅಧಿಕ ಮನೆಗಳಿದ್ದು, ಕಳೆದ ಒಂದು ತಿಂಗಳಿನಿಂದ ಕುಡಿಯುವ ನೀರಿನ ಸಮಸ್ಯೆ ಎದುರಾಗಿದ್ದು, ಇಂದಿಗೂ ಪರಿಹಾರವಾಗಿಲ್ಲ ಎಂದು ಗ್ರಾಮಸ್ಥರಾದ ರಾಮನಗೌಡ ಹೊಸಮನಿ, ಶಿವಣ್ಣ ಪೂಜಾರಿ ದೂರಿದ್ದಾರೆ. ಗ್ರಾಮದಲ್ಲಿ ಒಂದು ಕೊಳವೆ ಬಾವಿ ಇತ್ತು. ಕಾಲುವೆಗೆ ನೀರು ಸ್ಥಗಿತವಾದ ಬಳಿಕ ಈ ಕೊಳವೆ ಬಾವಿ ಬತ್ತಿ ಹೋಗಿದ್ದರಿಂದಾಗಿ ಗ್ರಾಮದಲ್ಲಿ ಹನಿ ನೀರಿಗೂ ಪರದಾಡುವಂಥಾಗಿದೆ. ನೀರು ಬೇಕೆಂದರೆ ನಿತ್ಯವೂ ಪಕ್ಕದ ಮೂರು ಕಿಮಿ ದೂರದಲ್ಲಿರುವ ಸದಬ ಹಾಗೂ ಅಗ್ನಿ ಗ್ರಾಮಕ್ಕೆ ತೆರಳುವುದು ನಮಗೆ ಅನಿವಾರ್ಯವಾಗಿದೆ. ಅಲ್ಲಿ ಹೋದರೂ ಅಲ್ಲಿನ ಗ್ರಾಮಸ್ಥರು ಕೊಳವೆಬಾವಿ ಹಾಳಾದರೇ ಏನು ಮಾಡುವುದು ಎನ್ನುವ ಬೈಗುಳ ಸಾಮಾನ್ಯವಾಗಿದೆ' ಎನ್ನುತ್ತಾರೆ ಮಹಿಳೆಯರಾದ ಮಾಳಮ್ಮ ದೊಡ್ಡಮನಿ, ಹಣಮವ್ವ ಕೋಳೂರ ಗ್ರಾಮಸ್ಥರು. 'ಈ ಕುರಿತು ಗ್ರಾಮ ಪಂಚಾಯಿತಿ ಅಧಿಕಾರಿಗಳಿಗೆ ಹೇಳಿದರೂ ಕೂಡಾ ಯಾವುದೇ ಸ್ಪಂದನೆ ಸಿಕ್ಕಿಲ್ಲ. ಒಬ್ಬರ ಮೇಲೆ ಒಬ್ಬರು ಹಾಕುತ್ತಿದ್ದಾರೆ' ಎಂದು ಮಹಾಂತಗೌಡ ಅಲಾಳ ಆರೋಪಿಸಿದರು. ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕೆ ಯಾವುದೇ ಹಣಕಾಸಿನ ತೊಂದರೆ ಇಲ್ಲ ಎಂಬ ಮಾತುಗಳು ಸರ್ಕಾರದಿಂದ ಕೇಳಿ ಬರುತ್ತವೆ.

ಹೀಗಾಗಿ ನಮ್ಮ ಗ್ರಾಮದ ಸಮಸ್ಯೆ ಪರಿಹರಿಸಲು ಹೊಸ ಕೊಳವೆ ಬಾವಿ ಕೊರಸಿ ಶಾಶ್ವತ ಸಮಸ್ಯೆ ಪರಿಹರಿಸಲಿ' ಎಂಬುದು ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷ ಸಿದ್ದಪ್ಪ ದೊಡ್ಡಮನಿ ಅವರ ಆಗ್ರಹವಾಗಿದೆ. ಗ್ರಾಮದಲ್ಲಿ ಖಾಸಗಿ ವ್ಯಕ್ತಿ ಮಡ್ಡಿಯವರ ಒಂದು ಕೊಳವೆ ಬಾವಿ ಇದೆ. ಆ ಬಾವಿ ಕೂಡಾ ನಿತ್ಯ ಗ್ರಾಮಕ್ಕೆ ಸರಬರಾಜು ಆಗುತ್ತಿರುವ ಪೈಪ್‌ಲೈನ್‌ಗೆ ಸಮೀಪದಲ್ಲಿಯೇ ಇದೆ. ಆದರೆ ಸೂಕ್ತ ವ್ಯವಸ್ಥೆ ಮಾಡುವಲ್ಲಿ ಅಧಿಕಾರಿಗಳು ಮುಂದಾಗುತ್ತಿಲ್ಲ' ಎಂದು ದೂರಿದರು.

# ಸಮಾಜ ಒಡೆಯುವ ಮಾತಿಗೆ ಸೊಪ್ಪು ಹಾಕಬೇಡಿ :ಡಾ.ಚನ್ನಸಿದ್ಧರಾಮ ಪಂಡಿತಾರಾಧ್ಯ

### ವೀರಶೈವ ಮತ್ತು ಲಿಂಗಾಯತ ಎರಡು ಸಮಾಜ ಒಂದೇ: ಪಟ್ಟಣದ ಹೊರವಲಯದಲ್ಲಿರುವ ರೇವಣಸಿದ್ದೇಶ್ವರ ದೇವಾಲಯದ: ಆದಿ ಜಗದ್ಗುರು ರೇಣುಕಾಚಾರ್ಯ ಜಯಂತಿ

• ಉದಯವಾಹಿನಿ, ಚಿಂಚೋಳಿ

ವೀರಶೈವ ಲಿಂಗಾಯತ ಎಂದು ಹೇಳಿಕೊಂಡು ಬರುವವರ ಮಾತಿಗೆ ಸೊಪ್ಪು ಹಾಕಬೇಡಿ, ವೀರಶೈವ ಮತ್ತು ಲಿಂಗಾಯತ ಎರಡು ಸಮಾಜ ಒಂದೇ ಎಂದು ಶ್ರೀಶೈಲ ಪೀಠದ ಜಗದ್ಗುರು ಡಾ.ಚನ್ನಸಿದ್ದರಾಮ ಪಂಡಿತಾರಾಧ್ಯ ಶಿವಾಚಾರ್ಯರು ಹೇಳಿದರು. ಪಟ್ಟಣದ ಹೊರವಲಯದಲ್ಲಿರುವ ರೇವಣಸಿದ್ದೇಶ್ವರ ದೇವಾಲಯದ ಪಾದಗಟ್ಟಿ ಆವರಣದಲ್ಲಿ ಆದಿ ಜಗದ್ಗುರು ರೇಣುಕಾಚಾರ್ಯ ಜಯಂತಿ, ಪಂಚಚಾರ್ಯರ ಯುಗಮಾನೋತ್ಸವ ಹಾಗೂ ಮಹಾತ್ಮಾ ಬಸವೇಶ್ವರ ಜಯಂತಿ ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದರು.

ಪಂಚಪೀಠ ಪರಂಪರೆ ಮತ್ತು ಮಹಾತ್ಮಾ ಬಸವೇಶ್ವರ ಪೀಠದವರು ಕೂಡಿ ಚರ್ಚಿಸಿದರೆ ಎರಡು ಪೀಠಗಳ ಪರಂಪರೆ ಒಂದೇಯಾಗಿವೆ, ಆದರೆ ಬಸವೇಶ್ವರರು ಎಲ್ಲಿಯಾದರೂ ಲಿಂಗಾಯತ ಸಮಾಜದ ಸಂಸ್ಥಾಪಕ ನಾನೇ ಎಂದು ಎಲ್ಲಿಯೂ ಹೇಳಿಲ್ಲ, ವೀರಶೈವ ಮತ್ತು ಲಿಂಗಾಯತ ಸಮಾಜದ ಸಂಸ್ಥಾಪಕರು ರೇಣುಕಾಚಾರ್ಯರು ಆದರೆ ಸಮಾಜ ಪಸರಿಸಿದವರು





ಉದಯವಾಹಿನಿ ಚಿತ್ರ

ಧರ್ಮ ಪ್ರಚಾರ ಮಾಡಿದವರು ಮಹಾತ್ಮಾ ಬಸವೇಶ್ವರರು ಎರಡು ಸಮಾಜದ ಪರಂಪರೆ ಒಂದೇಯಾಗಿದೆ.

**ವೀರಶೈವ ಮತ್ತು ಲಿಂಗಾಯತ**

ಸಿದ್ದಗಂಗಾ ಮಠದ ಪೂಜ್ಯರು ಸಹ ಪತ್ರ ಬರೆದು ವೀರಶೈವ ಮತ್ತು ಲಿಂಗಾಯತ ಎರಡು ಒಂದೇವೆಂದು ಹೇಳಿದ್ದಾರೆ, ಬೇರೆ ಬೇರೆ ಎಂದು ಕೆಲವರು ಹೇಳಿ ಸಮಾಜ ಒಡೆಯುವ ಕೆಲಸ ಕೆಲ ರಾಜಕಾರಣಿಗಳು ಮಾಡಿ ತಮ್ಮ ಬ್ಯಾಳೆ ಬೆಳೆಸಿಕೊಳ್ಳುತ್ತಿದ್ದು ಅಂಥವರ ಮಾತಿಗೆ ಸೊಪ್ಪು ಹಾಕಬೇಡಿ, ಎಲ್ಲಿ ಶ್ರದ್ಧೆ ಭಕ್ತಿ ಇಲುತ್ತೆ ಅಲ್ಲಿ ಪವಾಡಗಳನ್ನು ನಡೆಯುತ್ತವೆ, ಲಿಂಗದಿಂದ ಹೇಗೆ ಹುಟ್ಟಿದ ಅಂದು ಕೇಳಿದರೆ ಮತ್ತೊಬ್ಬ ಗುಡಿಸಿಲಿನಲ್ಲಿ 1.96ಲಕ್ಷ ಜನ ಹೇಗೆ ಉಳಿದುಕೊಂಡರೂ ಎಂದು ಪ್ರಶ್ನೆ ಉದ್ಭವಾಗುತ್ತದೆ ಹಾಗಾಗಿ ವೀರಶೈವ ಲಿಂಗಾಯತ ಎರಡು ಒಂದೇ ಗೋಂದಲ ಹುಟ್ಟಿಸಬೇಡಿ, ಬಸವೇಶ್ವರರ ಮತ್ತು ರೇಣುಕಾಚಾರ್ಯ ಆದರ್ಶ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವಂತೆ ಕರೆ ನೀಡಿದರು. ಮಾಜಿ ಶಾಸಕ ರಾಜಕುಮಾರ ಪಾಟೀಲ ತೇಲ್ಕೂರ ಮಾತನಾಡಿ ಆದಿ ಜಗದ್ಗುರು ರೇಣುಕಾಚಾರ್ಯ, ಪಂಚಚಾರ್ಯರ ಯುಗಮಾನೋತ್ಸವ ಮತ್ತು ಬಸವೇಶ್ವರ ಜಯಂತಿ ಮೂರು ಕಾರ್ಯಕ್ರಮ ಮಾಡಿದ್ದು ಜಿಲ್ಲೆಯಲ್ಲಿಯೇ ಪ್ರಥಮವಾಗಿದೆ, ವೀರಶೈವ ಮತ್ತು ಲಿಂಗಾಯತ ಎರಡು ಒಂದೇ ಸಮಾಜವಾಗಿದ್ದು ಕೆಲವರು ಒಡೆಯುವ ಕೆಲಸ ಕುತಂತ್ರ ಮಾಡುತ್ತಿದ್ದಾರೆ ಅಂಥವರನ್ನು ದೂರ ಇಡಬೇಕು ಎಂದರು.

ಕಲಬುರ್ಗಿ ಮಾಜಿ ಸಂಸದ ಡಾ. ಉಮೇಶ ಜಾಧವ ಮಾತನಾಡಿ ಸನಾತನ ಧರ್ಮ ಕೆಲವರು ನಾಶ ಮಾಡಲು ಹೊರಟಿದ್ದು ಸನಾತನ ಧರ್ಮ ನಾಶ ಮಾಡಲು ಯಾರಿಂದಲೂ ಸಾಧ್ಯವಿಲ್ಲ, ಚಿಂಚೋಳಿ ಕ್ಷೇತ್ರ ಅತ್ಯಂತ ಹಿಂದುಳಿದ ಕ್ಷೇತ್ರವಾಗಿದ್ದು ಅಭಿವೃದ್ಧಿಗಾಗಿ ಅನೇಕ ಕೆಲಸ ಮಾಡಿದ್ದು ಸಕ್ಕರೆ ಕಾರ್ಖಾನೆ ನಿರ್ಮಿಸಿದ್ದೇನೆ, ರಟಕಲ ರೇವಣಸಿದ್ದೇಶ್ವರ ಮೂರ್ತಿ ಸ್ಥಾಪನೆ ಮಾಡಿದ್ದೇನೆ, ಮತ್ತು ರೇಣುಕಾಚಾರ್ಯ ಜಯಂತಿ ಸರ್ಕಾರದಿಂದ ಆಚರಣೆ ಮಾಡುವಂತೆ ಬಿಜೆಪಿ ಸರ್ಕಾರ ಮುಖ್ಯಮಂತ್ರಿ ಬಸವರಾಜ ಬೋಮ್ಮಾಯಿ ಇರುವಾಗ ನಾನೇ ಮೊಟ್ಟಮೊದಲು ಮನವಿ ಸಲ್ಲಿಸಿದ್ದೇನೆ ಎಂದರು. ರೇಣುಕಾಚಾರ್ಯ ಜಯಂತ್ಯೋತ್ಸವ ಸಮಿತಿ ಅಧ್ಯಕ್ಷ ಸಂಗಯ್ಯಸ್ವಾಮಿ ಅಣವಾರ ಸ್ವಾಗತಿಸಿದರು, ಶಿವರುದ್ರಯ್ಯ ಶಾಸ್ತ್ರಿ ನಿರೂಪಿಸಿದರು, ಗೌರವಾಧ್ಯಕ್ಷ ವೀರಣ್ಣ ಗಂಗಾಣಿ ವಂದಿಸಿದರು.

ನಿಡಗುಂದಾ ಕಂಚಾಳಕುಂಟಿ ನಂದೀಶ್ವರ ಮಠದ ಪರಮ ಪೂಜ್ಯ ಷ.ಬ್ರ.ಕರುಣೇಶ್ವರ ಶಿವಾಚಾರ್ಯರು, ಮಲ್ಲಿಕಾರ್ಜುನ ಉಡುಪಿ, ಐನಾಪೂರ ಸಿದ್ದಲಿಂಗೇಶ್ವರ ಹೀರೆಮಠದ ಷ.ಬ್ರ. ಉಪಮನ್ಯು ಶಿವಾಚಾರ್ಯರು ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಚಂದನಕೇರಾದ ಷ.ಬ್ರ.ಅಭಿನವ ರಾಚೋಟೇಶ್ವರ ಶಿವಾಚಾರ್ಯರು, ಷ.ಬ್ರ.ವಿಜಯ ಮಹಾತೇಶ್ವರ ಶಿವಾಚಾರ್ಯರು, ನರನಾಳದ ಷ.ಬ್ರ.ಶಿವಕುಮಾರ ಶಿವಾಚಾರ್ಯರು, ಜಿಪಂ.ಮಾಜಿ ಅಧ್ಯಕ್ಷ ದೀಪಕನಾಗ್ ಪುಣ್ಯಶೇಟ್ಟಿ, ಜವಾಹರ್ ಬಾಲಭವನ ರಾಜ್ಯ ಉಪಾಧ್ಯಕ್ಷ ಅನೀಲ ದೇವೀಂದ್ರಪ್ಪ ಜಮಾದಾರ, ಶಾರದಾಬಾಯಿ ಸುಭಾಷ್ ರಾಠೋಡ, ಬಾಬುರಾವ ಪಾಟೀಲ, ಬಸವರಾಜ ಮಾಲಿ, ವಿಜಯಕುಮಾರ ಚೆಂಗಟಾ, ರಾಜಶೇಖರ ನಿಲಂಗಿ, ಗುಂಡೆರಾವ ಮುಡಬಿ, ಶರಣುಪಾಟೀಲ್ ಮೋತಕಪಳ್ಳಿ, ಮುಕುಂದ ದೇಶಪಾಂಡೆ, ವೀರಶೇಟ್ಟಿ ಪಾಟೀಲ, ಏಕನಾಥ, ರತ್ನಾಕರ್ ಸ್ವಾಮಿ, ಸುರೇಶ ದೇಶಪಾಂಡೆ, ಸಂತೋಷ ಕಡಗದ ಅನೇಕರಿದ್ದರು.

**ಕಾಯಕ ರತ್ನ ಪ್ರಶಸ್ತಿ ಪ್ರದಾನ**

ಶರಣಪ್ಪ ಯಾಲಾಲ್ ಬೆನಕೆಪಳ್ಳಿ, ಗುರುಪಾದಸ್ವಾಮಿ ಎಸ್. ಕೋಡ್ಲಿ, ವೆಂಕಟರಾಮರೆಡ್ಡಿ ಪಾಟೀಲ್ ಕಲ್ಲೂರ ರೋಡ, ಡಾ.ಶಿವರಾಜ ಸಜ್ಜನಶೆಟ್ಟಿ, ಡಾ.ಬಸವೇಶ ವೈಜನಾಥ ಪಾಟೀಲ, ರಾಜಶೇಖರ ನಿಪ್ಪಾಣಿ, ರಾಜೇಂದ್ರ ಪಾಟೀಲ, ರಾಮನಗೌಡ ಸೇರಿದಂತೆ ಕಾಯಕ ರತ್ನ 2026ನೇ ಪ್ರಶಸ್ತಿ ಶ್ರೀಶೈಲ ಜಗದ್ಗುರು ಪ್ರಧಾನ ಮಾಡಿದರು.